ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 95
29–9–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 95

### ಅತ್ಯಾಚಾರ, ವಂಚನೆ ಪ್ರಕರಣ;

## ಡಿಎನ್‌ಎ ಪರೀಕ್ಷೆಯಲ್ಲಿ ಸಿಕ್ಕಿಬಿದ್ದ ಪುತ್ತೂರು ಬಿಜೆಪಿ ನಾಯಕನ ಪುತ್ರ



**ಪುತ್ತೂರು:** ಮದುವೆಯಾಗುವುದಾಗಿ ನಂಬಿಸಿ ಅತ್ಯಾಚಾರ ಎಸಗಿ ಗರ್ಭಿಣಿಯಾದ ಬಳಿಕ ವಂಚಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ, ಇದೀಗ ಡಿಎನ್‌ಎ ಪರೀಕ್ಷೆಯ ವರದಿ ಲಭ್ಯವಾಗಿದ್ದು, ಬಿಜೆಪಿ ನಾಯಕ ಮತ್ತು ಪುತ್ತೂರು ನಗರ ಪುರಸಭೆ ಸದಸ್ಯ ಪಿಜಿ ಜಗನ್ನಿವಾಸ್ ರಾವ್ ಅವರ ಪುತ್ರ ಕೃಷ್ಣ ಜೆ ರಾವ್ ಅವರೇ ಮಗುವಿನ ತಂದೆ ಎಂಬುದು ದೃಢಪಟ್ಟಿದೆ ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ.

ಎಂಜಿನಿಯರಿಂಗ್ ವಿದ್ಯಾರ್ಥಿಯಾಗಿರುವ ಕೃಷ್ಣ ರಾವ್, ಮದುವೆಯಾಗುವುದಾಗಿ ಭರವಸೆ ನೀಡಿ ಮಾಜಿ ಸಹಪಾಠಿ ಮೇಲೆ 'ಲೈಂಗಿಕ ದೌರ್ಜನ್ಯ' ಎಸಗಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

ಈ ವರ್ಷ ಜೂನ್ 28 ರಂದು ಯುವತಿ ಮಗುವಿಗೆ ಜನ್ಮ ನೀಡಿದ್ದರು.

ಪ್ರಕರಣವು ವಿಚಾರಣೆಗೆ ಹೋದಾಗ ಡಿಎನ್‌ಎ ದೃಢೀಕರಣವು ನಿರ್ಣಾಯಕ ಸಾಕ್ಷಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

### ಕಲಬುರಗಿ: ಕೃಷ್ಣಾ– ಭೀಮಾ ನದಿ ತೀರದಲ್ಲಿ ಪ್ರವಾಹ

## ತುರ್ತು ಪರಿಹಾರ ಕಾರ್ಯ ಕೈಗೊಳ್ಳುವಂತೆ ಸಿಎಂ ಸೂಚನೆ

**ಬೆಂಗಳೂರು:** ಕಲಬುರಗಿ, ಬೀದರ್, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಕೃಷ್ಣಾ ಮತ್ತು ಭೀಮಾ ನದಿಗಳ ತೀರದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ಕೂಡಲೇ ರಕ್ಷಣಾ ಮತ್ತು ಪರಿಹಾರ ಕಾರ್ಯ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಭಾನುವಾರ ಉನ್ನತ ಅಧಿಕಾರಿಗಳಿಗೆ ಸೂಚನೆ ನೀಡಿ–ದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಯಿಂದಾಗಿ ಮತ್ತು ಮಹಾರಾಷ್ಟ್ರದ ಉಜನಿ ಮತ್ತು ನೀರಾ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದ ನೀರನ್ನು ಬಿಡುಗಡೆ ಮಾಡುತ್ತಿರುವುದರಿಂದ ಬೆಣ್ಣೆಥೋರಾ ಸೇರಿದಂತೆ ಹಲವಾರು ತಗ್ಗು ಪ್ರದೇಶದ ಹಳ್ಳಿಗಳಲ್ಲಿ ನೀರಿನ ಮಟ್ಟ ಏರಿಕೆಯಾಗುವ ಅಪಾಯಕ್ಕೆ ಸಿಲುಕಿವೆ.



ನೆರೆ ಪೀಡಿತ ಪ್ರದೇಶಗಳಲ್ಲಿ ಕಟ್ಟುನಿಟ್ಟಿನ ನಿಗಾ ವಹಿಸಲು ಮತ್ತು ರಕ್ಷಣಾ ಹಾಗೂ ಪರಿಹಾರ ಕಾರ್ಯದ ಮೇಲುಸ್ತುವಾರಿ ವಹಿಸುವಂತೆ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತು ಕಲಬುರಗಿ ಜಿಲ್ಲಾಧಿಕಾರಿಗೆ ಮುಖ್ಯಮಂತ್ರಿ ನಿರ್ದೇಶನ ನೀಡಿದ್ದಾರೆ.

ಪ್ರತಿಕ್ರಿಯೆ ನೇರ ಮತ್ತು ವೈಯಕ್ತಿಕವಾಗಿರಬೇಕು ಎಂದು ಒತ್ತಿ ಹೇಳಿದ ಅವರು, ಉತ್ತರ ಕರ್ನಾಟಕದ ನಾಲ್ಕು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಿಇಒ) ಪ್ರವಾಹ ಪೀಡಿತ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ, ತುರ್ತು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

### 17 ಮಹಿಳೆಯರಿಗೆ ಲೈಂಗಿಕ ಕಿರುಕುಳ ಆರೋಪ

## ಸ್ವಯಂ ಘೋಷಿತ ದೇವ ಮಾನವ ಚೈತನ್ಯಾನಂದ ಸರಸ್ವತಿ ಬಂಧನ

**ಲಕ್ನೋ:** 17 ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿದ್ದ ಸ್ವಾಮಿ ಚೈತನ್ಯಾನಂದ ಸರಸ್ವತಿ ಅಲಿಯಾಸ್ ಪಾರ್ಥ ಸಾರಥಿಯನ್ನು ಉತ್ತರ ಪ್ರದೇಶದ ಆಗ್ರಾದಲ್ಲಿ ಪೊಲೀಸರು ಬಂಧಿಸಿದ್ದಾರೆ.



ಚೈತನ್ಯಾನಂದ ಸರಸ್ವತಿ ವಿರುದ್ಧ ವಿದ್ಯಾರ್ಥಿನಿಯರಿಗೆ ಅಶ್ಲೀಲ ಸಂದೇಶ, ಬಲವಂತದ ದೈಹಿಕ ಸಂಪರ್ಕ ನಡೆಸಿದ ಆರೋಪಗಳಿವೆ. ದೆಹಲಿಯ ಶಾರದಾ ಇನ್ಸ್ಟಿಟ್ಯೂಟ್ ಆಫ್ ಇಂಡಿಯನ್ ಮ್ಯಾನೇಜ್ಮೆಂಟ್‌ನ ನಿರ್ವಹಣಾ ಸಮಿತಿಯ ಸದಸ್ಯರಾಗಿರುವ ಆರೋಪಿಯು ಈ ಪ್ರಕರಣ ಬೆಳಕಿಗೆ ಬಂದ ಬಳಿಕ ತಲೆಮರೆಸಿಕೊಂಡಿದ್ದರು. ಇವರ ವಿರುದ್ಧ 2009 ಮತ್ತು 2016 ರಲ್ಲಿ ಸಹ ಎರಡು ಲೈಂಗಿಕ ಕಿರುಕುಳದ ದೂರು ದಾಖಲಾಗಿದ್ದವು.

ಆರ್ಥಿಕವಾಗಿ ದುರ್ಬಲ ವರ್ಗಗಳ ವಿಭಾಗದಲ್ಲಿ ವಿದ್ಯಾರ್ಥಿವೇತನದೊಂದಿಗೆ ಸ್ನಾತಕೋತ್ತರ ನಿರ್ವಹಣಾ ಡಿಪ್ಲೊಮಾ ಕೋರ್ಸ್‌ಗಳನ್ನು ಕಲಿಯುತ್ತಿರುವ ವಿದ್ಯಾರ್ಥಿನಿಯರನ್ನು ಗುರಿಯಾಗಿಸಿ, ವಿದೇಶ ಪ್ರವಾಸದ ಆಸೆ ತೋರಿಸಿ ಕಿರುಕುಳ ನೀಡಿದ್ದಾರೆ. ಅದಕ್ಕೆ ಕಾಲೇಜಿನ ಪ್ರಾಧ್ಯಪಕರು, ಹಾಸ್ಟೆಲ್ ವಾರ್ಡನ್‌ಗಳು ಸಾಥ್ ನೀಡಿದ್ದಾರೆ ಎಂದು ವಿದ್ಯಾರ್ಥಿನಿಯರು ಆರೋಪಿಸಿದ್ದರು.

ಮಹಿಳಾ ಹಾಸ್ಟೆಲ್‌ನಲ್ಲಿ ರಹಸ್ಯವಾಗಿ ಕ್ಯಾಮೆರಾಗಳನ್ನು ಅಳವಡಿಸಿದ್ದರು ಎಂದು ಆರೋಪಿಸಲಾಗಿದೆ.

ಈ ಬಗ್ಗೆ ಆರೋಪಗಳು ಹೊರಬಿದ್ದ ನಂತರ, ಆಶ್ರಮದ ಆಡಳಿತ ಮಂಡಳಿ ಚೈತನ್ಯಾನಂದರನ್ನು ಅವರ ಹುದ್ದೆಯಿಂದ ಹೊರಹಾಕಿತ್ತು.


## ಇಂದು ಸ್ವಯಂ ಪ್ರೇರಿತ ರಕ್ತದಾನ ಶಿಬಿರ

**ದಾವಣಗೆರೆ:** ಎಆರ್ ಜಿ ಕಲೆ ಮತ್ತು ವಾಣಿಜ್ಯ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರದಿಂದ ಯುವ ರೆಡ್ ಕ್ರಾಸ್ ಘಟಕ, ರಾಷ್ಟ್ರೀಯ ಸೇವಾ ಯೋಜನೆ, ಎನ್.ಸಿ.ಸಿ. ರೋವರ್ಸ್ ಅಂಡ್ ರೇಂಜರ್ಸ್, ಎಸ್.ಎಸ್. ಕೇರ್ ಟ್ರಸ್ಟ್ ಸ್ಟೂಡೆಂಟ್ಸ್ ವಿಂಗ್ ಮತ್ತು ಹಿರಿಯ ವಿದ್ಯಾರ್ಥಿಗಳ ಸಂಘದ ಸಹಯೋಗದಲ್ಲಿ ಬಾಪೂಜಿ ವಿದ್ಯಾಸಂಸ್ಥೆಯ ಜಂಟಿ ಗೌರವ ಕಾರ್ಯದರ್ಶಿಗಳಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರ 58ನೇ ಜನ್ಮದಿನಾಚರಣೆ ಪ್ರಯುಕ್ತ 'ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಸೆ.29ರಂದು ಬೆಳಿಗ್ಗೆ 11 ಗಂಟೆಗೆ ಕಾಲೇಜಿನ ವಾಚನಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಬಿಇಎ ಆಡಳಿತ ವಿಭಾಗದ ನಿರ್ದೇಶಕ ಡಾ. ಬಕ್ಕೇಶ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ರಾಜ್ಯ ವಿಶ್ವವಿದ್ಯಾನಿಲಯಗಳ ಫೆಡರೇಷನ್ ಮತ್ತು ಕಾಲೇಜು ಉಪನ್ಯಾಸಕರ ಅಸೋಸಿಯೇಷನ್ ನಿಕಟಪೂರ್ವ ಅಧ್ಯಕ್ಷ ಪ್ರೊ. ಸಿ.ಹೆಚ್. ಮುರುಗೇಂದ್ರಪ್ಪ ಮುಖ್ಯ ಅತಿಥಿಯಾಗಿ, ಎಸ್ ಎಸ್ ಐಎಂಎಸ್ ನ ಪ್ರಾಂಶುಪಾಲ ಡಾ. ಬಿ.ಎಸ್. ಪ್ರಸಾದ್, ಮೆಡಿಕಲ್ ನಿರ್ದೇಶಕ ಡಾ. ಅರುಣಕುಮಾರ್ ಅಜ್ಜಪ್ಪ, ಪ್ಯಾಥಲಜಿ ಮುಖ್ಯಸ್ಥರಾದ ಡಾ. ಪಿ. ಶಶಿಕಲಾ, ಸಹಾಯಕ ಪ್ರಾಧ್ಯಾಪಕಿ ಡಾ. ಮೀನಾಕ್ಷಿ ಎನ್ ನಿನಾಲೆ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕಾಲೇಜಿನ ಪ್ರಾಂಶುಪಾಲ ಡಾ. ಜಿ.ಬಿ. ಬೋರಯ್ಯ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರೊ. ಪಿ ರಶ್ಮಿ, ಪ್ರೊ. ಎಲ್.ಎನ್. ಪರಶುರಾಮ್, ಡಾ. ತಿಪ್ಪೇಸ್ವಾಮಿ, ಪ್ರೊ. ಜಿ. ಆನಂದ್, ಡಾ. ಚಮನ್ ಸಾಬ್, ರಮೇಶ್ ಪೂಜಾರ್ ಉಪಸ್ಥಿತರಿರುವರು.ನೀರನ್ನು ಹೊರಹಾಕುತ್ತಲೇ ಇರುವುದರಿಂದ, ಮೇಲ್ಭಾಗದ ಜಲಾನಯನ ಪ್ರದೇಶಗಳಲ್ಲಿ ಮಳೆ ಮುಂದುವರಿದರೆ ಬಿಕ್ಕಟ್ಟು ಉಲ್ಬಣಗೊಳ್ಳಬಹುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

## ಹೊಸ ಸೂಪರ್‌ಫಾಸ್ಟ್ ರೈಲಿಗೆ ಕೇಂದ್ರ ಅನುಮೋದನೆ

ಬೆಂಗಳೂರು ಮತ್ತು ಮುಂಬೈ ನಡುವೆ ಹೊಸ ಸೂಪರ್‌ಫಾಸ್ಟ್ ರೈಲಿಗೆ ಕೇಂದ್ರ ರೈಲ್ವೆ ಸಚಿವಾಲಯ ಅನುಮೋದನೆ ನೀಡಿದೆ ಎಂದು ಸಂಸದ ತೇಜಸ್ವಿ ಸೂರ್ಯ ಮಾಹಿತಿ ನೀಡಿದ್ದಾರೆ. ಈ ಅನುಮೋದನೆಯಿಂದ ಎರಡೂ ನಗರಗಳ ನಾಗರಿಕರ 30 ವರ್ಷಗಳ ಬೇಡಿಕೆ ಈಡೇರುತ್ತದೆ.



ಬೆಂಗಳೂರು ಮತ್ತು ಮುಂಬೈ ಭಾರತದ ಎರಡು ಪ್ರಮುಖ ಆರ್ಥಿಕ ಕೇಂದ್ರಗಳಾಗಿದ್ದರೂ, ಈ ಎರಡೂ ನಗರಗಳು ಕೇವಲ ಒಂದೇ ಒಂದು ರೈಲಿನಿಂದ ಸಂಪರ್ಕ ಹೊಂದಿತ್ತು. ಉದ್ಯಾನ ಎಕ್ಸ್‌ಪ್ರೆಸ್ ಮಾತ್ರ ಓಡಾಡುತ್ತಿದ್ದು ಇದು 24 ಗಂಟೆಗಳಿಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತಿತ್ತು. ಇದು 30 ವರ್ಷಗಳಿಂದ ಬಾಕಿ ಉಳಿದಿದ್ದ ಬೇಡಿಕೆಯಾಗಿದೆ. ಕಳೆದ ವರ್ಷವೊಂದರಲ್ಲೇ 26 ಲಕ್ಷಕ್ಕೂ ಹೆಚ್ಚು ಜನರು ಈ ಎರಡು ನಗರಗಳ ನಡುವೆ ವಿಮಾನದಲ್ಲಿ ಪ್ರಯಾಣಿಸಿದ್ದಾರೆ ಎಂದು ತೇಜಸ್ವಿ ಸೂರ್ಯ ಹೇಳಿದರು.

## 'ಭರಿಸಲಾಗದ ನಷ್ಟ'; ಮೃತರ ಕುಟುಂಬಗಳಿಗೆ ತಲಾ ರೂ.20 ಲಕ್ಷ ಪರಿಹಾರ ಘೋಷಿಸಿದ ನಟ ವಿಜಯ್



**ನವದೆಹಲಿ:** ತಮಿಳುನಾಡಿನ ಕರೂರಿನಲ್ಲಿ ನಿನ್ನೆ ಸಂಜೆ ನಡೆದ ರ‍್ಯಾಲಿಯಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ಬಲಿಯಾದ 39 ಜನರ ಕುಟುಂಬಗಳಿಗೆ ನಟ–ರಾಜಕಾರಣಿ ವಿಜಯ್ ತಲಾ 20 ಲಕ್ಷ ರೂ. ಪರಿಹಾರವನ್ನು ಘೋಷಿಸಿದ್ದಾರೆ. ಅಲ್ಲದೆ, ದುರಂತದಲ್ಲಿ ಗಾಯಗೊಂಡ ಸುಮಾರು 100 ಜನರಿಗೆ ತಮ್ಮ ಪಕ್ಷವು ತಲಾ 2 ಲಕ್ಷ ರೂ.ಗಳನ್ನು ನೀಡಲಿದೆ ಎಂದು ಟಿವಿಕೆ ಮುಖ್ಯಸ್ಥರು ತಿಳಿಸಿದ್ದಾರೆ.

ಈ ಕುರಿತು ಎಕ್ಸ್ ಖಾತೆಯಲ್ಲಿನ ಪೋಸ್ಟ್‌ನಲ್ಲಿ, ತಾನು ದುಃಖದಿಂದ ಮುಳುಗಿದ್ದೇನೆ. ನನ್ನ ಹೃದಯ ಅನುಭವಿಸುತ್ತಿರುವ ನೋವನ್ನು ವ್ಯಕ್ತಪಡಿಸಲು ಪದಗಳೇ ಸಾಲುತ್ತಿಲ್ಲ. ನನ್ನ ಕಣ್ಣುಗಳು ಮತ್ತು ಮನಸ್ಸು ದುಃಖದಿಂದ ಆವೃತವಾಗಿವೆ. ನಾನು ಭೇಟಿಯಾದ ನಿಮ್ಮೆಲ್ಲರ ಮುಖಗಳು ನನ್ನ ಮನಸ್ಸಿನಲ್ಲಿ ಮಿನುಗುತ್ತಲೇ ಇರುತ್ತವೆ. ಪ್ರೀತಿ ಮತ್ತು ಕಾಳಜಿಯನ್ನು ತೋರಿಸುವ ನನ್ನ ಪ್ರೀತಿಪಾತ್ರರ ಬಗ್ಗೆ ಹೆಚ್ಚು ಯೋಚಿಸುತ್ತಿದ್ದಂತೆ, ನನ್ನ ಹೃದಯ ಭಾರವಾಗುತ್ತದೆ' ಎಂದು ಅವರು ಹೇಳಿದರು.

ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡು ದುಃಖಿಸುತ್ತಿರುವ ನಿಮಗೆ ನೋವಿನೊಂದಿಗೆ ನನ್ನ ಆಳವಾದ ಸಂತಾಪವನ್ನು ವ್ಯಕ್ತಪಡಿಸುತ್ತಾ, ನಾನು ನಿಮ್ಮ ಹೃದಯಗಳಿಗೆ ಹತ್ತಿರವಾಗಿ ನಿಂತು ಈ ಅಪಾರ ದುಃಖವನ್ನು ಹಂಚಿಕೊಳ್ಳುತ್ತೇನೆ.

ಇದು ನಿಜಕ್ಕೂ ನಮಗೆ ಸರಿಪಡಿಸಲಾಗದ ನಷ್ಟ. ಯಾರು ಸಾಂತ್ವನದ ಮಾತುಗಳನ್ನು ಹೇಳಿದರೂ, ನಮ್ಮ ಪ್ರೀತಿಪಾತ್ರರ ನಷ್ಟ ಅಸಹನೀಯ. ಆದರೂ, ನಿಮ್ಮ ಕುಟುಂಬದ ಸದಸ್ಯನಾಗಿ, ಪ್ರೀತಿಪಾತ್ರರನ್ನು ಕಳೆದುಕೊಂಡ ಪ್ರತಿ ಕುಟುಂಬಕ್ಕೆ 20 ಲಕ್ಷ ರೂಪಾಯಿಗಳನ್ನು ಮತ್ತು ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವವರಿಗೆ 2 ಲಕ್ಷ ರೂಪಾಯಿಗಳನ್ನು ನೀಡಲು ನಾನು ನಿರ್ಧರಿಸಿದ್ದೇನೆ' ಎಂದು ಟಿವಿಕೆ ಮುಖ್ಯಸ್ಥರೂ ಆಗಿರುವ ವಿಜಯ್ ತಿಳಿಸಿದ್ದಾರೆ.

## ಸಿದ್ದರಾಮಯ್ಯ ಬೆಂಗಳೂರು ಸಿಟಿ ರೌಂಡ್ಸ್: ರಸ್ತೆ ಗುಂಡಿ ಮುಚ್ಚುವ ಕಾಮಗಾರಿ ಪರಿಶೀಲನೆ

ಬೆಂಗಳೂರಿನಲ್ಲಿ ಮಳೆಯಿಂದಾಗಿ ರಸ್ತೆ ಗುಂಡಿಗಳು ಹೆಚ್ಚಾಗಿದ್ದು ಗುಂಡಿ ಮುಚ್ಚುವಂತೆ ರಾಜ್ಯ ಸರ್ಕಾರ ನವೆಂಬರ್ ತಿಂಗಳ ಡೆಡ್ ಲೈನ್ ಹಾಕಿಕೊಂಡಿದೆ. ಈ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಸಿಟಿ ರೌಂಡ್ಸ್ ನಡೆಸಿದರು. ಅಧಿಕೃತ ನಿವಾಸ ಕಾವೇರಿಯಿಂದ ಹೊರಟ ಸಿದ್ದರಾಮಯ್ಯ ವಿಂಡ್ಸರ್ ಮ್ಯಾನರ್ ಸಮೀಪ ರಸ್ತೆಯ ಮೇಲೆ ಮಳೆ ನೀರು ಸಂಗ್ರಹವಾಗುತ್ತಿದ್ದ ಸ್ಥಳಕ್ಕೆ ಭೇಟಿನೀಡಿ, ಅಧಿಕಾರಿಗಳಿಂದ ನೀರು ನಿಲ್ಲಲು ಕಾರಣವೇನು ಎಂಬ ಬಗ್ಗೆ ಮಾಹಿತಿ ಪಡೆದರು.. ಬಳಿಕ ವಿಬ್ ಗಯಾರ್ ರಸ್ತೆಗೆ ಭೇಟಿ ನೀಡಿ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯ ಪರಿಶೀಲನೆ ನಡೆಸಿದರು. ಆ ನಂತರ ಹೆಣ್ಣೂರಿನ ಬಾಗಲೂರು ರಸ್ತೆಯ ವೈಟ್ ಟಾಪಿಂಗ್ ಕಾಮಗಾರಿಯನ್ನು ಪರಿಶೀಲನೆ ನಡೆಸಿದ ಸಿದ್ದರಾಮಯ್ಯ, ರಸ್ತೆ ಗುಂಡಿಗಳಿಗೆ ಜಲ್ಲಿ ಹಾಕಿ ಬಿಡೋದಲ್ಲ. ಸರಿಯಾಗಿ ನಿರ್ವಹಿಸಬೇಕು. ವೇಗವಾಗಿ ಕಾಮಗಾರಿ ನಡೆಸುವಂತೆ ಸೂಚಿಸಿದರು. ಸಿಎಂ ಜೊತೆಗೆ ಸಚಿವರಾದ ಕೆಜೆ ಜಾರ್ಜ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಆಯುಕ್ತ ಮಹೇಶ್ವರ ರಾವ್, ತುಷಾರ್ ಗಿರಿನಾಥ್ ಸಿಟಿ ರೌಂಡ್ಸ್ ನಡೆಸುತ್ತಿದ್ದಾರೆ.

### ಸನ್ ಬೋನ್ ಮತ್ತು ಸ್ಪೈನ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ

## ವೈದ್ಯರು ಹಣಕ್ಕೆ ಹಾತೊರೆಯದೆ ರೋಗಿಗಳ ಆತ್ಮಸ್ಥೈರ್ಯ ಹೆಚ್ಚಿಸಲಿ: ವೀರಾಪುರ ಶ್ರೀಗಳು

**ಶಿವಮೊಗ್ಗ:** ವೈದ್ಯರು ಹಣಕ್ಕಾಗಿ ಹಾತೊರೆಯದೆ ಮಾತೃ ಹೃದಯದಿಂದ ರೋಗಿಗಳಿಗೆ ಚಿಕಿತ್ಸೆ ನೀಡಿ ಅವರ ಆತ್ಮಸ್ಥೈರ್ಯ ಹೆಚ್ಚಿಸಬೇಕು. ಬದುಕುವ ವಿಶ್ವಾಸ ಮೂಡಿಸಬೇಕು. ಹಣಕ್ಕಾಗಿ ಹಾತೊರೆಯದೆ ಆತ್ಮೀಯತೆ, ಪ್ರೀತಿಯಿಂದ ಉಪಚರಿಸಿ ಮಾನವೀಯತೆ ತೋರಬೇಕು. ಆಗ ರೋಗಿಗಳು ಶೀಘ್ರ ಗುಣಮುಖರಾಗುತ್ತಾರೆ ಎಂದು ವೀರಾಪುರ ಹಿರೇಮಠದ ಡಾ. ಮರುಳಸಿದ್ಧ ಪಂಡಿತಾರಾಧ್ಯ ಶಿವಾ ಚಾರ್ಯರು ಅಭಿಪ್ರಾಯಿಸಿದರು. ಇಲ್ಲಿನ ತಿಲಕ್ ನಗರದ ರಾಘವೇಂದ್ರ ಸ್ವಾಮಿ ಮಠ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಸನ್ ಬೋನ್ ಮತ್ತು ಸ್ಪೈನ್ ಸ್ಪೆಷಾಲಿಟಿ ಆಸ್ಪತ್ರೆಯನ್ನು 28–09–2025ರ ಭಾನುವಾರ ಬೆಳಿಗ್ಗೆ ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ವೈದ್ಯರು ಶ್ರದ್ಧೆ, ಭಕ್ತಿ, ಪ್ರಾಮಾಣಿಕತೆಯಿಂದ ಚಿಕಿತ್ಸೆ ನೀಡುವ ಮೂಲಕ ಸಮಾಜಕ್ಕೆ ಕೊಡುಗೆ ನೀಡಲಿ. ಆಗ ಭಗವಂತ ವೈದ್ಯರಿಗೆ ಸಂಪತ್ತನ್ನು ಕರುಣಿಸುತ್ತಾನೆ. ವೈದ್ಯರ ಇಚ್ಛಾ ಶಕ್ತಿ, ಕ್ರಿಯಾ ಶಕ್ತಿ, ಜ್ಞಾನ ಶಕ್ತಿಯ ಮೂಲಕ ರೋಗಿಗಳ ಖಾಯಿಲೆ ದೂರ ಮಾಡಬೇಕೆಂದರು.




ದೇಹವು ರಸ, ರಕ್ತ, ಮಾಂಸ, ಅಸ್ಥಿ ಸೇರಿದಂತೆ ಸಪ್ತಧಾತುಗಳಿಂದ ಕೂಡಿದೆ. ಈ ಸಪ್ತಧಾತುಗಳಲಿ ಅಸ್ಥಿ ಬಹಳ ಪ್ರಮುಖವಾದುದು. ಉಳಿದ ಆರು ಧಾತುಗಳನ್ನು ಅಸ್ಥಿ ಹಿಡಿದಿಟ್ಟಿದೆ. ಅಸ್ಥಿ ಇಲ್ಲದಿದ್ದಲ್ಲಿ ಅಸ್ತಿತ್ವವೇ ಇರುವುದಿಲ್ಲ. ಇಂತಹ ಮಹತ್ವದ ಅಸ್ಥಿಯ ಅತ್ಯಾಧುನಿಕ ಚಿಕಿತ್ಸೆಗಾಗಿ ಸುಸಜ್ಜಿತ ಆಸ್ಪತ್ರೆ ಪ್ರಾರಂಭಿಸುವ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ಶಿವಮೊಗ್ಗಕ್ಕೆ ಉತ್ತಮ ಆಸ್ತಿ ಮಾಡಿದಂತಾಗಿದೆ ಎಂದು ಹೇಳಿದರು.

ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ ಶಿವಮೊಗ್ಗ ನಗರದಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ ಆಸ್ಪತ್ರೆಗಳು ಹೆಚ್ಚುತ್ತಿವೆ. ರಾಜ್ಯವಷ್ಟೇ ಅಲ್ಲ ದೇಶದ ಆರೋಗ್ಯ ಕ್ಷೇತ್ರದ ಭೂಪಟದಲ್ಲಿ ಶಿವಮೊಗ್ಗ ಜಿಲ್ಲೆ ಮಹತ್ವದ ಸ್ಥಾನ ಪಡೆಯುತ್ತಿದೆ. ಬೆಂಗಳೂರು, ಮುಂಬೈ, ಚನ್ನೈ, ಹೈದರಾಬಾದ್‌ನಂತಹ ಮೆಟ್ರೋ ಸಿಟಿಗಳಲ್ಲಿ ಮಾತ್ರ ಲಭ್ಯವಿದ್ದ ಅತ್ಯಾಧುನಿಕ ಚಿಕಿತ್ಸೆಯು ಶಿವಮೊಗ್ಗದಂತಹ ಎರಡನೇ ಹಂತದ ನಗರಗಳಲ್ಲಿ ದೊರೆಯುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇದ–ಕ್ಕೆ ಪೂರಕವಾಗಿ ರಸ್ತೆ, ರೈಲು ಸಂಪರ್ಕ, ವಿಮಾನಯಾನ ಕಲ್ಪಿಸಿರುವುದರಿಂದ ಬೇರೆ ಭಾಗದ ರೋಗಿಗಳು ಇಲ್ಲಿಗೆ ಬಂದು ಚಿಕಿತ್ಸೆ ಪಡೆಯಲು ಅನುಕೂಲವಾಗಲಿದೆ ಎಂದರು.

ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಬಿ.ಎಲ್. ಶಂಕರ್ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಬೆಂಗಳೂರಿನ ಆಸ್ಟರ್ ಆಸ್ಪತ್ರೆಯ ನರ ವಿಜ್ಞಾನ ವಿಭಾಗದ ನಿರ್ದೇಶಕ, ಪ್ರಮುಖ ಸಲಹೆಗಾರ ಪ್ರೊ.ಡಾ. ಸತೀಶ್ ರುದ್ರಪ್ಪ ಉಪಸ್ಥಿತರಿದ್ದರು.

ಆರ್ಥೋ ಸ್ಪೈನ್ ಸರ್ಜನ್ ಡಾ. ಆಕಾಶ್ ಹೊಸತೋಟ, ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ವಿಧಾನ ಪರಿಷತ್ ಸದಸ್ಯರುಗಳಾದ ಡಾ. ಧನಂಜಯ ಸರ್ಜಿ, ಎಸ್.ಎಲ್. ಭೋಜೇಗೌಡ, ಮಾಜಿ ಸದಸ್ಯ ಎಸ್. ರುದ್ರೇಗೌಡ, ಅಡಿಕೆ ವರ್ತಕ ಸೂರ್ಯನಾರಾಯಣ್ ಹೊಸ್ತೋಟ, ನಮಿತಾ, ಡಾ. ಪೂಜಾ ಆಕಾಶ್, ಬಿ.ವೈ. ಅರುಣಾದೇವಿ, ಡಾ. ಸೀಮಂತಿನಿ ದೇಸಾಯಿ, ಡಾ. ದೀಪಕ್ ಉಪ್ಪಿನ್, ಡಾ. ಹೆಚ್.ಡಿ. ಭರತ್, ಡಾ. ಎಂ.ಬಿ.ಅಭಿಷೇಕ್, ಜಿಲ್ಲಾ ರಕ್ಷಣಾಧಿಕಾರಿ ಜಿ.ಕೆ. ಮಿಥುನ್ ಕುಮಾರ್ ಮತ್ತಿತರರು ಭಾಗವಹಿಸಿದ್ದರು.

## ಹೃದಯಘಾತ ತಡೆಗೆ ಜನಜಾಗೃತಿ ವಿಶ್ವ ಹೃದಯ ದಿನಾಚರಣೆ ಉದ್ದೇಶ




**ಚಿಕ್ಕಮಗಳೂರು**–ಹೃದಯಾಘಾತ ತಡೆಯುವ ಜೊತೆಗೆ ಪ್ರತಿ ನಾಡಿ ಮಿಡಿತವು ಕೆಲಸ ಮಾಡಬೇಕೆಂಬುದು ಹಾಗೂ ಜನಜಾಗೃತಿ ಮೂಡಿಸುವುದೇ ವಿಶ್ವ ಹೃದಯ ದಿನಾಚಾರಣೆ–ಯ ಉದ್ದೇಶ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ತಿಳಿಸಿದರು.

ಅವರು ಇಂದು ನಗರದ ಕೆ.ಆರ್.ಎಸ್ ಆಸ್ಪತ್ರೆಯಲ್ಲಿ ಐಸಿರಿ ಫೌಂಡೇಶನ್, ಕೆ.ಆರ್.ಎಸ್ ಆಸ್ಪತ್ರೆ, ಪ್ರಜಾಪಿತಾ ಬ್ರಹ್ಮಕುಮಾರಿಸ್ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಹೃದಯ ದಿನಾಚಾರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವೈದ್ಯ ಯೋಗೀಶ್ ರವರು ಒಂದು ಸಾವಿರಕ್ಕೂ ಹೆಚ್ಚು ಕೆ.ಆರ್.ಎಸ್ ಆಸ್ಪತ್ರೆಯಲ್ಲಿ ಹೃದಯ ಚಿಕಿತ್ಸೆ ನೀಡಿದ್ದಾರೆ, ಹೃದಯಘಾತ ತಡೆಗೆ ಪೂರಕವಾದ ವೈದ್ಯರ ಸಲಹೆಯನ್ನು ಪ್ರತಿಯೊಬ್ಬರು ಚಾಚು ತಪ್ಪದೆ ಪಾಲಿಸಬೇಕೆಂದು ಮನವಿ ಮಾಡಿದರು. ದಿನ ನಿತ್ಯ ವಿಶ್ರಾಂತಿ ಇಲ್ಲದೆ ದುಡಿಯುವ ಮಿಡಿಯುವ ಹೃದಯಕ್ಕೆ ನಾವು ಏನು ಕೊಡಬೇಕಾಗಿಲ್ಲ, ಪ್ರತಿ ದಿನ 1 ಗಂಟೆ ನಡೆಯುವುದು, ಯೋಗ, ಪ್ರಾಣಾಯಾಮ ಮಾಡುವ ಮೂಲಕ ಹೃದಯಕ್ಕೆ ಸಂಬಂದಿಸಿದ ಕಾಯಿಲೆಗಳ ತಡೆಗೆ ಸಹಕಾರಿಯಾಗಲಿದೆ ಎಂದರು. ಮಾದಕ ವ್ಯಸನಿಗಳು ಇದರಿಂದ ಮುಕ್ತವಾಗಬೇಕು ಜೊತೆಗೆ ವೈದ್ಯರ ಸಲಹೆಯನ್ನು ಪಡೆದು ಉತ್ತಮ ಆರೋಗ್ಯಕ್ಕೆ ಪೂರಕವಾದ ನೈಸರ್ಗಿಕ ಆಹಾರ ಮುಖ್ಯವಾಗಿ ಪಡೆಯಬೇಕು, ಈಗ ಕಲುಷಿತ ಪದಾರ್ಥಗಳ ಆಹಾರ ಸೇವನೆಯಿಂದಾಗಿ ರೋಗರುಜಿನಗಳಿಗೆ ಕಾರಣವಾಗುತ್ತಿದೆ ಎಂದು ವಿಷಾಧಿಸಿದರು.

## ಭಾರತೀಯರು ವಿನಾ ಕಾರಣ ಬೇರೆಯವರಿಗೆ ತೊಂದರೆ ಕೊಡುವುದಿಲ್ಲ : ಕೆ.ಎಸ್.ಈಶ್ವರಪ್ಪ

**ಹೊನ್ನಾಳಿ :** ಭಾರತೀಯರು ವಿನಾ ಕಾರಣ ಬೇರೆಯವರಿಗೆ ತೊಂದರೆ ಕೊಡುವುದಿಲ್ಲ, ಒಂದು ವೇಳೆ ನಮಗೆ ತೊಂದರೆ ಕೊಡಲು ಬಂದರೆ ಅಂತಹವರನ್ನು ಸದೆಬಡಿಯದೇ ಬಿಡುವುದಿಲ್ಲವೆಂದು ಮಾಜಿ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಎಚ್ಚರಿಸಿದರು.

ಪಟ್ಟಣದ ಹಿರೇಕಲ್ಮಠದ ಸಮುದಾಯ ಭವನದಲ್ಲಿ ನಡೆಯುತ್ತಿರುವ 4 ನೇ ದಿನದ ಶರನ್ನವರಾತ್ರಿ ಮತ್ತು ದಸರಾ ಮಹೋತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಹಲ್ಗಾಮ್ ದಾಳಿಯಲ್ಲಿ ಪ್ರವಾಸಕ್ಕೆ ಹೋದವರ ಮೇಲೆ ಹಿಂದೂಗಳೆಂದು ಖಚಿತಪಡಿಸಿಕೊಂಡು ಮನಸ್ಸಿಗೆ ಬಂದಂತೆ ಗುಂಡಿನ ದಾಳಿ ನಡೆಸಿ ಹತ್ಯೆಗೈದಿದ್ದ ಪಾಕಿಸ್ತಾನಿ ಪ್ರಚೋದಿತ ಉಗ್ರರನ್ನು ದಾಳಿ ನಡೆಸಿದ 3–4 ದಿನಗಳೊಳಗೆ ಪ್ರಧಾನಿ ನರೇಂದ್ರಮೋದಿ ಅವರ ಮಾರ್ಗದರ್ಶನದಲ್ಲಿ ಆಪರೇಷನ್ ಸಿಂಧೂರದ ಮೂಲಕ ಉಗ್ರರ ಹುಟ್ಟಡಗಿಸಿದ ಭಾರತವನ್ನು ಎಲ್ಲಾ ದೇಶಗಳೂ ಕೂಡ ಬೆಂಬಲಿಸಿದ್ದವು, ಆಗ ಪಾಕಿಸ್ತಾನವು ಏಕಾಂಗಿಯಾಗಿತ್ತು, ಇಷ್ಟಾದರೂ ಪಾಕಿಸ್ತಾನವು ಪಾಠ ಕಲಿಯದಿದ್ದರೆ ಮುಂದೆ ಅದಕ್ಕೆ ವಿನಾಶ ಕಟ್ಟಿಟ್ಟ ಬುತ್ತಿ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಹೊನ್ನಾಳಿ ಹಿರೇಕಲ್ಮಠವು ಈ ಭಾಗದ ಭಕ್ತರ ಒಳಿತಿಗೋಸ್ಕರ ಹಲವಾರು ಪೂಜಾ–ಕೈಂಕರ್ಯಗಳು, ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಕುಟುಂಬ ಸಮೇತವಾಗಿ ಪಾಲ್ಗೊಂಡು ಅವುಗಳ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಅವರು ಕರೆ ನೀಡಿದರು.

ಸಾಧು–ಸಂತರ ಸಹವಾಸದಿಂದ ಪುಣ್ಯ ಕ್ಷೇತ್ರಗಳಿಗೆ ಹೋಗಿ ಬಂದಷ್ಟು ಪುಣ್ಯ ಲಭಿಸುತ್ತದೆ, ಇಂದಿನ ಯುವ ಪೀಳಿಗೆಯು ಮೊಬೈಲ್‌ಗಳಿಗೆ ದಾಸರಾಗಿ ಅನೇಕ ತೊಂದರೆಗಳಿಗೆ ಈಡಾಗುತ್ತಿದ್ದಾರೆ, ಪೋಷಕರು ತಮ್ಮ ಮಕ್ಕಳನ್ನು ಮಠ–ಮಾನ್ಯಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳಿಗೆ ಕರೆದುಕೊಂಡು ಬರುವ ಮೂಲಕ ಸನ್ಮಾರ್ಗದಲ್ಲಿ ನಡೆಯುವಂತೆ ನೋಡಿಕೊಳ್ಳಬೇಕಾಗಿರುವುದು ಅನಿವಾರ್ಯವಾಗಿದೆ ಎಂದು ಸಲಹೆ ನೀಡಿದರು.

ಗೋವಿನಕೋವಿ ಹಾಲಸ್ವಾಮಿ ಮಠದ ಶಿವಯೋಗಿ ಮಹಾಲಿಂಗ ಹಾಲಸ್ವಾಮೀಜಿಗಳು ಆಶೀರ್ವಚನ ನೀಡಿ ಭಾರತೀಯ ಸಂಸ್ಕೃತಿಯಲ್ಲಿ ಪ್ರತಿಯೊಂದು ಹಬ್ಬಗಳ ಆಚರಣೆಯಿಂದ ಮನು ಕುಲಕ್ಕೆ ಒಳಿತಾಗುತ್ತಿದ್ದು ಹಬ್ಬಗಳ ವಿಧಿ–ವಿಧಾನಗಳನ್ನು ಅರಿತು ಆಚರಣೆ ಮಾಡಬೇಕೆಂದು ಸಲಹೆ ನೀಡಿ–ದರು.

ದೇವಿ ಪುರಾಣ ವಾಚನದಿಂದ ನಮಗೆಲ್ಲರಿಗೂ ನೆಮ್ಮದಿ–ಶಾಂತಿ ದೊರಕುತ್ತದೆ, ಹಿರೇಕಲ್ಮಠದ ನವರಾತ್ರಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವುದರಿಂದ ದೇವಿಯ ಆಶೀರ್ವಾದದ ಜೊತೆಗೆ ಗುರುವಿನ ದರ್ಶನಾಶೀರ್ವಾದವು ಲಭಿಸುತ್ತದೆ ಎಂದು ದೃಷ್ಟಾಂತಗಳ ಮೂಲಕ ಉದಾಹರಿಸಿದರು.

ಕುವೆಂಪು ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕ ಡಾ.ಜಿ.ಪ್ರಶಾಂತ್ ನಾಯಕ್ ಅವರು ನವರಾತ್ರಿ ಹಬ್ಬದ ಆಚರಣೆಯ ಬಗ್ಗೆ ಉಪನ್ಯಾಸ ನೀಡಿದರು.

ಧರ್ಮಸಭೆಯಲ್ಲಿ ಒಡೆಯರ್ ಡಾ.ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು, ಚನ್ನಪ್ಪಸ್ವಾಮಿ ವಿದ್ಯಾಪೀಠದ ಕಾರ್ಯದರ್ಶಿ ಚನ್ನಯ್ಯ ಬೆನ್ನೂರ್‌ಮಠ, ಮುಖಂಡರಾದ ಎಚ್.ಎಂ.ರುದ್ರೇಶ್, ನಾರಾಯಣ ಪವಾರ್, ಮಲ್ಲಣ್ಣ ಅಂಗಡಿ, ಮೃತ್ಯುಂಜಯ ಪಾಟೀಲ್, ಅಮೃತಗೌಡ, ಬಸವರಾಜಣ್ಣ ಪಟ್ಟಣಶೆಟ್ಟಿ, ಬಿದ್ದಾಡಪ್ಪ ಚಕ್ರಸಾಲಿ, ಟಿ.ಎಂ.ಬಸವರಾಜಯ್ಯ, ಎನ್.ಪಿ.ಸುರೇಶ್ ಕುಂಬಾರ್, ಗುರುಪ್ರಸಾದ್, ಸುದೀಪ್, ಅವಿನಾಶ್, ಹರ್ಷ ಮತ್ತಿತರರು ಉಪಸ್ಥಿತರಿದ್ದರು.ಮಠದ ಸೇವಾಕರ್ತರಿಗೆ ಗುರುರಕ್ಷೆ ನೀಡಿ ಸನ್ಮಾನಿಸಲಾಯ್ತು.

# ರಾಶಿ ಭವಿಷ್ಯ

## ಮೇಷ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಒಬ್ಬರು ಇನ್ನೊಬ್ಬರ ದೃಷ್ಟಿಕೋನವನ್ನು ಅರ್ಥಮಾಡಿಕೊಳ್ಳುವ ಮೂಲಕ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸಿ. ಅವುಗಳನ್ನು ಸಾರ್ವಜನಿಕಗೊಳಿಸಿದರೆ ನಿಮಗೆ ಅಪಖ್ಯಾತಿ ಉಂಟಾಗುವ ಸಾಧ್ಯತೆಗಳು ಹೆಚ್ಚಿರುತ್ತವೆ.

## ವೃಷಭ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ. ಪ್ರತಿ ದಿನ ಪ್ರೀತಿಯಲ್ಲಿ ಬೀಳುವ ನಿಮ್ಮ ಸ್ವಭಾವವನ್ನು ಬದಲಾಯಿಸಿ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ. ಇಂದು ನೀವು ಎಲ್ಲಾ ಕೆಲಸಗಳನ್ನು ಹೊರತುಪಡಿಸಿ, ಬಾಲ್ಯದಲ್ಲಿ ನೀವು ಮಾಡಲು ಇಷ್ಟಪಟ್ಟ ಕೆಲಸಗಳನ್ನು ಮಾಡಲು ಇಷ್ಟಪಡುತ್ತೀರಿ

## ಮಿಥುನ ರಾಶಿ

ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ. ಇದು ಜೀವನದ ಸುಗಂಧವನ್ನು ಹಾಳುಮಾಡುವ ಹಾಗೂ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು.

## ಕರ್ಕ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನೀವು ನಂಬುವ ಯಾರಾದರೂ ನಿಮಗೆ ಸಂಪೂರ್ಣ ನಿಜ ಹೇಳದಿರಬಹುದು – ಇತರರು ಮನವೊಲಿಸುವ ನಿಮ್ಮ ಸಾಮರ್ಥ್ಯ ಬರುವ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ.

## ಸಿಂಹ ರಾಶಿ

ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಮತ್ತು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

## ಕನ್ಯಾ ರಾಶಿ

ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವೇ ತೊಂದರೆಗೊಳಗಾಗಬಹುದು. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ.

## ತುಲಾ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ನೀವು ಇಂದು ಪ್ರೀತಿಯ ಸಮೃದ್ಧ ಚಾಕೋಲೇಟ್‌ನ ರುಚಿ ಸವಿಯುತ್ತೀರಿ. ಇಂದು ನಿಮಗೆಲ್ಲರಿಗೂ ತುಂಬ ಸಕ್ರಿಯವಾದ ಮತ್ತು ಹೆಚ್ಚು ಸಾಮಾಜಿಕವಾದ ಜನರು ನಿಮ್ಮಿಂದ ಸಲಹೆ ಪಡೆಯಬಯಸುತ್ತಾರೆ ಮತ್ತು ನೀವು ಏನೇ ಹೇಳಿದರೂ ಅದನ್ನು ಒಪ್ಪುತ್ತಾರೆ.

## ವೃಶ್ಚಿಕ ರಾಶಿ

ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ಕುಟುಂಬದಲ್ಲಿ ತೊಂದರೆಯುಂಟಾಗಬಹುದು. ಕುಟುಂಬದ ಜವಾಬ್ದಾರಿಗಳ ಬಗ್ಗೆ ನಿಮ್ಮ ಉದಾಸೀನತೆ ಅವರಿಗೆ ಸಿಟ್ಟು ತರಬಹುದು. ನಿಮ್ಮ ಉತ್ಸಾಹ ನಿಮ್ಮ ಪ್ರೀತಿಯನ್ನು ಸಂಕಟಕ್ಕೆ ಸಿಲುಕಿಸಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

## ಧನು ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಬೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ಹೊಸ ಪ್ರಸ್ತಾಪಗಳ ಅಕರ್ಷಕವಾಗಿದ್ದರೂ ಯಾವುದೇ ಆತುರದ ನಿರ್ಧಾರಗಳನ್ನು ತೆಗೆದುಕೊಳ್ಳುವುದು ಬುದ್ಧಿವಂತಿಕೆಯ ಲಕ್ಷಣವಲ್ಲ.

## ಮಕರ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಹಣಕಾಸಿನಲ್ಲಿ ಸುಧಾರಣೆ ನೀವು ಪ್ರಮುಖ ಖರೀದಿಗಳನ್ನು ಮಾಡುವುದನ್ನು ಅನುಕೂಲಕರವಾಗಿಸುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ.

## ಕುಂಭ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ.

## ಮೀನ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು.

# ಡಾ. ಎಸ್.ಎಲ್. ಭೈರಪ್ಪನವರ ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತ



ಭಾರತೀಯ ಸಂಸ್ಕೃತಿ, ಪರಂಪರೆ, ಇತಿಹಾಸ, ಸಮಾಜ, ಸಂಗೀತ, ಮಾನವೀಯ ಜೀವನ ಮೌಲ್ಯಗಳನ್ನು ಕಾದಂಬರಿ ಸಾಹಿತ್ಯದ ಮೂಲಕ ಮನಮುಟ್ಟುವಂತೆ ಚಿತ್ರಿಸಿ ಭಾರತೀಯ ಕಾದಂಬರಿ ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತವಾಗಿಸಿರುವ ಡಾ. ಎಸ್. ಎಲ್. ಭೈರಪ್ಪನವರ (1931–2025) ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತವೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗವು ಐಕ್ಯುಎಸಿ ಘಟಕದ ಅಡಿಯಲ್ಲಿ ಹಮ್ಮಿಕೊಂಡಿದ್ದ 'ಡಾ. ಎಸ್.ಎಲ್. ಭೈರಪ್ಪ ನುಡಿನಮನ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ವಿಶಿಷ್ಟ ಶೈಲಿಯ ಬರಹದಿಂದ ಅಪಾರ ಸಂಖ್ಯೆಯ ಓದುಗರನ್ನು ಸೃಷ್ಟಿಸಿಕೊಂಡಿರುವ ಭೈರಪ್ಪನವರು ಜನಪ್ರಿಯತೆ ಮತ್ತು ಚಿಂತನಶೀಲತೆ ಕಾಯ್ದುಕೊಂಡ ಕನ್ನಡನಾಡಿನ ಅಪೂರ್ವ ಲೇಖಕರಾಗಿದ್ದು, ಅವರ ಬರಹ ಮತ್ತು ವ್ಯಕ್ತಿತ್ವ ಯುವಕರಿಗೆ ದಾರಿದೀಪವೆಂದು ಹೇಳಿದರು.

ಇತಿಹಾಸ ವಿಭಾಗದ ಮುಖ್ಯಸ್ಥ ಮತ್ತು ಎನ್. ಎಸ್.ಎಸ್. ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ 'ಭೈರಪ್ಪನವರ ಕಾದಂಬರಿಗಳಲ್ಲಿ ಐತಿಹಾಸಿಕ ಚಿಂತನೆಗಳು', ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಉಲ್ಲಾಸ ಶೆಟ್ಟಿ 'ಭೈರಪ್ಪನವರ ಕಾದಂಬರಿಗಳಲ್ಲಿ ವೈಜ್ಞಾನಿಕ ವಿಚಾರಗಳು', 'ಭೈರಪ್ಪನವರ ಕಾದಂಬರಿಗಳಲ್ಲಿ ತಾತ್ವಿಕ ಚಿಂತನೆಗಳು', ಕನ್ನಡ ವಿಭಾಗದ ಮುಖ್ಯಸ್ಥ ಮತ್ತು ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ 'ಭೈರಪ್ಪನವರ ಕಾದಂಬರಿಗಳಲ್ಲಿ ಮಾನವೀಯ ಜೀವನ ಮೌಲ್ಯಗಳು', ಕನ್ನಡ ಪ್ರಾಧ್ಯಾಪಕ ಭೀಮೇಶ 'ಭೈರಪ್ಪನವರ ಕಾದಂಬರಿಗಳಲ್ಲಿ ಗ್ರಾಮೀಣ ಬದುಕು', ರಾಜ್ಯಶಾಸ್ತ್ರ ಪ್ರಾಧ್ಯಾಪಕ ಸುಭಾಸ ಹರಿಹರ 'ಭೈರಪ್ಪನವರ ಕಾದಂಬರಿಗಳಲ್ಲಿ ರಾಜಕೀಯ ವಿಚಾರಗಳು', ಇಂಗ್ಲೀಷ ವಿಭಾಗದ ಮುಖ್ಯಸ್ಥೆ ಮಹಾನಂದಾ ಹಿರೇಮಠ 'ಆಂಗ್ಲ ಭಾಷೆಗೆ ಅನುವಾದಿತ ಭೈರಪ್ಪನವರ ಕಾದಂಬರಿಗಳ ವೈಶಿಷ್ಟ್ಯತೆ', ಇಂಗ್ಲೀಷ ಪ್ರಾಧ್ಯಾಪಕಿ ಸಾವಿತ್ರಿ ಟಿ. 'ಭೈರಪ್ಪನವರ ಕಾದಂಬರಿಗಳ ಜನಪ್ರಿಯತೆ ಮತ್ತು ಪ್ರಸ್ತುತತೆ' ಕುರಿತು ಮಾತನಾಡುತ್ತ ನುಡಿನಮನ ಸಲ್ಲಿಸಿದರು. ವಿದ್ಯಾರ್ಥಿಗಳು ಕಾರ್ಯಕ್ರಮ ನಡೆಸಿಕೊಟ್ಟರು.

# ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಬಳ್ಳಾರಿಗೆ ಆಗಮನ



**ಬಳ್ಳಾರಿ:** ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಸೆ.29 ರಂದು ಹೊಸಪೇಟೆಯಿಂದ ಬಳ್ಳಾರಿಗೆ ಆಗಮಿಸಲಿದ್ದಾರೆ.

ಅಂದು ಬೆಳಿಗ್ಗೆ 10.30 ಕ್ಕೆ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಕಚೇರಿಗೆ ಭೇಟಿ ನೀಡುವರು. ಬಳಿಕ ಮಧ್ಯಾಹ್ನ 12.30 ರಿಂದ 01.30 ಗಂಟೆಯವರೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಏರ್ಪಡಿಸಿರುವ ಜಿಲ್ಲಾ ಮಟ್ಟದ 'ಜನಸ್ಪಂದನ' ಕಾರ್ಯಕ್ರಮದಲ್ಲಿ ಭಾಗವಹಿಸಿ ಸಾರ್ವಜನಿಕರ ಅಹವಾಲು ಸ್ವೀಕರಿಸುವರು.

ನಂತರ ಮಧ್ಯಾಹ್ನ 02.15 ರಿಂದ ಸಂಜೆ 06 ಗಂಟೆಯವರೆಗೆ ನಗರದ ಜಿಪಂ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬಳ್ಳಾರಿ ಜಿಲ್ಲಾ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

ಬಳಿಕ ಹೊಸಪೇಟೆಗೆ ತೆರಳಿ ವಾಸ್ತವ್ಯ ಮಾಡುವರು.

ಸೆ.30 ರಂದು ಮಧ್ಯಾಹ್ನ 03 ಗಂಟೆಗೆ ಹೊಸಪೇಟೆಯಿಂದ ತೋರಣಗಲ್ಲು ಜಿಂದಾಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ತೆರಳುವರು ಎಂದು ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ತಿಳಿಸಿದ್ದಾರೆ.

# ರಸ್ತೆ ಕಾಮಗಾರಿಗೆ ಸಚಿವ ಎಚ್ ಕೆ ಪಾಟೀಲ ಭೂಮಿ ಪೂಜೆ ಗ್ರಾಮಗಳ ಆರ್ಥಿಕತೆ ಸುಧಾರಣೆ ಉತ್ತಮ ರಸ್ತೆ ಸಹಕಾರಿ



**ಗದಗ:** ಲೋಕಪಯೋಗಿ ಇಲಾಖೆಯ ಪ್ರಸ್ತಕ ಸಾಲಿನ ಅಂದಾಜು ಮೊತ್ತ 2 ಕೋಟಿಯ ಗದಗ ತಾಲೂಕಿನ ಹರ್ತಿ ಹುಲಕೋಟಿ ಸಂಪರ್ಕ ಕಲ್ಪಿಸುವ ಕಿ.ಮೀ 0 ರಿಂದ 2 ಹಾಗು 6 ರಿಂದ 7 ರವರೆಗೆ ರಸ್ತೆ ಸುಧಾರಣೆ ಮತ್ತು ಅಂದಾಜು ಮೊತ್ತ 2 ಕೋಟಿ ಕುರ್ತಕೊಟಿ, ಹರ್ತಿ, ಬೆಳದಡಿ ಕಿ.ಮೀ 6 ರಿಂದ 7 ರವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಭೂಮಿ ಪೂಜೆ ನೇರವೆಸಿದರು.

ಶನಿವಾರ ಗದಗ ತಾಲೂಕಿನ ಹರ್ತಿ ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿದ ಮಾತನಾಡಿದ ಅವರು ರಸ್ತೆ ಅಭಿವೃದ್ಧಿ ಆಗುವುದರಿಂದ ಹಳ್ಳಿಗಳ ಆರ್ಥಿಕತೆ ಸುಧಾರಣೆ ಆಗುತ್ತದೆ ಮತ್ತು ವ್ಯಾಪಾರ ವಹಿವಾಟುಗಳು ಹೆಚ್ಚುತ್ತವೆ ಮತ್ತು ನಗರಕ್ಕೆ ವಿದ್ಯಾಭ್ಯಾಸ ಮಾಡುಲು ಹೋಗುವ ವಿದ್ಯಾರ್ಥಿಗಳಿಗೆ ಅನೂಕೂಲ ವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು ಗಣ್ಯರು ಹಾಜರಿದ್ದರು.

# ಅ.2ರಂದು ಸಾರ್ವಜನಿಕ ವಿಜಯದಶಮಿ ಮಹೋತ್ಸವದ ಬೃಹತ್ ಶೋಭಾಯಾತ್ರೆ

**ದಾವಣಗೆರೆ:** ವಿಶ್ವ ಹಿಂದೂ ಪರಿಷತ್ ದಾವಣಗೆರೆ ಮತ್ತು ಸಾರ್ವಜನಿಕ ವಿಜಯದಶಮಿ ಮಹೋತ್ಸವ ಸಮಿತಿ ವತಿಯಿಂದ ಸೆ.22ರಿಂದ ಅ.2ರ ವರೆಗೆ ಸಾರ್ವಜನಿಕ ವಿಜಯದಶಮಿ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಸದಸ್ಯ ಎಸ್.ಟಿ.ವೀರೇಶ್ ಹೇಳಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಜಯದಶಮಿ ಮಹೋತ್ಸವ ಕಾರ್ಯಕ್ರಮವನ್ನು ಕಳೆದ 44 ವರ್ಷಗಳಿಂದ ವಿಶ್ವಹಿಂದೂ ಪರಿಷತ್ ಆಚರಿಸಿಕೊಂಡು ಬರುತ್ತಿದೆ. ದಾವಣಗೆರೆಯಲ್ಲಿ ಒಂದು ಇತಿಹಾಸವನ್ನೇ ಸೃಷ್ಟಿಸಿದೆ. ಪ್ರತಿ ವರ್ಷದಂತೆ ಈ ವರ್ಷವು ಸೆ.22 ರಿಂದ ಅ.2ರವರೆಗೆ ಶ್ರೀ ಬೀರಲಿಂಗೇಶ್ವರ ಮೈದಾನದ ಆವರಣದಲ್ಲಿ ದೇವಿಯ ಘಟಸ್ಥಾಪನೆ ಕಾರ್ಯಕ್ರಮದೊಂದಿಗೆ ಆರಂಭಗೊಂಡಿದೆ ಎಂದರು.ಈಗಾಗಲೇ ಸೆ.22 ರಂದು ಶ್ರೀ ದೇವಿಯ ವಿಗ್ರಹದ ಘಟಸ್ಥಾಪನೆ ಮಾಡಲಾಗಿದೆ. ಸೆ.25ರಂದು ಪೂರ್ಣಕುಂಭ ಮೆರವಣಿಗೆ ನಡೆಸಲಾಗಿದೆ. . ಸೆ,28 ರಂದು ಮಹಿಳಾ ಬೈಕ್ ಜಾಥಾ ಹಾಗೂ 30 ರಂದು ಬೆಳಿಗ್ಗೆ 10.30ರಿಂದ ರಾಂ ಅಂಡ್ ಕೋಂ ವೃತ್ತದಿಂದ ಯುವಕರ ಬೈಕ್ ಜಾಥ ಆಯೋಜಿಸಲಾಗಿದೆ. ಅಕ್ಟೋಬರ್ 1ರಂದು ನಗರದೇವತೆ ಶ್ರೀ ದುರ್ಗಾಂಬಿಕಾ ದೇವಸ್ಥಾನದಿಂದ ದುರ್ಗಾದೌಡ್ ಕಾರ್ಯಕ್ರಮ ನಡೆಯಲಿದೆ ಎಂದರು.ಅ.2ರಂದು ನಗರದ ವೆಂಕಟೇಶ್ವರ ವೃತ್ತದಿಂದ ಬೆಳಿಗ್ಗೆ 11.30ಕ್ಕೆ ಬೃಹತ್ ಶೋಭಾಯಾತ್ರೆ ಆರಂಭಗೊಂಡು ಬಂಬೂ ಬಜಾರ್, ಹಾಸಭಾವಿ ವೃತ್ತ, ಹಗೇದಿಬ್ಬ ವೃತ್ತ, ಹೊಂಡದ ವೃತ್ತದ ಅರುಣ್ ಟಾಕೀಸ್ ಮೂಲಕ ಶ್ರೀ ಬೀರಲಿಂಗೇಶ್ವರ ದೇವಸ್ಥಾನಕ್ಕೆ ಬಂದು ಕೊನೆಗೊಳ್ಳಲಿದೆ ಎಂದರು.ಧ್ದಿಗೋಷ್ಠಿಯಲ್ಲಿ ಸಮಿತಿಯ ಆರ್.ಎಲ್. ಶಿವಪ್ರಕಾಶ್, ಪುನೀತ್, ಧನುಷ್, ಆನಂದ್, ಚೇತನಾ ಶಿವಕುಮಾರ್, ನಿತಿನ್ ಶ್ರೀನಿವಾಸ್, ಕಲ್ಲಪ್ಪ, ದ್ರಾಕ್ಷಯಿಣಮ್ಮ, ವಿಶ್ವಾಸ್ ಇದ್ದರು.

# ಮೌಂಟ್ ಅಬುದಲ್ಲಿ ರಾಷ್ಟ್ರೀಯ ಮೀಡಿಯಾ ಸಮ್ಮೇಳನ ಅದ್ದೂರಿ ಆರಂಭ




**ಮೌಂಟ್ ಅಬು:** ಬ್ರಹ್ಮಾಕುಮಾರಿ ಸಂಸ್ಥೆಯ ಆಶ್ರಯದಲ್ಲಿ ಆಯೋಜಿಸಲಾದ ರಾಷ್ಟ್ರೀಯ ಮೀಡಿಯಾ

ಸಮ್ಮೇಳನ ಭವ್ಯವಾಗಿ ಆರಂಭಗೊಂಡಿತು. ಜೀವನದಲ್ಲಿ ದುಃಖ, ಭಯ ಮತ್ತು ಅಶಾಂತಿ

ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ಧ್ಯಾನದ ಅವಶ್ಯಕತೆಯನ್ನು ಒತ್ತಿಹೇಳಿದ ಸಂಸ್ಥೆಯ

ಆಡಳಿತಾಧಿಕಾರಿಣಿ ಮೋಹಿನಿ ದೀದಿ, "ಮಾಧ್ಯಮದವರು ಸಮಾಜದಲ್ಲಿ ಏಕತೆ, ಶಾಂತಿ ಮತ್ತುವಿಶ್ವಾಸ ಸ್ಥಾಪನೆಗೆ ಪ್ರಯತ್ನಿಸಬೇಕು" ಎಂದು ಸಲಹೆ ನೀಡಿದರು.

ರಾಜ್ಯಪಾಲ ಬಾಗಡೆ ಅವರು ಸಮ್ಮೇಳನ ಉದ್ಘಾಟಿಸಿ ಮಾತನಾಡಿ, "ಬ್ರಹ್ಮಾಕುಮಾರಿ ಸಂಸ್ಥೆಪ್ರಾಚೀನ ಭಾರತೀಯ ಸಂಸ್ಕೃತಿ ಜ್ಞಾನದ ಪ್ರಸಾರ ಮಾಡುತ್ತಿರುವ ಅಪರೂಪದ ಆಧ್ಯಾತ್ಮಿಕ ವಿಶ್ವವಿದ್ಯಾಲಯವಾಗಿದೆ. ಮಹಿಳೆಯರಿಂದ ಮಹಿಳೆಯರಿಗಾಗಿ ಇಷ್ಟು ದೊಡ್ಡ ಸಂಸ್ಥೆಜಗತ್ತಿನಲ್ಲಿ ಇನ್ನಿಲ್ಲ" ಎಂದು ಶ್ಲಾಘಿಸಿದರು. ಅವರು ಭಾರತ ದೇಶವು ಯೋಗಿ ಮಹಾತ್ಮರನಾಡಾಗಿದ್ದು, ಹಾಲಿನ ಉತ್ಪಾದನೆಯಲ್ಲಿ ಪ್ರಥಮ ಹಾಗೂ ಗೋಧಿ ಉತ್ಪಾದನೆಯಲ್ಲಿ ದ್ವಿತೀಯಸ್ಥಾನದಲ್ಲಿದೆ ಎಂದು ತಿಳಿಸಿದರು.

ರಾಜಯೋಗಿ ಬ್ರಹ್ಮಾಕುಮಾರ್ ಕರುಣಜಿ, "ಮಾಧ್ಯಮ ಮಿತ್ರರು ರಾಜಯೋಗ ಶಿಕ್ಷಣವನ್ನು ತಮ್ಮಜೀವನದಲ್ಲಿ ಅಳವಡಿಸಿಕೊಂಡು ಸಮಾಜಕ್ಕೆ ದಾರಿದೀಪವಾಗಬೇಕು" ಎಂದು ಕರೆ ನೀಡಿದರು. ತಾವು

34 ವರ್ಷಗಳ ಮಾಧ್ಯಮ ಸೇವೆಯನ್ನು ನೆನಪಿಸಿಕೊಂಡರು.

ಸಮ್ಮೇಳನದ ಉದ್ದೇಶವನ್ನು ವಿವರಿಸಿದ ಬ್ರಹ್ಮಾಕುಮಾರಿ ಸರಳ ದಿದಿ, "ಈ ವರ್ಷದ ಧ್ಯೇಯವಾಕ್ಯ ಶಾಂತಿ, ಏಕತೆ ಮತ್ತು ವಿಶ್ವಾಸದ ವೃದ್ಧಿ" ಎಂದು ತಿಳಿಸಿದರು. ಮೀಡಿಯಾ ವಿಭಾಗದಮುಖ್ಯ ಸಂಯೋಜಕರಾದ ಬ್ರಹ್ಮಾಕುಮಾರ್ ಶಾಂತನು, ಆಗಮಿಸಿದ ಪ್ರತಿನಿಧಿಗಳಿಗೆ ಸ್ವಾಗತಕೋರಿದರು. ಕಾರ್ಯಕ್ರಮದ ನಿರೂಪಣೆ ಬ್ರಹ್ಮಾಕುಮಾರಿ ಚಂದ್ರಕಲಾ, ಜೈಪುರ್ ಅವರುನಿರ್ವಹಿಸಿದರು. ಮಾಜಿ ಕುಲಪತಿ ಮನಸಿಂಗ ಪರಮಾರ ಹಾಗೂ ಕುಶಾಲ್ ಬಾವು ಠಾಕ್ರೆ, "ಇಂದಿನ ವಿಶ್ವದಲ್ಲಿಶಾಂತಿ ಮತ್ತು ಏಕತೆಯ ಅವಶ್ಯಕತೆ ಹೆಚ್ಚಿದೆ" ಎಂದು ಅಭಿಪ್ರಾಯಪಟ್ಟರು. ಪ್ರೊ. ಸಂಜಯದ್ವಿವೇದಿ, "ಪತ್ರಕರ್ತರು ಸಾಮಾಜಿಕ ಮತ್ತು ಸಾಂಸ್ಕೃತಿಕ ಶಕ್ತಿಯ ವಾಹಕರಾಗಿದ್ದು,

ದೇಶವನ್ನು ನೋಡುವ ಕಣ್ಣುಗಳಂತಿದ್ದಾರೆ" ಎಂದು ಹೇಳಿದರು.ಅಜಿತ್ ಪಾಠಕ್ (ಡೆಲ್ಲಿ), ಅಮಿತ್ ತ್ಯಾಗಿ, ನಿಲೇಶ್ ಖರೆ ಮತ್ತು ಸೋಹಿನಿ ಶಾಸ್ತ್ರಿಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.ಈ ಮಹಾಸಮ್ಮೇಳನದಲ್ಲಿ ಭಾರತ ಹಾಗೂ ನೇಪಾಳದ 1500 ಪ್ರಿಂಟ್, ಎಲೆಕ್ಟಾನಿಕ್ ಹಾಗೂಸೈಬರ್ ಮಾಧ್ಯಮ ಪ್ರತಿನಿಧಿಗಳು ಭಾಗವಹಿಸಿದ್ದಾರೆ. ಮೂರು ದಿನಗಳ ಕಾಲ ನಡೆಯುವ ಈಸಮ್ಮೇಳನದಲ್ಲಿ ರಾಜಯೋಗ ಶಿಕ್ಷಣ, ಆಂತರಿಕ ಶಕ್ತಿ, ಪರಮಾತ್ಮನೊಂದಿಗೆ ಸಂಬಂಧ,ಕರ್ಮಗತಿ, ಸೋಶಲ್ ಮೀಡಿಯಾ ಹಾಗೂ ಸಮಾಜಕ್ಕಾಗಿ ಮಾಧ್ಯಮದ ಪಾತ್ರ ಕುರಿತು ಕಮ್ಮಟಗಳುನಡೆಯಲಿವೆ. ಜೊತೆಗೆ ಮಾಧ್ಯಮ ಜಾಗೃತಿ ಮೂಡಿಸಲು 5 ವಿಶೇಷ ಪ್ರದರ್ಶನ ಮಳಿಗೆಗಳನ್ನು ಏರ್ಪಡಿಸಲಾಗಿದೆ.

# ಅಂಚೆ ಪತ್ರ ಬರೆಯುವ ಸ್ಪರ್ಧೆ

**ದಾವಣಗೆರೆ:** ಭಾರತೀಯ ಅಂಚೆ ಇಲಾಖೆ ವತಿಯಿಂದ ಡಿಸೆಂಬರ್ 8 ರವರೆಗೆ ನನ್ನ ಆದರ್ಶ ವ್ಯಕ್ತಿಗೆ ಪತ್ರ ಎಂಬ ವಿಷಯ ಕುರಿತು ಢಾಯಿ ಆಖರ ಪತ್ರ ಬರೆಯುವ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

18 ವರ್ಷ ವಯೋಮಾನದೊಳಗಿನವರು, ಮೇಲ್ಪಟ್ಟವರು ಇನ್ಲ್ಯಾಂಡ್ ಲೆಟರ್ ಕಾರ್ಡ್ ನಲ್ಲಿ 500 ಪದಗಳು, ಎನ್ವಲಪ್ ಕವನನಲ್ಲಿ 1000 ಪದಗಳ ಪತ್ರಗಳನ್ನು ಇಂಗ್ಲೀಷ್, ಹಿಂದಿ, ಕನ್ನಡ ಭಾಷೆಯಲ್ಲಿ ಬರೆದು ಅಂಚೆ ಅಧೀಕ್ಷಕರು, ದಾವಣಗೆರೆ ವಿಭಾಗಕ್ಕೆ ಕಳುಹಿಸಬಹುದು. ಹೆಚ್ಚಿನ ವಿವರಗಳಿಗೆ ಸಂತೋಷ್.ಬಿ ಮೊ.ಸಂ:8861126883 ನ್ನು ಸಂಪರ್ಕಿಸಬಹುದೆಂದು ಅಂಚೆ ವಿಭಾಗದ ಅಧೀಕ್ಷಕರಾದ ಚಂದ್ರಶೇಖರ್ ತಿಳಿಸಿದ್ದಾರೆ.

# ಕಲಾ ಪ್ರತಿಭೋತ್ಸವ

**ದಾವಣಗೆರೆ :** ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಮಕ್ಕಳು ಮತ್ತು ಯುವ ಜನರ ಕಲಾಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡುವ ಮತ್ತು ಅವರು ತಮ್ಮ ಕಲಾ ನೈಪುಣ್ಯ ವೃದ್ಧಿಗೊಳಿಸುವಂತೆ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಸ್ಪರ್ಧೆ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ.

ಬಾಲ ಪ್ರತಿಭೆ (8 ರಿಂದ 14 ವರ್ಷವಯೋಮಾನ), ಕಿಶೋರ ಪ್ರತಿಭೆ (14 ರಿಂದ 18 ವರ್ಷವಯೋಮಾನ), ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜಾನಪದ ಗೀತೆ, ಹಿಂದೂಸ್ತಾನಿ/ಕರ್ನಾಟಕ ವಾದ್ಯ ಸಂಗೀತ, ಹಿಂದೂಸ್ತಾನಿ, ಕರ್ನಾಟಕ ಶಾಸ್ತ್ರೀಯ ಸಂಗೀತದಲ್ಲಿ ಭಾಗವಹಿಸಬಹುದು. ಯುವ ಪ್ರತಿಭೆ (18 ರಿಂದ 30 ವರ್ಷ ವಯೋಮಾನ) ನನ್ನ ನೆಚ್ಚಿನ ಸಾಹಿತಿ, ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಹಿಂದೂಸ್ತಾನಿ, ಕರ್ನಾಟಕ ಶಾಸ್ತ್ರೀಯ ಸಂಗೀತ, ಚಿತ್ರಕಲೆ, ಹಿಂದೂಸ್ತಾನಿ/ಕರ್ನಾಟಕ ವಾದ್ಯ ಸಂಗೀತ, ನಾಟಕ– 10 ರಿಂದ 18 ತಂಡದ ಸದಸ್ಯರು ಭಾಗವಹಿಸಬಹುದು.

ಸ್ಪರ್ಧಿಗಳು ಸ್ವ ವಿವರದ ಅರ್ಜಿ ಸಲ್ಲಿಸಲು ಅಕ್ಟೋಬರ್ 10 ಕೊನೆಯ ದಿನವಾಗಿರುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿವರವನ್ನು ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಭವನ ದಾವಣಗೆರೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192–234849ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

# ಮನುಕುಲದ ಚ್ಯಾರಿತ್ರವನ್ನು ಶ್ರೀಮಂತಗೊಳಿಸಿದ ವಚನ ಸಾಹಿತ್ಯ



**ದಾವಣಗೆರೆ:** ಜಗತ್ತಿನ ಇತಿಹಾಸದಲ್ಲಿ ಮನುಕುಲದ ವ್ಯಕ್ತಿತ್ವಕ್ಕೆ ಮಹತ್ವ ನೀಡಿ ಮನುಕುಲದ ಚ್ಯಾರಿತ್ರವನ್ನುಶ್ರೀಮಂತಗೊಳಿಸಿ ಸಮ ಸಮಾಜವನ್ನು ನಿರ್ಮಾಣ ಮಾಡಿದ ಏಕೈಕ ಸಾಹಿತ್ಯ ವಚನ ಸಾಹಿತ್ಯವೆಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪ್ರದಾನ ಕಾರ್ಯದರ್ಶಿಗಳಾದ ಭರಮಪ್ಪ ಮೈಸೂರು

ಅಭಿಪ್ರಾಯ ಪಟ್ಟರು.ನಗರದ ಜೆ.ಹೆಚ್. ಪಟೇಲ್ ಕಾಲೇಜಿನಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತುಹಮ್ಮಿಕೊಂಡಿದ್ದ ಲಿಂ.ಶರಣೆ ಬಸಮ್ಮ ಮತ್ತು ಬುಳ್ಳಾಪುರದ ಸಿದ್ದಪ್ಪ ದತ್ತಿ ಮತ್ತು ಶರಣ ಚಿಂತನಗೋಷ್ಠಿ ಕಾರ್ಯಕ್ರಮದಲ್ಲಿ ವಚನ ಸಾಹಿತ್ಯ ಮತ್ತು ವ್ಯಕ್ತಿತ್ವ ವಿಕಸನ ಎಂಬ ವಿಷಯ ಕುರಿತುಉಪನ್ಯಾಸ ನೀಡಿದರು.

12ನೇ ಶತಮಾನದಲ್ಲಿ ಜನಸಾಮನ್ಯರು ಕರ್ಮಸಿದ್ಧಾಂತದ ಫಲವಾಗಿ ಗುಲಾಮಿ ವ್ಯಕ್ತಿತ್ವವನ್ನು ರೂಡಿಸಿಕೊಂಡು ದಮನೀಯ ಬದುಕನ್ನು ಸಾಗಿಸುತ್ತಿದ್ದರು. ಬಸವಾದಿ ಶರಣರು ತಮ್ಮಅಮೂಲ್ಯವಾದ ವಚನಗಳ ಮೂಲಕ ಎಲ್ಲಾ ವರ್ಗದ ಜನರನ್ನು ಕರ್ಮಸಿದ್ಧಾಂತದಿಂದಮುಕ್ತಗೊಳಿಸಿ ಕಾಯಕ ಸಿದ್ಧಾಂತದ ಮೂಲಕ ಸ್ವಾವಲಂಬಿ ವ್ಯಕಿತ್ವವನ್ನು ರೂಪಿಸುವ ಮೂಲಕ ಶಾಂತಿಯುತ ಸಮ ಸಮಾಜವನ್ನು ನಿರ್ಮಿಸಿದರು ಎಂದು ಅಭಿಪ್ರಾಯ ಪಟ್ಟರು. ಕಾರ್ಯಕ್ರಮದ ಉದ್ಘಾಟನೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಜೋತಿ.ಎ.ನೆರವೇರಿಸಿದರು. ಕಾರ್ಯಕ್ರಮದ ಆಧ್ಯಕ್ಷತೆಯನ್ನು ವಹಿಸಿದ್ದ ಕೆ.ಬಿ.ಪರಮೇಶ್ವರಪ್ಪ ಜಿಲ್ಲಾ ಶರಣಸಾಹಿತ್ಯ ಪರಿಷತ್ತು 12 ನೇ ಶತಮಾನದ ಶರಣರ ಮೌಲ್ಯಗಳನ್ನು ಜನಮಾನಸದಲ್ಲಿ ಹಲವಾರು

ಕಾರ್ಯಕ್ರಮಗಳ ಮೂಲಕ ಹರಡುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಾ ಬರುತ್ತಿದೆ ಎಂದುತಿಳಿಸಿದರು. ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಮಮತಾ ನಾಗರಾಜ ವಿಜೇತವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಪರಮೇಶ್ವರಪ್ಪ. ಎಂ. ಸಿರಿಗೆರೆ, ಬುಳ್ಳಾಪುರದ ಮಲ್ಲಿಕಾರ್ಜುನ

ಸ್ವಾಮಿ, ಪುಷ್ಪ ಮಲ್ಲಿಕಾರ್ಜುನಸ್ವಾಮಿ, ನಿರ್ಮಲ ಶಿವಕುಮಾರ್, ಆರ್.ಸಿದ್ದೇಶಪ್ಪ, ಜಿ.ಎಂ.ಕುಮಾರಪ್ಪ, ಬಿ.ಟಿ.ಪ್ರಕಾಶ್, ವಿನೋದ ಅಜಗಣ್ಣನವರ್, ಎನ್.ಟಿ. ಸಣ್ಣಮಂಜುನಾಥ, ಮುಸ್ತಾಫ್, ಕರಿಬಸಪ್ಪ ಮುಂತಾದವರು ಭಾಗವಹಿಸಿದ್ದರು. ಚೇತನ.ಹೆಚ್. ಸರ್ವರನ್ನು ಸ್ವಾಗಿಸಿದರು, ದೀಪಾ ಚೆನ್ನಿಕಟ್ಟೆ ವಂದಿಸಿದರು. ಶೈಲಾ.ಎನ್.ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು.

# ನಿಧನ ಸುದ್ದಿಗಳು

## ಸಿ. ಮನೋಜ್ ಕುಮಾರ್ ನಿಧನ

**ದಾವಣಗೆರೆ:** ನಗರದ ಎಂ.ಸಿ.ಸಿ. 'ಬಿ' ಬ್ಲಾಕ್ ನಿವಾಸಿ ಸಿ. ಮನೋಜ್ ಕುಮಾರ್ (61) ಶನಿವಾರ ಹೃದಯಾಘಾತದಿಂದ ನಿಧನರಾದರು. ಅವರಿಗೆ ಪತ್ನಿ, ಒಬ್ಬ ಪುತ್ರ, ಒಬ್ಬ ಪತ್ರಿ ಇದ್ದಾರೆ. ಅಂತ್ಯಕ್ರಿಯೆ ಭಾನುವಾರ ಗ್ಲಾಸ್ ಹೌಸ್ ಬಳಿ ಇರುವ ಹಿಂದು ರುದ್ರಭೂಮಿಯಲ್ಲಿ ನಡೆದಿದೆ. ಮನೋಜ್ ಕುಮಾರ್ ದಾವಣಗೆರೆಯ ಸಾಂಸ್ಕೃತಿಕ, ಸಾಮಾಜಿಕ, ಕ್ರೀಡಾ ಮತ್ತು ರಾಜಕೀಯ ವಲಯದಲ್ಲಿ ತೆರೆಯ ಹಿಂದೆ ಇದ್ದುಕೊಂಡು ಕೆಲಸ ಮಾಡಿದ್ದರು.

## ಕುಂಬಾರ ಹೊಸಮನೆ ಮಲ್ಲೇಶಪ್ಪ

**ನ್ಯಾಮತಿ:** ಪಟ್ಟಣದ ಹಳೆ ಬಸ್ ನಿಲ್ದಾಣದ ಬಳಿಯ ನಿವಾಸಿ ಕುಂಬಾರ ಹೊಸಮನೆ ಮಲ್ಲೇಶಪ್ಪ(80) ಶನಿವಾರ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರರು, ಒಬ್ಬ ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಪಟ್ಟಣದ ಹಿಂದು ರುದ್ರಭೂಮಿಯಲ್ಲಿ ನಡೆಯಿತು.

## ಮುಕ್ಕಣ್ಣಾರ ಶೇಖರಪ್ಪ

**ನ್ಯಾಮತಿ:** ತಾಲೂಕಿನ ಜೀನಹಳ್ಳಿ ಗ್ರಾಮದ ನಿವಾಸಿ ಮುಕ್ಕಣ್ಣಾರ ಶೇಖರಪ್ಪ(82) ಅನಾರೋಗ್ಯದಿಂದ ಶುಕ್ರವಾರ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರಿ, ಒಬ್ಬ ಪುತ್ರ ಇದ್ದಾರೆ. ಅಂತ್ಯಕ್ರಿಯೆ ಶನಿವಾರ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿತು.

# ಕರ್ನಾಟಕ ಮೂಲದ ವಿ.ಸಿ. ಸಜ್ಜನರ ಹೈದರಾಬಾದ್ ಪೊಲೀಸ್ ಆಯುಕ್ತರಾಗಿ ನೇಮಕ



**ಹೈದರಾಬಾದ :** ಕರ್ನಾಟಕ ರಾಜ್ಯಕ್ಕೆ ಸೇರಿದ ಹುಬ್ಬಳ್ಳಿ ಮೂಲದ 1996ನೇ ಬ್ಯಾಚ್ ಐಪಿಎಸ್ ಅಧಿಕಾರಿ ಶ್ರೀ ವಿ.ಸಿ. ಸಜ್ಜನರ್ ಅವರನ್ನು ಹೈದರಾಬಾದ್ ನಗರ ಪೊಲೀಸ್ ಆಯುಕ್ತರಾಗಿ ತೆಲಂಗಾಣ ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ. ಅವರು ಆರಂಭದಲ್ಲಿ ಆಂಧ್ರ ಪ್ರದೇಶ ಕ್ಯಾಡರ್‌ಗೆ ಸೇರಿದ್ದು, ರಾಜ್ಯ ವಿಭಜನೆಯ (2014)ನಂತರ ತೆಲಂಗಾಣ ಕ್ಯಾಡರ್‌ಗೆ ಸೇರ್ಪಡೆಯಾದರು.

ಶ್ರೀ ಸಜ್ಜನರ್ ಹುಬ್ಬಳ್ಳಿಯವರಾಗಿದ್ದು, ತಂದೆ ಶ್ರೀ ಸಿ.ಬಿ. ಸಜ್ಜನರ್ ಮತ್ತು ತಾಯಿ ಶ್ರೀಮತಿ ಗಿರಿಜಾ ಸಜ್ಜನರ್. ಅವರು ಹುಬ್ಬಳಿಯ ಜೆ.ಜಿ. ವಾಣಿಜ್ಯ ಮಹಾವಿದ್ಯಾಲಯದಿಂದ ಬಿ.ಕಾಂ ಪದವಿ ಮತ್ತು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಬಿ.ಎ ಪದವಿ ಪಡೆದಿದ್ದಾರೆ. ಲಾಲ್ ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಆಡಳಿತ ಅಕಾಡೆಮಿ (ಮಸೂರಿ) ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ರಾಷ್ಟ್ರೀಯ ಪೊಲೀಸ್ ಅಕಾಡೆಮಿ (ಹೈದರಾಬಾದ್) ಯಲ್ಲಿ ಪೊಲೀಸ್ ತರಬೇತಿ ಪಡೆದ ಬಳಿಕ ತಮ್ಮ ವೃತ್ತಿಜೀವನ ಆರಂಭಿಸಿದರು.

ಪೊಲೀಸ್ ಸೇವೆಯ ಆರಂಭದಲ್ಲಿ ಅವರು ಜಂಗಾಂ (ವಾರಂಗಲ್ ಜಿಲ್ಲೆ) ಮತ್ತು ಪುಳಿವೇಂದ್ರು (ಕಡಪಾ ಜಿಲ್ಲೆ)ಗಳಲ್ಲಿ ಸಹಾಯಕ ಪೊಲೀಸ್ ಅಧೀಕ್ಷಕರಾಗಿ (ಂಖಕ) ಕಾರ್ಯ ನಿರ್ವಹಿಸಿದರು. ನಂತರ ನಾಲ್ಗೊಂಡ, ಕಡಪಾ, ಗುಂಟೂರು, ವಾರಂಗಲ್ ಮತ್ತು ಮೆದಕ್ ಜಿಲ್ಲೆಗಳಲ್ಲಿ ಪೊಲೀಸ್ ಅಧೀಕ್ಷಕರಾಗಿ (ಖಕ) ಸೇವೆ ಸಲ್ಲಿಸಿದರು. ಇದಲ್ಲದೆ, ಅಪರಾಧ ತನಿಖಾ ವಿಭಾಗದ ಆರ್ಥಿಕ ಅಪರಾಧ ವಿಭಾಗ (ಇಔಈ), ಔಅಖಿಔಕಗಖ ದಾಳಿಕೋರರ ವಿರುದ್ಧದ ಕಾರ್ಯಾಚರಣೆ ವಿಭಾಗದ ಖಕ ಹಾಗೂ 6ನೇ ಬಟಾಲಿಯನ್ ಆಂಧ್ರ ಪ್ರದೇಶ ವಿಶೇಷ ಪೊಲೀಸ್ (ಂಕಖಕ) ಮಂಗಳಗಿರಿಯ ಕಮಾಂಡಾಂಟ್ ಆಗಿಯೂ ಕೆಲಸ ಮಾಡಿದರು.

ಅನಂತರ ಡಿಐಜಿ ಹಾಗೂ ಐಜಿ ಹುದ್ದೆಗಳಿಗೆ ಬಡ್ತಿ ಪಡೆದು ಮಾರ್ಚ್ 2018ರವರೆಗೆ ಗುಪ್ತಚರ ಇಲಾಖೆಯಲ್ಲಿ ಸೇವೆ ಸಲ್ಲಿಸಿದರು. ಮಾರ್ಚ್ 2018ರಿಂದ ಆಗಸ್ಟ್ 2021ರವರೆಗೆ ಸೈಬರಾಬಾದ್ ಪೊಲೀಸ್ ಆಯುಕ್ತರಾಗಿ ಕಾರ್ಯನಿರ್ವಹಿಸಿದರು. ಬಳಿಕ ಸೆಪ್ಟೆಂಬರ್ 2021ರಲ್ಲಿ ತೆಲಂಗಾಣ ರಾಜ್ಯ ರಸ್ತೆ ಸಾರಿಗೆ ನಿಗಮದ (ಖಿಖಖಿಅ) ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ಸ್ವೀಕರಿಸಿದರು. ಸಾರಿಗೆ ಇಲಾಖೆಯಲ್ಲಿ ಅನೇಕ ಬದಲಾವಣೆಗಳನ್ನು ತಂದು ನಷ್ಟದಲ್ಲಿದ್ದ ಆರ್‌ಟಿಸಿ ಲಾಭದಾಯಕ ಸಾರಿಗೆ ನಿಗಮವಾಗಿಸಿದ ಕಾರ್ಯದ ಶ್ರೇಯಸ್ಸು ಸಜ್ಜನರ ಅವರಿಗೆ ಸಲ್ಲುತ್ತದೆ.


ಇದೀಗ ಹೈದರಾಬಾದ್ ಪೊಲೀಸ್ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡ ನಂತರ ಶ್ರೀ ವಿ.ಸಿ. ಸಜ್ಜನರ್, ಕಾನೂನು-ಸುವ್ಯವಸ್ಥೆ ಮತ್ತು ಪೊಲೀಸ್ ವ್ಯವಸ್ಥೆಗೆ ಮತ್ತಷ್ಟು ಬಲ ತುಂಬಲಿದ್ದಾರೆ. ಬರುವ ದಿನಗಳಲ್ಲಿ ತೆಲಂಗಾಣ ರಾಜ್ಯದ ಡಿಜಿಪಿ ಹುದ್ದೆಗೆ ಬಡ್ತಿ ಪಡೆಯಲಿ ಎಂದು ಸಜ್ಜನರ ಅವರ ಅಭಿಮಾನಿಗಳ ಹಾರೈಕೆಯಾಗಿದೆ. ಕಾದು ನೋಡೋಣ..

ನಗರದ ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘದ ಅಧ್ಯಕ್ಷ ಧರ್ಮೇಂದ್ರ ಪೂಜಾರಿ ಹಾಗೂ ಉಪಾಧ್ಯಕ್ಷ ಬಸವರಾಜ ಲಾರಾ ನೂತನವಾಗಿ ನೇಮಕಗೊಂಡ ವಿ ಸಿ ಸಜ್ಜನರ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಮಹಾನಗರ ಪಾಲಿಕೆಯ ಅಧಿಕಾರಿಗಳ ಕರ್ಮಕಾಂಡ ಕರವೇ ಸ್ವಾಭಿಮಾನಿ ಬಣ ಪ್ರತಿಭಟನೆ

**ಶಿವಮೊಗ್ಗ :** ನಗರದ ಜೆ ಎಚ್ ಪಟೇಲ್ ಬಡಾವಣೆಯಲ್ಲಿನ ಹಾಲಿ ಚಾಲನೆಯಲ್ಲಿರುವ ಒಳಚರಂಡಿ ಕೊಳವೆ ಮಾರ್ಗಗಳನ್ನು ನಾರ್ಥನ್ ಔಟ್ ಪಾಲ್ ಗೆ ಲಿಂಕ್ ಮಾಡುವ ಕಾಮಗಾರಿಯನ್ನು ತರಾತುರಿಯಲ್ಲಿ ಪ್ರಾರಂಭ ಮಾಡಿದ್ದು ಅಂದಾಜು ವೆಚ್ಚ 83.70, ಲಕ್ಷದ ಕಾಮಗಾರಿಗೆ ನಿಯಮದ ಪ್ರಕಾರ ಕರ್ನಾಟಕ ನೀರಾವರಿ ನಿಗಮ ನಿಯಮಿತದಿಂದ ಅನುಮತಿಯನ್ನು ತೆಗೆದುಕೊಂಡು ಕಾಮಗಾರಿಯನ್ನು ಪ್ರಾರಂಭಿಸಬೇಕಿತ್ತು, ಆದರೆ ತರಾತುರಿಯಲ್ಲಿ ಮಹಾನಗರ ಪಾಲಿಕೆಯ ಅಧಿಕಾರಿಗಳು ತುಂಗಾ ಮೇಲ್ದಂಡೆ ಯೋಜನಾ ವಿಭಾಗದಿಂದ ಮೇಲ್ಕಂಡ ಕಾಮಗಾರಿಗೆ ಸಂಬಂಧಿಸಿದಂತೆ ನಿರಾಕ್ಷೇಪಣಾ ಪತ್ರ ಪಡೆಯದೆ ಕಾಮಗಾರಿ ಮಾಡಿರುವುದು ಕರ್ತವ್ಯ ಲೋಪವಾಗಿದೆ ಹಾಗೆಯೇ ತುಂಗಾ ಮೇಲ್ದಂಡೆ ಯೋಜನೆ ವಿಭಾಗದಿಂದ ಅನುಮತಿ ಪತ್ರ ಸಿಗುವ ಮುನ್ನವೇ ತಮ್ಮ ಇಲಾಖೆಯ ಅಧಿಕಾರಿಗಳು ಈ ಕಾಮಗಾರಿಗೆ ಸಂಬಂಧಿಸಿದಂತೆ ಕಾರ್ಯ ಆದೇಶ ನೀಡಿದ್ದಾರೆ ಇದು ಕೂಡ ಕರ್ತವ್ಯ ಲೋಪವಾಗಿದೆ

ಉದ್ದೇಶ ಒಳ್ಳೆಯದಾಗಿದ್ದರು ಕೂಡ ಸರ್ಕಾರಿ ಕಾಮಗಾರಿಗಳನ್ನು ನಿರ್ವಹಿಸುವಾಗ ನಿಯಮಗಳನ್ನು ಪಾಲಿಸದೆ ಕಾಮಗಾರಿಯನ್ನು ಪ್ರಾರಂಭ ಮಾಡುವುದು ಕೂಡ ಕರ್ತವ್ಯ ಲೋಪವಾಗುತ್ತದೆ ಹಾಗೆಯೇ ತರಾತುರಿಯಲ್ಲಿ ಕಾಮಗಾರಿ ಪ್ರಾರಂಭ ಮಾಡುವುದು ಹಲವು ಅನುಮಾನಗಳನ್ನು ಹುಟ್ಟಿಸುತ್ತದೆ ಆದ್ದರಿಂದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತಾವುಗಳು ಸಂಬಂಧಿಸಿದ ಅನಧಿಕೃತ ಕಾಮಗಾರಿಗಳನ್ನು ತೆಗೆಸಬೇಕು ಅನುಮತಿ ಸಿಗುವವರೆಗೂ ಕೆಲಸ ಮಾಡದಂತೆ ನೋಡಿಕೊಳ್ಳಬೇಕು ತರಾತುರಿಯಲ್ಲಿ ಕಾರ್ಯ ಪ್ರಾರಂಭಿಸಿದ



ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಮಹಾನಗರ ಪಾಲಿಕೆ ಇಂಜಿನಿಯರ್ ಸಹಾಯಕ ಕಾರ್ಯಪಾಲಕ ಅಭಿಯಂತರು ಹಾಗೂ ಮಹಾನಗರ ಪಾಲಿಕೆಯ ಕಾರ್ಯ ಪಾಲಕ ಅಭಿಯಂತರರ ವಿರುದ್ಧ ದೂರು ದಾಖಲಿಸಿ ಕೊಂಡು ಕಾನೂನು ರೀತಿಯಲ್ಲಿ ಕ್ರಮ ತೆಗೆದುಕೊಳ್ಳಬೇಕು ಎಂದು ತಮ್ಮಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣ ಆಗ್ರಹಿಸುತ್ತದೆ ತಾವು ಯಾವುದೇ ರೀತಿಯ ಕ್ರಮ ಕೈಗೊಳ್ಳದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟದ ಮುಖಾಂತರ ಮಹಾನಗರ ಪಾಲಿಕೆಗೆ ಮುತ್ತಿಗೆ ಹಾಕಲಾಗುವುದು ಎಂದು ಜಿಲ್ಲಾಧ್ಯಕ್ಷ ಕಿರಣ್ ಕುಮಾರ್ ಎಚ್ ಎಸ್ ತಿಳಿಸಿದ್ದಾರೆ ಈ ಕರ್ತವ್ಯ ಲೋಪ ವಿರುದ್ಧವು ಸಹ ಕಾರ್ಯಪಾಲಕ ಅಭಿಯಂತರು ತುಂಗಾ ಮೇಲ್ದಂಡೆ ಯೋಜನೆಯ ವಿಭಾಗಕ್ಕೂ ಸಹ ತಮ್ಮ ವ್ಯಾಪ್ತಿಗೆ ಒಳಪಡುವ ಜಾಗದಲ್ಲಿ ನಿರಕ್ಷೇಪಣಾ ಪತ್ರವನ್ನು ಪಡೆಯದೆ ಕಾರ್ಯನಿರ್ವಹಿಸಿದವರ ವಿರುದ್ಧ ಮಹಾನಗರ ಪಾಲಿಕೆಯ ಗುತ್ತಿಗೆದಾರ ಇಂಜಿನಿಯರ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಮಹಾನಗರ ಪಾಲಿಕೆಯ ಕಾರ್ಯ ಪಾಲಕ ಅಭಿಯಂತರರ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಅವರಲ್ಲೂ ಸಹ ಒಂದು ಮನವಿಯನ್ನು ಸಲ್ಲಿಸಲಾಯಿತು ಇಲ್ಲದಿದ್ದಲ್ಲಿ ಮುಂದಿನ ದಿನ ತುಂಗಾ ಮೇಲ್ದಂಡೆ ಯೋಜನೆಯ ಕಚೇರಿಗೆ ಮುತ್ತಿಗೆಯನ್ನು ಹಾಕಲಾಗುವುದು ಎಂದು ಎಚ್ಚರಿಸಲಾಯಿತು. ಈ ಸಂದರ್ಭದಲ್ಲಿ ಪದಾಧಿಕಾರಿಗಳಾದ ನಗರಾಧ್ಯಕ್ಷರಾದ ಜೀವನ ಮಹಮ್ಮದ್ ರಫಿ ಯುವ ಘಟಕ ಅಧ್ಯಕ್ಷರಾದ ಸಂತೋಷ್ ಪ್ರಚಾರ ಸಮಿತಿಯ ಅಧ್ಯಕ್ಷರಾದ ಎನ್, ಮಾಲತೇಶ್, ಪ್ರವೀಣ್ ಕುಮಾರ್ ಗ್ರಾಮಾಂತರ ಅಧ್ಯಕ್ಷರಾದ ಮಂಜುನಾಥ್ ಹೆಚ್ ಎನ್ ನಾಗರಾಜ್ ಮುಂತಾದ ಪದಾಧಿಕಾರಿಗಳು ಭಾಗವಹಿಸಿದ್ದರು.

## ಸ್ವಚ್ಚತಾ ಹೀ ಸೇವಾ ಅಭಿಯಾನ

**ದಾವಣಗೆರೆ:** ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಅವರು ಹಳೇಬಾತಿ ಗ್ರಾಮದಲ್ಲಿ ಗುರುವಾರ ಶ್ರಮದಾನ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ನಂತರ ಸ್ವತಃ ಅವರೇ ಸ್ವಚ್ಚ ವಾಹಿನಿಯನ್ನು ಚಲಾಯಿಸಿ ಮನೆ ಮನೆಗೆ ಹೋಗಿ ಕಸ ಸಂಗ್ರಹಿಸುವ ಮೂಲಕ ಸ್ವಚ್ಛತಾ ಹಿ ಸೇವಾ ಸ್ವಚ್ಛತೆಯೇ ಸೇವೆ ಪಾಕ್ಷಿಕ -2025 ಕಾರ್ಯಕ್ರಮ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು ಚುನಾಯಿತ ಸದಸ್ಯರು ಗ್ರಾಮಸ್ಥರು ಸ್ವ-ಸಹಾಯ ಸಂಘದ ಮಹಿಳೆಯರು ಹಾಜರಿದ್ದರು.

## ತಾಂಡ ಅಭಿವೃದ್ಧಿ ನಿಗಮ: ಕಲಾ ಮಾಳವ್ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ ಬಂಜಾರ ಸಮುದಾಯದ ಸಾಂಪ್ರದಾಯಿಕ ಸಂಸ್ಕೃತಿ ಮತ್ತು ಕಲೆಗಳನ್ನು ಉಳಿಸಿ-ಬೆಳಸಿ, ಪುನಶ್ಚೇತನಗೊಳಿಸುವ ಉದ್ದೇಶದಿಂದ ಮತ್ತು ಬಂಜಾರ ಕಲಾವಿದರ ಪ್ರತಿಭೆಯನ್ನು ಹೊರಹೊಮ್ಮಿಸಲು ಬಂಜಾರರ ಬಹುಮುಖಿ ಕಲಾ ಪ್ರತಿಭಾನ್ವೇಷಣೆ-ಕಲಾ ಮಳಾವ್ ಕಾರ್ಯಕ್ರಮಕ್ಕೆ ಅರ್ಹ ಬಂಜಾರ ಸಮುದಾಯದ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 28 ಕೊನೆಯ ದಿನವಾಗಿದೆ.

ಕಾರ್ಯಕ್ರಮದಲ್ಲಿ , ವಾಜಾ ವಾದ್ಯ ಸಮೂಹ ಗೀತೆ, ಗಾಯನ ಮತ್ತು ನೃತ್ಯ, ಜಾನಪದ ನೃತ್ಯ, ಘೂಮರ್ ನೃತ್ಯ, ಪುರುಷರ ಲೇಹಂಗಿ ನೃತ್ಯ, ನಂಗಾರ ಠೋಳಿ ಬಿಡಿಸುವ ನೃತ್ಯ, ಕಥನ ಗಾಯನ, ಮಹಿಳೆಯರ ಸಾಂಪ್ರದಾಯಕ ಗಾಯನ, ಸುಗಮ ಸಂಗೀತ, ಬಾಲಕ ಮತ್ತು ಬಾಲಕಿಯರ ಕಲಾ ನೃತ್ಯ , ಢಾವಲೋ ಮತ್ತು ಹವೇಲಿ ನೃತ್ಯ, ಪುರುಷರ ಸಾಂಪ್ರದಾಯಕ ಕಡಿ ಪ್ರಕಾರುಗಳಿಗೆ ಅರ್ಹ ಆಸಕ್ತ ಕಲಾವಿದರಿಂದ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಪ್ರಕಟಣೆ ತಿಳಿಸಿದೆ.

## ಅ.3 ಸಂಸೆ ಗ್ರಾ.ಪಂ. ಕಚೆರಿಯಲ್ಲಿ ಸಾರ್ವಜನಿಕ ಸಭೆ

**ಚಿಕ್ಕಮಗಳೂರು:** ಕಳಸ ತಾಲ್ಲೂಕು ಕಳಸ ಹೋಬಳಿ ಸಂಸೆ ಗ್ರಾಮದ ಸ.ನಂ. 294 ರಲ್ಲಿ 2 ಎಕರೆ 35 ಗುಂಟೆ ಪ್ರದೇಶವನ್ನು ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆ ಉದ್ದೇಶಕ್ಕಾಗಿ ಸಂಸೆ ಗ್ರಾಮ ಪಂಚಾಯಿತಿಗೆ ಭೂಮಿಯನ್ನು ಕಾಯ್ದಿರಿಸಿದ್ದು, ಈ ಪ್ರದೇಶದಲ್ಲಿರುವ ಒಟ್ಟು 135 ಅಕೇಶಿಯ ಜಾತಿಯ ಮರಗಳನ್ನು ಕಡಿತಲೆ ಮಾಡಲು ಉದ್ದೇಶಿಸಲಾಗಿದೆ.ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆಯಂತೆ ಸಾರ್ವಜನಿಕ ಉಇದ್ದೇಶಕ್ಕೆ 50ಕ್ಕಿಂತ ಹೆಚ್ಚು ಮರಗಳನ್ನು ಕಡಿತಲೆ ಮಾಡಲು ಅನುಮತಿ ನೀಡುವ ಮುನ್ನ ಸಾರ್ವಜನಿಕರಿಂದ ಆಕ್ಷೇಪಣೆ, ಅಹವಾಲು ಸ್ವೀಕರಿಸಿ ಕ್ರಮ ಕೈಗೊಳ್ಳಲಾಗುವುದು. ಈ ಹಿನ್ನೆಲೆಯಲ್ಲಿ ಅಕ್ಟೋಬರ್ 3 ರಂದು ಬೆಳಿಗ್ಗೆ 11 ರಿಂದ 12.30 ಗಂಟೆಯವರೆಗೆ ಸಂಸೆ ಗ್ರಾ.ಪಂ. ಕಾರ್ಯಾಲಯದಲ್ಲಿ ಆಕ್ಷೇಪಣೆ, ಅಹವಾಲು ಸಭೆಯನ್ನು ಆಯೋಜಿಸಲಾಗಿದೆ.ಈ ಸಭೆಗೆ ಸಾರ್ವಜನಿಕರು ಖುದ್ದಾಗಿ ಹಾಜರಾಗಿ ಯಾವುದಾದರೂ ಆಕ್ಷೇಪಣೆ, ಅಹವಾಲುಗಳನ್ನು ಸಲ್ಲಿಸಬಹುದು. ಅಥವಾ ಅಂದು ಮಧ್ಯಾಹ್ನ 12.30ರ ಒಳಗೆ ಲಿಖಿತ ಆಕ್ಷೇಪಣೆ, ಅಹವಾಲನ್ನು ಮುದ್ದಾಂ, ಇಲ್ಲವೆ ಅಂಚೆಯ ಮುಖಾಂತರ ಅಥವಾ ಇ-ಮೇಲ್ ವಿಳಾಸÀ(dcfkoppa@gmail.com <mailto:dcfkoppa@gmail.com>) ದ ಮುಖಾಂತರ ಕೊಪ್ಪ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸಲ್ಲಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಅಲ್ಪಸಂಖ್ಯಾತ ಸಮುದಾಯದವರಿಗೆ ಸಾಲ ಸೌಲಭ್ಯ

**ಚಿಕ್ಕಮಗಳೂರು:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ಸಂಬಂಧಿಸಿದಂತೆ ವಿವಿಧ ಯೋಜನೆಗಳಡಿ ಜಿಲ್ಲೆಯ ಮತೀಯ ಅಲ್ಪಸಂಖ್ಯಾತ ಜನಾಂಗದವರಿಂದ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿದೇಶಿ ವ್ಯಾಸಂಗಕ್ಕೆ ಸಾಲ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಶ್ರಮಶಕ್ತಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ನೇರ ಸಾಲ ಯೋಜನೆ, ಸಾಂತ್ವನ ಯೋಜನೆ, ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ಪ್ರೋತ್ಸಾಹ ಧನ ಯೋಜನೆಯಡಿ ಆರ್ಥಿಕ ನೆರವು ಕಲ್ಪಿಸಲಾಗುವುದು. ವೆಬ್‌ಸೈಟ್ (http://kmdconline.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ಅಕ್ಟೋಬರ್ 16ರ ಒಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿ.ಪಂ. ಹಿಂಭಾಗ ರೇಷ್ಮೆ ಇಲಾಖೆ ಕಟ್ಟಡದಲ್ಲಿರುವ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ(08262-295843)ಯನ್ನು ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಡವಿಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ: ಶ್ರೀದೇವಿ ಪುರಾಣ ಪ್ರವಚನ

# ನವರಾತ್ರಿ ಹಬ್ಬದ ಆಚರಣೆ ಆತ್ಮಜ್ಞಾನದ ಪ್ರತೀಕವೇ ದೇವಿ ಪುರಾಣ

ಗದಗ: ನಮ್ಮ ದೇಶದಲ್ಲಿ ಶಕ್ತಿ ಆರಾಧನೆ ಬಹು ಪ್ರಾಚೀನವಾದುದು. ಶಿವ-ಶಕ್ತಿಯರ ಸಂಪುಟವೇ ವೀರಶೈವ ಧರ್ಮ. ಶಿವರಾತ್ರಿ ಹಾಗೂ ನವರಾತ್ರಿಗಳು ಬಹಳ ಶ್ರೇಷ್ಠವಾದು. ನವರಾತ್ರಿಯಲ್ಲಿ ದೇವಿಯ ಆರಾಧನೆಯು 9 ರೂಪದಲ್ಲಿ ನಡೆಯುವುದು. 4ನೇ ದಿನದಲ್ಲಿ ಕುಷ್ಮಾಂಡು ದೇವಿಯ ಅವತಾರ ಶಕ್ತಿ ಹಾಗೂ ಸಂತೋಷವನ್ನು ನೀಡುವಳು. ಅದರ ಸಾಂಕೇತವು ಜಗನ್ಮಾತೆ ಎಲ್ಲರಿಗೂ ಶಕ್ತಿಯನ್ನು ನೀಡಲಿ ಎಂದು ಸೂಡಿ ಜುಕ್ತಿಹಿರೇಮಠದ ಶ್ರೀಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಶುಭ ಹಾರೈಸಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶ್ರೀದೇವಿ ಮಹತ್ಮೆಯು ತತ್ವಪ್ರಧಾನವಾದುದು. ದೇವಿ ಪುರಾಣ ಬ್ರಹ್ಮಾಂಡ ಹಾಗೂ ಪಿತಾಂಡ ಸ್ಥಿತಿಯನ್ನು ತಿಳಿಸಿಕೊಡುವುದು. ಲೋಕದ ವೈರಿಗಳಂತೆ ದೇಹದಲ್ಲಿ ವೈರಿಗಳು ಇರುತ್ತಾರೆ. ಅವರನ್ನು ದಹನ ಮಾಡುವುದೇ ನಿಜಶಕ್ತಿ ಉದ್ದೇಶ. 14 ಬಾಗಿಲುಗಳಿಂದ ನಮ್ಮ ದೇಹಕ್ಕೆ ಜ್ಞಾನ, ಅನುಭವ ಸಿಗುವುದು. 5 ಜ್ಞಾನೇಂದ್ರಯಗಳು, 5 ಕರ್ಮಂದ್ರಿಯಗಳು ಹಾಗೂ 4 ಅಂತಃಕರಣಗಳು. ಇವುಗಳು 14 ಲೋಕಗಳ ಪ್ರತೀಕ. ಆ 14 ಲೋಕಗಳಲ್ಲಿ ನಡೆಯುವುದನ್ನು ತೋರಿಸುತ್ತವೆ. ಮನಸ್ಸು, ಬುದ್ಧಿ, ಆತ್ಮ, ಇಂದ್ರಿಯಗಳಿಗೆ ಅಂತಹ ವೈರಿಗಳನ್ನು ಸೆದೆಬಡಿಯಬೇಕು. ಆಗ ಜೀವ ಸದ್ಗತಿಯನ್ನು ಪಡೆಯಲು ಸಾಧ್ಯ. ಆ ದೃಷ್ಟಿಯಿಂದ ದೇಶದ ತುಂಬೆಲ್ಲಾ ನವರಾತ್ರಿಯ ಹಬ್ಬದ




ಆಚರಣೆ ಆತ್ಮಜ್ಞಾನದ ಪ್ರತೀಕವೇ ದೇವಿ ಪುರಾಣ ಎಂದು ಶ್ರೀಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ನವರಾತ್ರಿ ಆಚರಣೆಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಹಿರಿಯ ತೆರಿಗೆ ಸಲಹೆಗಾರರಾದ ವಿಜಯಕುಮಾರ ಮಾಟಲದಿನ್ನಿ, ಶ್ರೀಮತಿ ಸತ್ಯವತಿ ಮಟಲದಿನ್ನಿ, ಗಣ್ಯ ಉದ್ದಿಮೆದಾರರಾದ ಸೋಮಣ್ಣ ಪವಾಡಶೆಟ್ಟರ, ಶ್ರೀಮತಿ ಜೋತಿ ಪವಾಡಶಟ್ಟರ, ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷರಾದ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ.ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ. ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ಗಣ್ಯರನ್ನು ಸನ್ಮಾನಿಸಲಾಯಿತು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಕೋಶಾಧ್ಯಕ್ಷರಾದ ವಿರುಪಣ್ಣ ಬಳ್ಳೊಳ್ಳಿ ಸ್ವಾಗತಿಸಿದರು. ವಿ.ಎಂ, ಕುಂದ್ರಾಳಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಉಮೇಶ ಹುಬ್ಬಳ್ಳಿ ವಂದಿಸಿದರು.

# 13 ಯೋಜನೆಗಳಡಿ ಅರ್ಜಿ ಆಹ್ವಾನ

**ಗದಗ :** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025-26ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದನ್ವಯ ಸುವಿಧಾ ಯೋಜನೆ ಇವರಿಂದ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗುತ್ತಿದೆ.

ಆನಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುವ ಯೋಜನೆಗಳ ಪಟ್ಟಿ

ಯೋಜನೆಗಳ ವಿವರ : ಆಧಾರ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರ ಚಾಲಿತ ದ್ವಿಚಕ್ರ ವಾಹನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆ, ಸಾಧನೆ ಸಲಕರಣೆಗಳ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆ, ಪ್ರತಿಭೆ ಯೋಜನೆಗಳು ಒಳಗೂಂಡಿವೆ. ಯೋಜನೆಗಳಿಗೆ 2025-26ನೇ ಸಾಲಿಗೆ ವಿಕಲಚೇತನ ಫಲಾನುಭವಿಗಳು ಆನಲೈನ್ ಸೇವಾ ಸೀಂಧು ತಂತ್ರಾಂಶದ ಮೂಲಕ ಮೂಲಕ ಗ್ರಾಮ ಒನ್, ಮತ್ತು ಕರ್ನಾಟಕ ಒನ್ ಹಾಗೂ ನೇರವಾಗಿಯು ಸಹ ವಿಕಲಚೇತನರ ವ್ಯಕ್ತಿಗಳು ಅರ್ಜಿ ಸಲ್ಲಿಸಲು ಸೇವಾಸಿಂಧು (https://sevasindhu.karnataka.gov.in/Sevasindhu/Kannda) ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:15/10/2025 ರವರೆಗೆ ದಿನಾಂಕವನ್ನು ಮುಂದೂವರೆಸಿಲಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾಲ್ಲೂಕ ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029 ರ ದೂರವಾಣಿ ಸಂಖ್ಯೆ: 08372-220419 ಮೂಲಕ ಸಂಪರ್ಕಿಸಬಹುದು ಎಂದು ಅಂಗವಿಕಲರ ಕಲ್ಯಾಣಾಧಿಕಾರಿಗಳು ಕೆ. ಮಹಾಂತೇಶ ತಿಳಿಸಿರುತ್ತಾರೆ.

# "ಏಕ್ ದಿನ್ ಏಕ್ ಘಂಟಾ ಏಕ್ ಸಾಥ್" ಶ್ರಮದಾನ ಕಾರ್ಯಕ್ರಮ

**ಗದಗ :** ಸಹಕಾರ ಇಲಾಖೆ ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ ಗದಗ ಕೆ.ಸಿ.ಸಿ. ಬ್ಯಾಂಕ್ ಲಿ ಧಾರವಾಡ, ಕೆ.ಎಂ.ಎಫ್ ಧಾರವಾಡ ಹಾಗೂ ಗದಗ ಜಿಲ್ಲೆಯ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ಸಹಕಾರ ವರ್ಷಾಚರಣೆ 2025 ರ ಅಂಗವಾಗಿ ಹಾಗೂ ಸ್ವಚ್ಛತಾ ಹಿ ಸೇವಾ-2025 ಹಾಗೂ ಸ್ವಚ್ಛತಾ ಮೇ ಸಹಕಾರ ಸಹಯೋಗದೊಂದಿಗೆ "ಏಕ್ ದಿನ್ ಏಕ್ ಘಂಟಾ ಏಕ್ ಸಾಥ್" ಶ್ರಮದಾನ ಕಾರ್ಯಕ್ರಮವು ಗುರುವಾರ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ ಗದಗ ಸಭಾಭವನದಲ್ಲಿ ಜರುಗಿತು.

ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿ ಬೆಂಗಳೂರು ಇದರ ನಿರ್ದೇಶಕರಾದ ಎಚ್. ಜಿ ಹಿರೇಗೌಡ್ರ ಅವರು ಮಾತನಾಡುತ್ತಾ

ಭಾರತ ಸರ್ಕಾರದ ಮಹತ್ವಾಕಾಂಕ್ಷಯ ಯೋಜನೆ ಸ್ವಚ್ಛ ಭಾರತ ಅಭಿಯಾನ ಅಕ್ಟೋಬರ್ 2, 2014 ರಲ್ಲಿ ಪ್ರಾರಂಭಗೊಂಡಿರುತ್ತದೆ. ಆದರೆ ಕೇಂದ್ರ ಸರ್ಕಾರವು 2025ನೇ ವರ್ಷವನ್ನು ಅಂತರಾಷ್ಟ್ರೀಯ ಸಹಕಾರ ವರ್ಷ ಎಂದು ಘೋಷಿಸಿದ್ದು ಅದರ ಧ್ಯೇಯ ಸಹಕಾರ ಸಂಸ್ಥೆಗಳು ಉತ್ತಮ ಜಗತ್ತನ್ನು ನಿರ್ಮಿಸಬಲ್ಲವು "ಏಕ್‌ದಿನ್ ಏಕ್ ಘಂಟಾ ಏಕ್ ಸಾಥ್"



ಶ್ರಮದಾನ ಕಾರ್ಯಕ್ರಮವನ್ನು ಇಂದು ಆಯೋಜಿಸಿದ್ದು ತಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ಸಂತಸ ತಂದಿದೆ ಕಾರಣ ಜಿಲ್ಲೆಯಲ್ಲಿರುವ ಎಲ್ಲಾ ಸಹಕಾರ ಸಂಘಗಳು ತಮ್ಮ ಸಂಸ್ಥೆಗಳು ಹಾಗೂ ಸರ್ಕಾರಿ ರಸ್ತೆ, ಆಟದ ಮೈದಾನ, ಉದ್ಯಾನವನ ಹಾಗೂ ಗ್ರಾಮ ಪಂಚಾಯತ ಈ ರೀತಿ ವಿವಿಧ ಸ್ಥಳಗಳಲ್ಲಿ ವರ್ಷಾಧ್ಯಂತ ಸ್ವಚ್ಚತೆಯನ್ನು ಕೈಗೊಳ್ಳಲು ಕರೆ ನೀಡಿದರು.

ಸಹಕಾರ ಸಂಘಗಳ ಉಪನಿಬಂಧಕಿಯರಾದ ಶ್ರೀಮತಿ ಎಸ್. ಎಸ್ ಕಬಾಡೆ ಮಾತನಾಡಿ ಸಹಕಾರದಿಂದ ಸ್ವಚ್ಚತಾ ಅಭಿಯಾನ ಜೂನ್ ತಿಂಗಳಿನಲ್ಲಿ ಪ್ರಾರಂಭಗೊಂಡು ಏಕ್ ಪೇಡ ಮಾ ಕಿ ನಾಮಸೇ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮ ಕೂಡಾ ಜರುಗಿಸಲಾಗಿದೆ. ಅದೇ ರೀತಿ ಸ್ವಚ್ಛತಾ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿನ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಆವರಣಗಳನ್ನು ಸ್ವಚ್ಚವಾಗಿಟ್ಟುಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ಗದಗ ಜಿಲ್ಲಾ ಸಹಕಾರ ಯೂನಿಯನ್‌ದ ಅಧ್ಯಕ್ಷರಾದ ಸಿ. ಎಂ. ಪಾಟೀಲ ವಹಿಸಿ ಮಾತನಾಡಿ ದೇಶ, ರಾಜ್ಯ, ಜಿಲ್ಲೆ, ತಾಲೂಕು ಹಾಗೂ ನಮ್ಮ ಹಳ್ಳಿಗಳಿಂದ ಸ್ವಚ್ಚತೆ ಪ್ರಾರಂಭವಾಗಿದೆ. ಸ್ವಚ್ಚತೆ ಮತ್ತು ನೈರ್ಮಲ್ಯ ಬಹಳ ಪ್ರಮುಖ ನಮ್ಮ ಮನೆಯನ್ನು ಹೇಗೆ ನಾವು ಸ್ವಚ್ಚವಾಗಿ ಇಟ್ಟುಕೊಳ್ಳುತ್ತೇವೆಯೋ ಹಾಗೇ ನಮ್ಮ ಸಮಾಜ ಹಾಗೂ ಗ್ರಾಮವನ್ನು ಸ್ವಚ್ಚವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ

ಎಂದರು ಸ್ವಚ್ಛತಾ ಹಿ ಸೇವಾ-2025 ಹಾಗೂ ಸ್ವಚ್ಛತಾ ಮೇ ಸಹಕಾರ ಪ್ರಯುಕ್ತ ಗದಗ ಜಿಲ್ಲೆಯಲ್ಲಿ ಮಹಾಮಂಡಳದ ನಿರ್ದೇಶನ ಹಾಗೂ ಮಾರ್ಗದರ್ಶನದಂತೆ ಜೂನ್ ತಿಂಗಳಿನಲ್ಲಿ ಸಹಕಾರದಿಂದ ಸ್ವಚ್ಚತಾ ಅಭಿಯಾನ ಹಾಗೂ ಏಕ್ ಪೇಡ ಮಾ ಕಿ ನಾಮಸೇ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮ ಜರುಗಿಸಲಾಗಿದೆ, ಅದೇ ರೀತಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ಇಂದು "ಏಕ್ ದಿನ್ ಏಕ್ ಘಂಟಾ ಏಕ್ ಸಾಥ್" ಶ್ರಮದಾನ ಅಭಿಯಾನ ಜರುಗಿಸಲಾಗಿದೆ ಎಂದು ಹೇಳಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ನಿರೂಪಿಸಿ ಸ್ವಾಗತಿಸಿದರು. ಮಹಿಳಾ ಸಹಕಾರ ಶಿಕ್ಷಕಿ ಶ್ರೀಮತಿ ರಶೀದಾಬಾನು.ಸಿ.ಯಲಿಗಾರ ವಂದಿಸಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ದ ನಿರ್ದೇಶಕ ಎಸ್ ಕೆ ಕುರಡಗಿ ಸಹಕಾರ ಸಂಘಗಳ ಸಹಾಯಕ ನಿಬಂಧಿಯ ಶ್ರೀಮತಿ ಪುಷ್ಪಾ ಕಡಿವಾಳ ಗದಗ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಶ್ರೀಮತಿ ಶಾಂತಾ ಎಚ್. ಎಂ. ಕೆ.ಸಿ.ಸಿ. ಬ್ಯಾಂಕ್ ಲಿ ಪ್ರಭಾರ ಜಿಲ್ಲಾ ನಿಯಂತ್ರಣಾಧಿಕಾರಿಗಳಾದ ಎಸ್.ವ್ಹಿ. ಚಳಗೇರಿ ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರಾದ ರಾಜು ಕೋಟಿ ಮರ್ಚಂಟ್ಸ್ ಅರ್ಬನ್ ಕೋ-ಆಪ್ ಬ್ಯಾಂಕ್ ಲಿ ಗದಗ ದಿ ಮರ್ಚಂಟ ಅರ್ಬನ್ ಕೋ-ಆಪ್ ಬ್ಯಾಂಕ್ ಲಿ ಗದಗ ಇದರ ವ್ಯವಸ್ಥಾಪಕ ನಿರ್ದೇಶಕರಾದ ಬಸವರಾಜ ನಾಯಕವಾಡಿ ಹಾಗೂ ಬ್ಯಾಂಕಿನ ಸಿಬ್ಬಂದಿಗಳು, ಸಹಕಾರ ಇಲಾಖೆಯ ಎಲ್ಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕಂದಾಯ ಉಪವಿಭಾಗ ಮಟ್ಟದ ಜಾಗೃತಿ-ಉಸ್ತುವಾರಿ ಸಮಿತಿ ಸಭೆ

ಚಿಕ್ಕಮಗಳೂರು, ಸೆ.26: ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ನಿಯಂತ್ರಣ) ಕಾಯ್ದೆ 1989 ನಿಯಮ 1995 ತಿದ್ದುಪಡಿ ನಿಯಮಗಳು 2013 ರಂತೆ ನಿಯಮ 17(ಎ) ಪ್ರಕಾರ ಚಿಕ್ಕಮಗಳೂರು ಕಂದಾಯ ಉಪವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಸಭೆಯು ಸೆಪ್ಟಂಬರ್ 30 ರಂದು ಬೆಳಿಗ್ಗೆ 11 ಗಂಟೆಗೆ ನಗರದ ತಾ.ಪಂ.ನ ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಉಪವಿಭಾಗ ಮಟ್ಟದ ಪ.ಜಾತಿ, ಪ.ವರ್ಗಗಳ ದೌರ್ಜನ್ಯ ನಿಯಂತ್ರಣ ಸಮಿತಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದೂ ವಿರೋಧಿ ಶಕ್ತಿಗಳ ಪುಂಡಾಟಿಕೆಗೆ ಕೊನೆ ಹಾಡುವಂತಹ ಜನಶಕ್ತಿ ನಿರ್ಮಾಣಕ್ಕೆ ಹಿಂದೂ ಜಾಗರಣ ವೇದಿಕೆ ಧುಮುಕಲಿದೆ: ಕೇಶವಮೂರ್ತಿ

**ದಾವಣಗೆರೆ:** ನಗರದಲ್ಲಿ ಸಾಮಾಜಿಕ ಅಶಾಂತಿ ಹಾಗೂ ಸಾಮಾಜಿಕ ಭಯೋತ್ಪಾದನೆಯನ್ನು ಹುಟ್ಟು ಹಾಕುತ್ತಿರುವ ಇಸ್ಲಾಮಿಕ್ ಮೂಲಭೂತ ವಾದಿಗಳ ಕೃತ್ಯವನ್ನು ನಾವು ಬಲವಾಗಿ ಖಂಡಿಸುತ್ತೇವೆ ಎಂದು ಹಿಂದೂ ಜಾಗರಣ ವೇದಿಕೆ ಮುಖಂಡ ದೋ ಕೇಶವಮೂರ್ತಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಹಳ ಹಿಂದಿನಿಂದಲೂ ದಾವಣಗೆರೆಯಲ್ಲಿ ಒಂದಿಲ್ಲ ಒಂದು ಕಾರಣಕ್ಕೆ ಉಪದ್ರವ ಕಿಡಿಗೇಡಿಗಳ ಕೃತ್ಯವನ್ನು ಹುಟ್ಟು ಹಾಕುವ ಮೂಲಕ ಹಿಂದೂ ಸಮಾಜವನ್ನು ಕೆಣಕುವ, ಕಾಲು ಕೆದರಿ ಜಗಳಕ್ಕೆ ಎಳೆಯುವ ಚೈತ್ಯ ನಡೆಸುತ್ತಿದೆ. ಮುಸ್ಲಿಂ ತುಷ್ಟಿಕರಣ ನಡೆಸುವ ಸೆಕ್ಯುಲರ್ ಶಕ್ತಿಗಳ ಕುಮಕ್ಕು ಪಕ್ಷಪಾತಿ ಧೋರಣೆಯು ಬೆಂಕಿಗೆ ತುಪ್ಪವನ್ನು ಸುರಿಯುವ ಯತ್ನವಾಗಿ ಇದಕ್ಕೆ ಉತ್ತೇಜನ ನೀಡಿದೆ ಎಂದರು.

ತುಷ್ಟಿಕರಣ ನೀತಿ ಹಾಗೂ ರಾಜಕೀಯ ಒತ್ತಡಕ್ಕೆ ಒಳಗಾದ ಜಿಲ್ಲಾ ಆಡಳಿತ ನಿಷ್ಕ್ರಿಯವಾಗಿ ನಡೆದುಕೊಂಡು ಕೆಲವೊಮ್ಮೆ ಅವುಗಳನ್ನು ಬೆಂಬಲಿಸಿ ಮತಾಂದ ಶಕ್ತಿಗಳ ಹುಚ್ಚಾಟಕ್ಕೆ ಹಿಂಬು ಕೊಟ್ಟಂಗಾಗಿದೆ. ಗಣೇಶ ಉತ್ಸವ ಸಂದರ್ಭದಲ್ಲಿ ನಡೆದಿರುವ ಘಟನೆಗಳು ಇದಕ್ಕೆ ಸಾಕ್ಷಿಯಾಗಿದೆ ಕಳೆದ ಒಂದೆರಡು ವರ್ಷಗಳಿಂದ ಹಿಂದುಗಳು ನೆಮ್ಮದಿಯಿಂದ ಗಣೇಶೋತ್ಸವವನ್ನು ನಡೆಸುವುದು ಅಸಾಧ್ಯ ಎಂಬಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕಲ್ಲು ತೂರುವುದು ಗಲಾಟೆ ಎಬ್ಬಿಸುವುದು ಹಿಂಸಾಚಾರಕ್ಕೆ ತೊಡಗುವುದು ಹೆಗ್ಗಿಲ್ಲದೆ ನಡೆಯುತ್ತಿದೆ ಎಂದು ಆರೋಪಿಸಿದರು.

ಈ ಸರ್ಕಾರ ಮತ್ತು ಜಿಲ್ಲಾ ಆಡಳಿತ ಪುಂಡ ಪೋಕ್ರಿಗಳನ್ನು ರಕ್ಷಿಸುತ್ತಿದೆ. ಮತಾಂದ ಮುಸಲ್ಮಾನರಿಗೆ ರಾಜಕೀಯ ರಕ್ಷಾ ಕವಚ ಆಡಳಿತದ ಬೆಂಬಲ ಅವರ ಸೊಕ್ಕಿನ ನಡವಳಿಕೆಯನ್ನು ದುಪ್ಪಟ್ಟು ಗೊಳಿಸಿದೆ. ನಡು ರಸ್ತೆಯಲ್ಲಿ ಆನೆಕೊಂಡ ಜಾತ್ರೆ ಸಂದರ್ಭದಲ್ಲಿ ಮುಸ್ಲಿಂ ಮತಾಂದ ತಳವಾರು ಪ್ರದರ್ಶಿಸಿದ್ದರು ಯಾವುದೇ ಕ್ರಮ ಕೈಗೊಳ್ಳದೆ ಆಡಳಿತ ಕಣ್ಣುಮುಚ್ಚಿ ಕೂತಿದೆ. ಅದು ದಾವಣಗೆರೆಯ ಸಾಮಾಜಿಕ ನೆಮ್ಮದಿಗೆ ಕೊಳ್ಳಿ ಇಡುತ್ತಿದೆ ಎಂದರು.

ಪೊಲೀಸ್ ಬೆಂಬಲ ಜೊತೆಗೆ ರಾಜಕೀಯ ಕುಮ್ಮಕ್ಕಿನಿಂದ ಹಿಂದೂ ಸಾಮಾಜಿಕ ಕಾರ್ಯಕರ್ತರ ಮೇಲೆ ನಡೆದಿರುವ ದಬ್ಬಾಳಿಕೆ ದೌರ್ಜನ್ಯವನ್ನು ಸಹಿಸಲಾಗದು. ಇದರ ವಿರುದ್ಧ ಪ್ರಬಲವಾಗಿ ಜನಾಂದಲನಕ್ಕೆ ಹಿಂದೂ ಜಾಗರಣ ವೇದಿಕೆ ಕರೆ ನೋಡುತ್ತದೆ. ಸಮಾಜ ಹೂ ಕೂಡ ಇಂತಹ ಕೃತ್ಯಗಳ ವಿರುದ್ಧ ಎಚ್ಚೆತ್ತುಕೊಂಡು ಸಂಘಟಿತ ಹೋರಾಟಕ್ಕೆ ಇಳಿದು ದುಷ್ಟ ದೇಶ ದ್ರೋಹಿ ಸಮಾಜಘಾತಕ ಹಿಂದೂ ವಿರೋಧಿ ಶಕ್ತಿಗಳ ಪುಂಡಾಟಿಕೆ ಕೊನೆ ಹಾಡುವಂತಹ ಜನಶಕ್ತಿ ನಿರ್ಮಾಣಕ್ಕೆ ಹಿಂದೂ ಜಾಗರಣ ವೇದಿಕೆ ಧುಮುಕಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ವೇದಿಕೆ ಪುನೀತ್, ಅನಿಲ್ ಇದ್ದರು.

## 2025-26ರ ಶೈಕ್ಷಣಿಕ ಗೊಂದಲವನ್ನು ಪರಿಹರಿಸುವಂತೆ ಆಗ್ರಹಿಸಿ ಎಐಡಿಎಸ್‌ಓ ಪ್ರತಿಭಟನೆ

**ದಾವಣಗೆರೆ:** ರಾಜ್ಯದಲ್ಲಿ ಪದವಿ ಕಾಲೇಜುಗಳು ಆರಂಭವಾಗಿ ಎರಡು ತಿಂಗಳು ಕಳೆದರೂ ಸರ್ಕಾರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಲ್ಲದೆ ವಿದ್ಯಾರ್ಥಿಗಳು ಪರಿತಪಿಸುವಂತಾಗಿದೆ. ಅದ್ದರಿಂದ ಕೂಡಲೇ ಈ ಶೈಕ್ಷಣಿಕ ಗೊಂದಲವನ್ನು ಪರಿಹರಿಸುವಂತೆ ಆಗ್ರಹಿಸಿ ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜು, ಸರ್ಕಾರಿ ಮಹಿಳಾ ಪದವಿ ಕಾಲೇಜಿನ ವಿದ್ಯಾರ್ಥಿಗಳು ತರಗತಿ ಬಹಿಷ್ಕರಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಸರ್ಕಾರಿ ಪದವಿ ಕಾಲೆಜು ಮತ್ತು ಸರ್ಕಾರಿ ಮಹಿಳಾ ಪದವಿ ಕಾಲೇಜಿನ ವಿದ್ಯಾರ್ಥಿಗಳು ತಮ್ಮ ಬೇಡಿಕೆಗಳ ಫಲಕಗಳನ್ನು ಹಿಡಿದು ಕಾಲೇಜಿನಿಂದ ಜಯದೇವ ವೃತ್ತದವರೆಗೆ ಮರವಣಿಗೆ ಹೊರಟು, ಜಯದೇವ ವೃತ್ತದಲ್ಲಿ ವಪ್ರತಿಭಟನೆ ನಡೆಸಿದರು.

ಎಐಡಿಎಸ್‌ಓ ಜಿಲ್ಲಾ ಅಧ್ಯಕ್ಷೆ ಪೂಜಾ ನಂದಿಹಳ್ಳಿ ಮಾತನಾಡಿ, 2025-26ರ ಶೈಕ್ಷಣಿಕ ವೇಳಾಪಟ್ಟಿ ಪ್ರಕಾರ ದಾವಣಗೆರೆ ವಿಶ್ವವಿದ್ಯಾಲಯ ಸೇರಿದಂತೆ ರಾಜ್ಯದ ಅನೇಕ ವಿಶ್ವವಿದ್ಯಾಲಯಗಳಲ್ಲಿ ಅಕ್ಟೋಬರ್ ಹಾಗೂ ನವೆಂಬರ್ ತಿಂಗಳಿನಲ್ಲಿ ಸೆಮಿಸ್ಟರ್ ಪರೀಕ್ಷೆಗಳು ನಡೆಯಲಿವೆ. ಹೀಗಾದಲ್ಲಿ, ಇನ್ನೂ ಸರಿಯಾಗಿ ತರಗತಿಗಳೇ ಆರಂಭವಾಗಿರದ ಸರ್ಕಾರಿ ಕಾಲೇಜು ವಿದ್ಯಾರ್ಥಿಗಳಿಗೆ ಘೋರ ಅನ್ಯಾಯವಾಗುತ್ತದೆ. ಆದ್ದರಿಂದ ಸರ್ಕಾರವು ಕೂಡಲೇ ಪರೀಕೆಗಳನ್ನು ಮುಂದೂಡಬೇಕು ಮತ್ತು ಅವಶ್ಯಕ ತರಗತಿಗಳನ್ನು ನಡೆಸಿದ ನಂತರವಷ್ಟೇ ರಾಜ್ಯದಲ್ಲಿ ಪದವಿ ಪರೀಕ್ಷೆಗಳನ್ನು ನಡೆಸಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ಹೋರಾಟದ ಮುಂದಿನ ನಡೆಯಾಗಿ, ತರಗತಿ ನಡೆಸದೆ ಪರೀಕ್ಷೆ ಬೇಡ ಎಂಬ ಘೋಷ್ ವಾಕ್ಯದೊಂದಿಗೆ ರಾಜ್ಯದಾದ್ಯಂತ ಸಂಘರ್ಷ ನಡೆಸಲು ವಿದ್ಯಾರ್ಥಿಗಳು ಇಂದು ತರಗತಿ ಬಹಿಷ್ಕಾರದ ಹಿನ್ನಲೆಯಲ್ಲಿ ತೀರ್ಮಾನಿಸಲಾಯಿತು.

ಅತಿಥಿ ಉಪನ್ಯಾಸಕರಿಲ್ಲದೇ, ಒಂದೂ ತರಗತಿ ನಡೆಯದಿದ್ದರೂ ಸೆಮಿಸ್ಟರ್ ಪರೀಕ್ಷೆ ವೇಳಾಪಟ್ಟಿ ಮತ್ತು ಪರೀಕ್ಷಾ ಶುಲ್ಕದ ಸುತ್ತೋಲೆ ಹೊರಡಿಸಿರುವ ವಿವಿಗಳ ಧೋರಣೆ ಖಂಡನೀಯ. ಸರ್ಕಾರಿ ವಿವಿಗಳು ಖಾಸಗಿ ಪದವಿ ಕಾಲೇಜುಗಳಿಗಾಗಿ ಮಾತ್ರ ಇರುವುದೇ ಎಂದು ಪ್ರಶ್ನೆ ಮಾಡಿದರು.

ಈ ಸಂದರ್ಭದಲ್ಲಿ ಸಂಘಟನಾಕಾರರಾದ ಎಚ್.ಡಿ.ಗಂಗಾಧರ, ವಿ.ಹೆಚ್.ಮಂಜುನಾಥ, ಸಿದ್ದಿಕ್ ಜೆ ಆವರಗೆರೆ,ವಿಕಾಸ್ ಎಮ್ ಆರ್ ಹದಡಿ, ಲಿಖಿತ್ ಕುಮಾರ್ ಕೆ, ಸಹನ ಎನ್, ಪ್ರಯಾಂಕಾ ಪಿ, ಐಶ್ವರ್ಯ, ಚೈತ್ರ ವರ್ಷಾನ, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಕುಂದು-ಕೊರತೆ ಪರಿಹಾರ ಕಾರ್ಯಕ್ರಮ

**ಚಿಕ್ಕಮಗಳೂರು:** ಬೆಳಗಾವಿ, ಶಿವಾಜಿ ಕ್ರೀಡಾಂಗಣದಲ್ಲಿ ಮಾಜಿ ಸೈನಿಕರು, ವೀರನಾರಿ ಮತ್ತು ಮೃತ ಮಾಜಿ ಸೈನಿಕರ ಪತ್ನಿಯರಿಗಾಗಿ ಮರಾಠ ಲೈಟ್ ಇನಫೆಂಟ್ರಿಯವರು ಅಕ್ಟೋಬರ್ 19 ರಂದು ಬೆಳಿಗ್ಗೆ 8:30 ರಿಂದ ಸಂಜೆ 4 ಗಂಟೆಯವರೆಗೆ ಕುಂದು-ಕೊರತೆ ಪರಿಹರಿಸಲು ಸಂಪರ್ಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ : 0831-2402821, ವಾಟ್ಸ್‌ಆಪ್ ಸಂಖ್ಯೆ : 8317350584 ಅಥವಾ ಜ-ಟಚುಟ : greatgorilla@nic.in <mailto:greatgorilla@nic.in> ಅನ್ನು ಸಂಪರ್ಕಿಸಬಹುದು ಎಂದು ಹಾಸನ ಜಿಲ್ಲೆಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು (ಪ್ರಭಾರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ.4 ವಿಶ್ವ ಹಿರಿಯ ನಾಗರಿಕರ ದಿನಾಚರಣೆ

**ಚಿಕ್ಕಮಗಳೂರು:** ವಿಶ್ವ ನಾಗರಿಕರ ದಿನಾಚರಣೆಯನ್ನು ಅಕ್ಟೋಬರ್ 4 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾ ಮಟ್ಟದಲ್ಲಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದ ಹಿರಿಯ ನಾಗರಿಕರಿಗೆ ಬಹುಮಾನ ವಿತರಣೆ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಹಿರಿಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೂರ್ವಿಕರು ಉಳಿಸಿದ ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ: ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ನಮ್ಮ ಪೂರ್ವಿಕರು ಉಳಿಸಿ ಹೋಗಿರುವ ಈ ಸುಂದರವಾದ ಪ್ರಕೃತಿ-ಪರಿಸರವನ್ನು ಹಾಳು ಮಾಡಲು ಬಿಡದೆ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಶಾಸಕರಾದ ಹೆಚ್.ಡಿ.ತಮ್ಮಯ್ಯ ಹೇಳಿದರು.

ಜಿಲ್ಲಾ ಪ್ರವಾಸೋದ್ಯಮ ಇಲಾಖೆ, ರೌಂಡ್ ಟೇಬಲ್, ಜಿಲ್ಲಾ ಹೋಂ ಸ್ಟೇ ಮಾಲೀಕರ ಸಂಘ, ಜಿಲ್ಲಾ ರೆಸಾರ್ಟ್ ಮಾಲೀಕರ ಸಂಘ, ಜೀಪ್ ಅಸೋಸಿಯೇಶನ್, ಅಡ್ವೆಂಚರ್ ಕ್ಲಬ್ ಆಶ್ರಯದಲ್ಲಿ ವಿಶ್ವ ಪ್ರವಾಸೋದ್ಯಮ ದಿನದ ಅಂಗವಾಗಿ ನಗರದಿಂದ ಮುತ್ತೋಡಿವರೆಗೆ ಆಯೋಜಿಸಲಾಗಿದ್ದ ಬೈಕ್ ರ‍್ಯಾಲಿಗೆ ಇಂದು ಬೆಳಿಗ್ಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ ಅವರೊಂದಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಶ್ವದಲ್ಲೇ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿದೆ. ಇಂದು ಎಲ್ಲೆಡೆಯ ಪ್ರದೇಶಗಳು ಕಾಂಕ್ರೀಟ್ ನಗರವಾಗಿ ಪರಿಣಮಿಸಿರುವ ಹಿನ್ನೆಲೆಯಲ್ಲಿ ಜನರು ಪರಿಸರ ಪ್ರೇಮಿಗಳಾಗಿದ್ದು, ಪಶ್ಚಿಮಘಟ್ಟದಲ್ಲಿರುವ ಈ ಜಿಲ್ಲೆಯ ರಮಣೀಯ ಸ್ಥಳಗಳನ್ನು ವೀಕ್ಷಣೆ ಮಾಡಲು ಆಗಮಿಸುತ್ತಿದ್ದಾರೆ. ಪ್ರವಾಸಿಗರಿಗೆ ಪರಿಸರ ಉಳಿಸುವ ಕಾಳಜಿಯ ಬಗ್ಗೆ ತಿಳಿ ಹೇಳಬೇಕು ತಿಳಿಹೇಳಬೇಕು ಎಂದರು.

ಈಗಾಗಲೇ ಚಂದ್ರದ್ರೋಣ ಪರ್ವತ ಶ್ರೇಣಿಯ ಕೆಲವು ಭಾಗಗಳನ್ನು ಪ್ಲಾಸ್ಟಿಕ್ ಮುಕ್ತ ಮಾಡಲಾಗಿದೆ. ಮುಂದೆ ನಗರವನ್ನು ಸಹ ಪ್ಲಾಸ್ಟಿಕ್ ಮುಕ್ತ ಮಾಡಲು ತೀರ್ಮಾನಿಸಲಾಗಿದೆ. ಈ ಜಿಲ್ಲೆ ಪಂಚ ನದಿಗಳ ಉಗಮಸ್ಥಾನವಾಗಿದ್ದು, ಪ್ಲಾಸ್ಟಿಕ್ ಹಾವಳಿಯಿಂದ ಈ ನದಿಗಳ ಅಸ್ತಿತ್ವಕ್ಕೆ ಮುಂದೆ ಸಂಚಕಾರ ಬರಬಹುದು. ಹೀಗಾಗಿ ಅವುಗಳನ್ನು ಕಾಪಾಡಿಕೊಳ್ಳುವುದು ಸಹ



ನಮ್ಮೆಲ್ಲರ ಜವಾಬ್ದಾರಿ ಎಂದರು.

ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ ಮಾತನಾಡಿ, ಪ್ರಪಂಚದ ಭೂಪಟದಲ್ಲಿ ಚಿಕ್ಕಮಗಳೂರನ್ನು ಹುಡುಕುವ ಅಗತ್ಯವಿಲ್ಲ. ಈ ಜಿಲ್ಲೆ ಪ್ರವಾಸೋದ್ಯಮದಲ್ಲಿ ಅಷ್ಟೊಂದು ವಿಶೇಷವಾಗಿ ಗುರುತಿಸಿಕೊಂಡಿದೆ. ಚಿಕ್ಕಮಗಳೂರು ಪರಿಸರವನ್ನು ಉಳಿಸಬೇಕು, ಬೆಳೆಸಬೇಕು. ಪರಿಸರದ ಜೊತೆಗೆ ಪೀಳಿಗೆಯಲ್ಲಿ ಧಾರ್ಮಿಕತೆ, ಸಾಂಸ್ಕೃತಿಕತೆ ಬಗ್ಗೆ ಆಸಕ್ತಿ ಬೆಳೆಸುವ ಕೆಲಸ ಮಾಡಬೇಕಾಗಿದೆ ಎಂದು ಆಶಿಸಿದರು.

ಪ್ರವಾಸಿಗರು ಬಂದಾಗ ನಿರ್ಬಂಧ ಇರಬೇಕು. ಆದರೆ ನಿರ್ಬಂಧದ ಹೆಸರಿನಲ್ಲಿ ಸಂಪೂರ್ಣವಾಗಿ ನಿಯಂತ್ರಿಸಿದರೆ ಪ್ರವಾಸಿಗರಿಗೆ ತೊಂದರೆಯಾಗುತ್ತದೆ. ಅವರಿಗೆ ಆನ್‌ಲೈನ್‌ನಲ್ಲಿ ಬುಕ್ಕಿಂಗ್‌ಗೆ ಅವಕಾಶ ಸಿಗದಿದ್ದರೆ ಸಮಸ್ಯೆಯಾಗಿ ಪ್ರವಾಸೋದ್ಯಮ ಹಾಳಾಗುತ್ತದೆ. ಊರಿನ ಹೆಸರೂ ಹಾಳಾಗುತ್ತದೆ ಎಂದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಆರ್.ಲೋಹಿತ್ ಸ್ವಾಗತಿಸಿ, ಮಾತನಾಡಿ, ಪ್ರತೀ ಜಿಲ್ಲೆಯಲ್ಲಿ ರಾಜ್ಯ ಸರ್ಕಾರ ಹೆಚ್ಚು ಪ್ರಚಲಿತವಿಲ್ಲದ ಪ್ರವಾಸಿ ತಾಣಗಳನ್ನು ಪ್ರಚುರಪಡಿಸುವ ಸಲುವಾಗಿ ಪ್ರತೀ ವರ್ಷವೂ ಬೈಕ್ ರ‍್ಯಾಲಿ, ಜೀಪ್ ರ‍್ಯಾಲಿ, ಸೈಕಲ್ ರ‍್ಯಾಲಿಯನ್ನು ಆಯೋಜಿಸುತ್ತಾ ಬರಲಾಗಿದೆ ಎಂದು ತಿಳಿಸಿದರು.

ವಿಶ್ವ ಪ್ರವಾಸೋದ್ಯಮದ ಪ್ರಯುಕ್ತ ದತ್ತಪೀಠ, ಕವಿಕಲ್‌ಗಂಡಿ, ಕೊಳಗಾಮೆ ಮಾರ್ಗವಾಗಿ ಮುತ್ತೋಡಿ ಅರಣ್ಯ, ಮಲ್ಲಂದೂರು ಶೂಟಿಂಗ್ ಪಾಯಿಂಟ್, ಉಕ್ಕುಡ ಫಾಲ್ಸ್, ರಂಗನಬೆಟ್ಟ, ಬಂಡಕಲ್ಲು ಬೆಟ್ಟ, ತೋಟ್ಲಪ್ಪನ ಗುಡ್ಡ ಹೀಗೆ ಪರ್ಯಾಯ ತಾಣಗಳತ್ತ ಪ್ರವಾಸಿಗರ ಗಮನ ಸೆಳೆಯುವ ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ಬಗ್ಗೆ ಕೆ.ಡಿ.ಪಿ. ಸಭೆಯಲ್ಲಿ ಟೂರಿಸಂ ವೆಬ್‌ಸೈಟ್ ಕೂಡ ಲಾಂಚ್ ಆಗಿದೆ. ಅಲ್ಲದೆ, ರೀಲ್ಸ್, ಫೇಸ್‌ಬುಕ್, ಇನ್‌ಸ್ಟಾಗ್ರಾಂ ಮೂಲಕ ದೇಶಕ್ಕೆ ಮಾತ್ರವಲ್ಲ, ಪ್ರಪಂಚಕ್ಕೆ ಪ್ರಚುರಪಡಿಸುವ ಸಲುವಾಗಿ ಬೈಕ್ ರ‍್ಯಾಲಿಯನ್ನು ಆಯೋಜಿಸಲಾಗಿದೆ ಎಂದರು.

'ಪ್ರವಾಸೋದ್ಯಮ ಮತ್ತು ಸುಸ್ಥಿರ ಪರಿವರ್ತನೆ' ಎಂಬುದು ಈ ವರ್ಷದ ಧ್ಯೇಯ ವಾಕ್ಯ. ಈ ಶೀರ್ಷಿಕೆಯಡಿ ಇಂದು ಬೈಕ್ ರ‍್ಯಾಲಿ ಮತ್ತು ಸೆಪ್ಟಂಬರ್ 29ಕ್ಕೆ ಕ್ಲೀನಿಂಗ್ ಡ್ರೈವ್ ಅನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಸಿ.ಶಿವಾನಂದಸ್ವಾಮಿ, ವಕೀಲರಾದ ತೇಜಸ್, ರೌಂಡ್ ಟೇಬಲ್ ಅಧ್ಯಕ್ಷರಾದ ಅನಿಲ್, ಜೀಪ್ ಅಸೋಸಿಯೇಶನ್‌ನ ಅಧ್ಯಕ್ಷರಾದ ಇನಾಯತ್, ರೆಸಾರ್ಟ್ ಅಸೋಸಿಯೇಶನ್‌ನ ಪದಾಧಿಕಾರಿಗಳು ಮತ್ತಿತರರಿದ್ದರು. ಸುಮಾರು 35 ಮಂದಿ ಬೈಕ್ ಸವಾರರುಗಳು ಈ ರ‍್ಯಾಲಿಯಲ್ಲಿ ಭಾಗವಹಿಸಿದ್ದರು.

## 10 ದಿನ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ

**ಚಿಕ್ಕಮಗಳೂರು:** ರಾಜ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಆಶ್ರಯದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗುವುದು. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಈ ಸಂಬಂಧ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅಭ್ಯರ್ಥಿಗಳು 18 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿದ್ದು, ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು. ನಗರದ ಕೆ.ಎಂ.ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯಿಂದ ಕಚೇರಿ ವೇಳೆಯಲ್ಲಿ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಅಕ್ಟೋಬರ್ 3ರೊಳಗೆ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ (6364826966)ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ನೇರ ಸಂದರ್ಶನ

**ಚಿಕ್ಕಮಗಳೂರು:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೆರಿಯಲ್ಲಿ ಖಾಸಗಿ ಕಂಪನಿಯಾದ ಐಡಿಎಫ್‌ಸಿ ಬ್ಯಾಂಕ್ ಚಿಕ್ಕಮಗಳೂರಿನಲ್ಲಿ ಮತ್ತು ಯುವ ಸ್ಪಂದನದಿಂದ (ಯುವ ಸಬಲೀಕರಣ & ಕ್ರೀಡಾ ಇಲಾಖೆ ಬೆಂಗಳೂರು ನಿಮ್ಹಾನ್ಸ್) ಚಿಕ್ಕಮಗಳೂರಿನ ಮೂಡಿಗೆರೆ, ಶೃಂಗೇರಿ, ಕೊಪ್ಪ, ಕಡೂರು ಮತ್ತು ತರೀಕೆರೆ ತಾಲ್ಲೂಕುಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಸೆಪ್ಟಂಬರ್ 30 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ಏರ್ಪಡಿಸಲಾಗಿದೆ. ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 35 ವರ್ಷ ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು. ಉಚಿತ ಪ್ರವೇಶವಿದ್ದು ಅಭ್ಯರ್ಥಿಗಳು ಎರಡು ಸೆಟ್ ರೆಸ್ಯೂಮ್‌ಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ(ದೂರವಾಣಿ: 08262-295538)ವನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಜಾನ್ ಮೈನ್ಸ್ ವತಿಯಿಂದ ಸ್ವಚ್ಛತಾ ಪಕ್ವಾಡ್ ಕಾರ್ಯಕ್ರಮ ಮೈನ್ಸ್ ವತಿಯಿಂದ ಸ್ವಚ್ಛತಾ ಕಾರ್ಯಕ್ರಮಗಳು ಜನರಲ್ಲಿ ಜಾಗೃತಿ ಮೂಡಿಸುತ್ತಿದೆ.

**ಚಿತ್ರದುರ್ಗ:** ಮೈನ್ಸ್ ವತಿಯಿಂದ ಸ್ವಚ್ಛತಾ ಕಾರ್ಯಕ್ರಮಗಳು ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಜನರಲ್ಲಿ ಸ್ವಚ್ಛತೆಯ ಬಗ್ಗೆ, ಕಸ ವಿಂಗಡನೆ ಬಗ್ಗೆ, ಪರಿಸರ ಉಳಿಸಿಕೊಳ್ಳುವುದರ ಬಗ್ಗೆ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿವೆ, ಸ್ವಚ್ಛತಾ ಪಕ್ವಾಡ 15 ದಿನದಿಂದ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ರೀತಿಯಲ್ಲಿ ಸಹಕರಿಸಬೇಕು ಎಂದು ಜಾನ್ ಮೈನ್ಸ್‌ನ ಹಿರಿಯ ವ್ಯವಸ್ಥಾಪಕರಾದ ಶ್ರೀ ಶರತ್ ಹೆಗಡೆ ಮಾತನಾಡಿದರು.

ಅವರು. ಚಿತ್ರದುರ್ಗ ನಗರದ ಕೇಂದ್ರ ಭಾಗದಲ್ಲಿರುವ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಪ್ರವೀಣ್ ಚಂದ ಅವರ ಜಾನ್ ಮೈನ್ಸ್ ವತಿಯಿಂದ ಆಯೋಜಿಸಿದ್ದ 15 ದಿವಸದ ಸ್ವಚ್ಛತಾ ಪಕ್ವಾಡ ಕಾರ್ಯಕ್ರಮದಡಿಯಲ್ಲಿ ಮಾತನಾಡುತ್ತಿದ್ದರು.

ಕಾಲೇಜಿಗೆ ಬಂದ ವಿದ್ಯಾರ್ಥಿಗಳು ಆದಷ್ಟು ಪರಿಸರವನ್ನ ಚೆನ್ನಾಗಿಟ್ಟುಕೊಳ್ಳಬೇಕು, ಪ್ಲಾಸ್ಟಿಕ್ ಕಸವನ್ನ ವಿಂಗಡಿಸಿಕೊಳ್ಳಬೇಕು,ಶೌಚಾಲಯಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಕಾಲೇಜಿನ ವಿದ್ಯಾರ್ಥಿಗಳಿಗೆ ಸ್ವಚ್ಛತಾ




ಸಾಮಗ್ರಿಗಳಾದಂತ ಪೊರಕೆ, ಬಕೇಟು, ಕಸದ ಬುಟ್ಟಿ, ಬಾಚಣಿಕೆ, ಬ್ರಷ್, ನೈಲ್ ಕಟರ್ ಮುಂತಾದ ವಸ್ತುಗಳನ್ನ ವಿತರಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ರವಿಕಾಂತ್ ರ ಮೈನ್ಸ್ ವತಿಯಿಂದ ಈ ರೀತಿ ಸಾರ್ವಜನಿಕ ಕಾರ್ಯಕ್ರಮಗಳು, ಸ್ವಚ್ಛತಾ ಕಾರ್ಯಕ್ರಮಗಳು ನಡೆಯುತ್ತದೆ ಎಂಬುದು ಅರಿವಿಗೆ ಬರಬೇಕು ಎಂದರು.

ಎನ್ ಎಸ್ ಎಸ್ ಒಂದನೆ ಘಟಕದ ಅಧಿಕಾರಿಗಳಾದ ಡಾ ನಾಗರಾಜ್ ಜೆ ಮಾತನಾಡುತ್ತಾ ಮೈನ್ಸ್ ವತಿಯಿಂದ ಸ್ವಚ್ಛತಾ ಸಾಮಗ್ರಿಗಳನ್ನ ನೀಡುತ್ತಿರುವುದು ಶ್ಲಾಘನೀಯ ಎಂದರು.

ಎನ್ ಎಸ್ ಎಸ್ ಎರಡನೇ ಘಟಕದ ಅಧಿಕಾರಿಗಳಾದ ಡಾ. ರಾಜೇಶ್ವರಿಯವರು ಪ್ರಾಸ್ತಾವಿಕ ಮಾತನಾಡುತ್ತಾ ಹೆಣ್ಣು ಮಕ್ಕಳಲ್ಲಿ ಪರಿಸರ ಜಾಗೃತಿ ಮೂಡಿದಷ್ಟು ಕುಟುಂಬಗಳು ಬದಲಾಗುತ್ತವೆ ಎಂದರು.

ಎನ್ ಎಸ್ ಎಸ್ ಘಟಕದ ಮೂರನೇ ಅಧಿಕಾರಿ ಡಾ ಸುನಿಲ್ ರವರು ವಿದ್ಯಾರ್ಥಿಗಳಿಗೆ ಹಲವಾರು ವೈವಿಧ್ಯಮಯವಾದ ಪರಿಸರ ಘೋಷಣೆಗಳನ್ನ ಕೂಗಿ, ಜನರಲ್ಲಿ ಜಾಗೃತಿ ಮೂಡಿಸಲು ತರಬೇತಿ ನೀಡಬೇಕಾಗಿದೆ ಎಂದರು.ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯು ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ.ಹೆಚ್. ಕೆ.ಎಸ್. ಸ್ವಾಮಿಯವರು ವಿಜ್ಞಾನ ವಿದ್ಯಾರ್ಥಿಗಳಿಗೆ ಪ್ಲಾಸ್ಟಿಕ್ ವಸ್ತುಗಳನ್ನ ಮರುಬಳಕೆ ಮಾಡಿ ಪರಿಸರನ್ನ ಉಳಿಸಿಕೊಳ್ಳಬೇಕು, ಜನರು ಹೆಚ್ಚಾಗಿ ಭಾಗವಹಿಸಿ ಸಮಾಜದ ಅಭಿವೃದ್ಧಿಯ ಬಗ್ಗೆ ಚಿಂತಿಸಬೇಕು ಎಂದು ಪ್ರಾತ್ಯಕ್ಷಿಕೆ ಮುಖಾಂತರ ತಿಳಿಸಿಕೊಟ್ಟರು.

300ಕ್ಕೂ ಹೆಚ್ಚು ಎನ್ ಎಸ್ ಎಸ್ ವಿದ್ಯಾರ್ಥಿಗಳು ಕಾಲೇಜಿನ ಆವರಣವನ್ನು, ಮುಂಭಾಗದ ಖಾಲಿ ಜಾಗವನ್ನ ಸ್ವಚ್ಛಗೊಳಿಸಿ, ನೋಡುಗರ ಗಮನ ಸೆಳೆಯುವಂತೆ ಮಾಡಲಾಗಿದೆ.

ಕಾರ್ಯಕ್ರಮದಲ್ಲಿ ಕಾರ್ಯಕ್ರಮದಲ್ಲಿ ಜಾನ್ ಮೈನ್ಸ್ನ ಹಿರಿಯ ವ್ಯವಸ್ಥಾಪಕರಾದ ಗುರುರಾಜ, ಪರಿಸರ ಅಧಿಕಾರಿಗಳಾದ ಅಜಿತ್, ಅಮರೇಶ್ ಮತ್ತಿತರ ಅಧಿಕಾರಿಗಳು, ಕಾಲೇಜಿನ ಶಿಕ್ಷಕರು, ವಿದ್ಯಾರ್ಥಿಗಳು ಪೋಷಕರು ಭಾಗವಹಿಸಿದ್ದರು.

ಕೊನೆಯ ಭಾಗದಲ್ಲಿ ವಿದ್ಯಾರ್ಥಿಗಳು ವಿಜ್ಞಾನ ಕಾಲೇಜಿನ ಮುಂಭಾಗದ ರಸ್ತೆಯಲ್ಲಿ ಜಾಥಾವನ್ನು ಏರ್ಪಡಿಸಿ, ಜನರಲ್ಲಿ ಪರಿಸರದ ಬಗ್ಗೆ, ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿದರು. ಸ್ವಚ್ಛತೆ ಬಗ್ಗೆ ಅತ್ಯುತ್ತಮವಾದ ಘೋಷಣೆ ಬರೆದವರಿಗೆ ಮತ್ತು ಚಿತ್ರ ಬಿಡಿಸಿದವರಿಗೆ ಬಹುಮಾನವನ್ನು ವಿತರಿಸಲಾಯಿತು.

# ಪ್ರವಾಸಿಗರ ಸ್ನೇಹಿಯಾಗಿ ಪ್ರವಾಸೋದ್ಯಮ ಬೆಳೆಯಲಿ :ಜಿಲ್ಲಾಧಿಕಾರಿ ಲತಾಕುಮಾರಿ




**ಹಾಸನ** : ವಿಶ್ವ ಪಾರಂಪರಿಕ ತಾಣಗಳು ಹಾಸನ ಜಿಲ್ಲೆಯಲ್ಲಿರುವುದುಹೆಮ್ಮೆಯ ಸಂಗತಿಯಾಗಿದ್ದು, ಪ್ರವಾಸೋದ್ಯಮದಲ್ಲಿ ಶ್ರೀಮಂತವಾಗಿರುವ ಜಿಲ್ಲೆ ನಮ್ಮದು. ಪ್ರವಾಸಿಗರ ಸ್ನೇಹಿಯಾಗಿ ಪ್ರವಾಸೋದ್ಯಮವನ್ನು ಬೆಳೆಸುವ ನಿಟ್ಟಿನಲ್ಲಿಕ್ರಮವಹಿಸಬೇಕುಎಂದುಜಿಲ್ಲಾಧಿಕಾರಿ ಲತಾಕುಮಾರಿಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಡೆಸ್ಸಿನಿ ರೈಡರ್ಸ್‌ಇವರ ಸಂಯುಕ್ತಾಶ್ರಯದಲ್ಲಿಇಂದು ಹಮ್ಮಿಕೊಂಡಿದ್ದ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಅಂಗವಾಗಿದೊಡ್ಡ ಗದ್ದುವಳ್ಳಿ ಲಕ್ಷ್ಮೀದೇವಿ ದೇವಾಲಯದಿಂದಹಗರೆಮಾರ್ಗವಾಗಿ ಹಳೇಬೀಡು ದೇವಸ್ಥಾನದವರೆಗೂ ಆಯೋಜಿಸಿದ್ದ ಬೈಕ್‌ಜಾಥಾಕ್ಕೆ ಚಾಲನೆ ನೀಡಿ ಸ್ವತಃ ಬೈಕ್ ಚಾಲನೆಮಾಡಿ, ಹಳೇಬೀಡಿನಲ್ಲಿ ಮಾತನಾಡಿದಅವರು ಸಾಂಸ್ಕೃತಿಕಮತ್ತುಆರ್ಥಿಕಅಭಿವೃದ್ಧಿಗೆ ಪೂರಕವಾಗಿ ಪ್ರವಾಸೋದ್ಯಮ ಸುಸ್ಥಿರತೆ ಜೊತೆಜೊತೆಯಾಗಿ ಬೆಳೆಯಬೇಕುಎಂದರು.ಪ್ರವಾಸೋದ್ಯಮ ಇಲಾಖೆ ಬಹಳಷ್ಟು ಅಭಿವೃದ್ಧಿಯಾಗಬೇಕಾಗಿದೆ. ಪ್ರವಾಸೋದ್ಯಮ ಸ್ಥಳಗಳ ಬಗ್ಗೆ ಕೇವಲ ಪ್ರಚಾರಪಡಿಸುವುದಲ್ಲದೆ, ಅಗತ್ಯಮೂಲಭೂತ ಸೌಕರ್ಯಗಳನ್ನು ಕೂಡ ಒದಗಿಸಿ ಕೊಡಬೇಕು. ಪುರಾತನಮತುಐತಿಹಾಸಿಕ ಸ್ಥಳಗಳನ್ನು ಸೂಕ್ತವಾಗಿ ಸಂರಕ್ಷಣೆ ಮಾಡುವುದರ ಮೂಲಕ ಮುಂದಿನ ಪೀಳಿಗೆಗೆ ಉಳಿಸಬೇಕುಜೊತೆಗೆ ಆ ಸ್ಥಳದಇತಿಹಾಸದಕುರಿತಾಗಿ ತಿಳಿ ಹೇಳಬೇಕುಎಂದರು.

ಶಿಲ್ಪಕಲೆಗೆ ಪ್ರಸಿದ್ಧವಾದ ತಾಣ ಹಳೇಬೀಡಾಗಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಹೊಂದಿದ ಸ್ಥಳವಾಗಿದೆ. ಇಲ್ಲಿಯೂ ವಾಹನದನಿಲುಗಡೆಗೆಸ್ಥಳಾವಕಾಶದ ಸಮಸ್ಯೆ,ಸ್ವಚ್ಛತೆ, ರಸ್ತೆ ಸಮಸ್ಯೆ ಸೇರಿದಂತೆ ಅನೇಕ ಸಮಸ್ಯೆಗಳು ಕಂಡುಬಂದಿದೆ. ಸಾರ್ವಜನಿಕರಿಗೆ ತೊಂದರೆಯಾಗದಂತೆಹಾಳಾಗಿರುವ ಸ್ಲಾಬ್ ಸರಿಪಡಿಸಿ, ವ್ಯವಸ್ಥಿತವಾಗಿ ಕಸ ವಿಲೇವಾರಿ ಮಾಡುವುದರಜೊತೆಗೆಅಲ್ಲಲ್ಲಿಯೇಕಸದ ಬುಟ್ಟಿಗಳನ್ನಿಡಲು ಸೂಚಿಸಿದ ಅವರುದೇವಸ್ಥಾನದಸುಂದರಿಕರಣಕ್ಕಾಗಿದೇವಾಲಯದಆವರಣದಲ್ಲಿ ಗಿಡಗಳನ್ನು ನೆಟ್ಟು ಬೆಳೆಸಿ, ವಾಹನಗಳನ್ನು ಶಿಸ್ತಿನಿಂದ ನಿಲ್ಲಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದರು.ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಜಿಲ್ಲಾಧಿಕಾರಿಯವರು ಪದೇ ಪದೇಹೊಯ್ಸಳ ಉತ್ಸವಕುರಿತು ಕೇಳಲಾಗುತ್ತಿದೆ. ಈ ನಿಟ್ಟಿನಲ್ಲಿಹೊಯ್ಸಳ ಉತ್ಸವಆಚರಣೆಗೆಜಿಲ್ಲಾಉಸ್ತುವಾರಿ ಸಚಿವರ ಮೂಲಕ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಗುತ್ತದೆಎಂದು ತಿಳಿಸಿದರು.

ರಸ್ತೆಯಎರಡುಬದಿಗಳಲ್ಲಿ ಅಂಗಡಿಗಳು ರಸ್ತೆಯನ್ನುಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುತ್ತಿರುವುದರಿಂದ, ವಾಹನಗಳ ಸಂಚಾರಕ್ಕೆತೊಂದರೆಯಾಗುತ್ತದೆ. ಈ ನಿಟ್ಟಿನಲ್ಲಿ ವ್ಯವಸ್ಥಿತವಾಗಿ ಫುಡ್‌ಕೋರ್ಟ್‌ರೀತಿಯಲ್ಲಿ ಇರಲಿ. ಪಾದಚಾರಿಗಳ ಸಂಚಾರಕ್ಕೆತೊಂದರೆಆಗದಂತೆ ತೆರವುಗೊಳಿಸಲು ಸೂಚಿಸಿದರು.

ರಸ್ತೆಯಲ್ಲಿಯೇ ವಾಹನಗಳನ್ನು ನಿಲ್ಲಿಸುವುದರಿಂದಜನರಿಗೆತೊಂದರೆಯಾಗುತ್ತದೆ. ಈ ನಿಟ್ಟಿನಲ್ಲಿಸೂಕ್ತ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ರಸ್ತೆ ಬದಿಯವ್ಯಾಪಾರಿಗಳು ಅಂಗಡಿ ಮುಂದೆಕಸದ ಬುಟ್ಟಿಗಳನ್ನು ಇಡುವಂತೆ ನೋಟಿಸ್ ನೀಡಲುಪಿ.ಡಿ.ಓ.ಸೂಚನೆ ನೀಡಿದರು.ಹಳೇಬೀಡು ದೇವಾಲಯದ ಮುಂಭಾಗದಲ್ಲಿರಸ್ತೆಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿದ್ದು, ಸಾರ್ವಜನಿಕರಿಗೆತೊಂದರೆಯಾಗದಂತೆತುರ್ತಾಗಿರಸ್ತೆಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.ರಸ್ತೆ ಬದಿಯಲ್ಲಿ ಬೆಳೆದಿರುವ ಗಿಡಗಳನ್ನು ಕತ್ತರಿಸಿಸ್ವಚ್ಛಗೊಳಿಸಿ,ರಸ್ತೆ ಬದಿ ವ್ಯಾಪಾರಿಗಳಿಗೆ ಇ-ಶ್ರಮ್‌ಕಾರ್ಡ್ ವಿತರಣೆ ಮಾಡಿದರೆಅವರಿಗೆ ವ್ಯಾಪಾರಕ್ಕೆ ಸ್ಥಳಾವಕಾಶವಿಲ್ಲ ಎಂಬ ಭಯ ನಿವಾರಣೆಆಗುತ್ತದೆ ಎಂದ ಅವರುರಸ್ತೆ ಮಧ್ಯದಲ್ಲಿಕಬ್ಬಿನಜ್ಯೂಸ್ ಮಾರಾಟ ಮಾಡುವ ಅಂಗಡಿಕಂಡಜಿಲ್ಲಾಧಿಕಾರಿಅವರುಪೊಲೀಸ್‌ಏನ್ ಮಾಡುತ್ತಿದ್ದೀರಿಎಂದು ಪ್ರಶ್ನಿಸಿದರು.

ದೊಡ್ಡ ಗದ್ದುವಳ್ಳಿಯ ದೇವಾಲಯ ವೀಕ್ಷಣೆ ಮಾಡಿದನಂತರ ಸ್ಥಳೀಯರು ಶೌಚಾಲಯ,ಕುಡಿಯುವ ನೀರುಇನ್ನಿತರ ಮೂಲಭೂತ ಸೌಕರ್ಯಗಳ ಸಮಸ್ಯೆಗಳ ಕುರಿತಾಗಿ ನೀಡಿದ ಮಾಹಿತಿಯ ಮೇರೆಗೆ ಸ್ಥಳದಲ್ಲಿಯೇ ಪುರಾತತ್ವಇಲಾಖೆಯ ಅಧಿಕಾರಿಗಳಿಗೆ ಕರೆ ಮಾಡಿಕ್ರಮವಹಿಸಲು ಸೂಚಿಸಿದರಲ್ಲದೆ, ದೇವಾಲಯದ ಭಾವಚಿತ್ರವನ್ನುತೆಗೆದು ಪ್ರವಾಸಿಗರಿಗೆ ಅನುಕೂಲವಾಗುವಂತೆ ಹಾಸನ ಚಿಕ್ಕಮಗಳೂರು ಮಾರ್ಗ ಮಧ್ಯದಲ್ಲಿ ದೊಡ್ಡಗದ್ದುವಳ್ಳಿಯ ಪ್ರವೇಶದ್ವಾರದಲ್ಲಿ ಫಲಕ ಅಳವಡಿಸುವಂತೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕರಾದಅರುಣ್‌ಕುಮಾರ್, ಬೇಲೂರು ತಹಸೀಲ್ದಾರ್ ಶ್ರೀಧರ್ ಮತ್ತಿತರರು ಹಾಜರಿದ್ದರು.

## ಸರಕಾರಿ ನೌಕರರು ಸೇವೆಯಲ್ಲಿ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಿ: ಸುರೇಶ ಹಳ್ಯಾಳ

**ಗದಗ:** ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಮ್ಮ ಸೇವಾ ಅವಧಿಯಲ್ಲಿ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಕಾರ್ಯನಿರ್ವಹಿಸುವಂತೆ ನಿವೃತ್ತ ಖಜಾನೆ ಅಪರ ನಿರ್ದೇಶಕರಾದ ಸುರೇಶ ಹಳ್ಯಾಳ ಅವರು ತಿಳಿಸಿದರು.ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಗುರುವಾರ (ಸೆ.25) ರಂದು ಜರುಗಿದ ಗದಗ ಜಿಲ್ಲಾ ಖಜಾನೆ ನೌಕರರ ಘಟಕದ ವತಿಯಿಂದ ಜರುಗಿದ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸರಕಾರಿ ಸೇವೆ ದೇವರ ಸೇವೆ ಎಂಬಂತೆ ಪ್ರತಿಯೊಬ್ಬ ಸರಕಾರಿ ಅಧಿಕಾರಿ, ಸಿಬ್ಬಂದಿಗಳು ನಿಸ್ವಾರ್ಥ ಸೇವಾ ಮನೋಭಾವನೆಯೊಂದಿಗೆ ಸರಕಾರದ ಯೋಜನೆಗಳನ್ನು ತಲುಪಿಸಲು ಮುಂದಾಗಬೇಕು.

ಖಜಾನೆ ಇಲಾಖೆ ಒಂದು ಪ್ರಮುಖ ಇಲಾಖೆಯಾಗಿದ್ದು ಇಲ್ಲಿ ಕಾರ್ಯದ ಒತ್ತಡ ಸಹಜವಾಗಿರುತ್ತದೆ. ಎಂತಹ ಒತ್ತಡದ ಪರಿಸ್ಥಿತಿಯಲ್ಲಿಯೂ ಸಹ ಕಚೇರಿಗೆ ಆಗಮಿಸುವ ಪ್ರತಿಯೊಬ್ಬರೊಂದಿಗೆ ಸೌಜನ್ಯಯುತವಾಗಿ ವರ್ತಿಸಿ ಅವರ ಕೆಲಸ, ಕಾರ್ಯಗಳನ್ನು ಮಾಡಿಕೊಟ್ಟಲ್ಲಿ ಮಾತ್ರ ಸರಕಾರಿ ಕೆಲಸ ದೇವರ ಕೆಲಸ ಎಂಬ ನಾಣ್ಣುಡಿಗೆ ಅರ್ಥ ಬಂದತಾಗುತ್ತದೆ ಎಂದು ನಿವೃತ್ತ ಖಜಾನೆ ಅಪರ ನಿರ್ದೇಶಕರಾದ ಸುರೇಶ ಹಳ್ಯಾಳ ಅವರು ಅಭಿಪ್ರಾಯ ವ್ಯಕ್ತ ಪಡಿಸಿದರು.

ಜಿಲ್ಲಾ ಪಂಚಾಯತ ಲೆಕ್ಕಾಧಿಕಾರಿಗಳಾದ ಪ್ರಶಾಂತ ಜೆ.ಸಿ. ಅವರು ಮಾತನಾಡಿ ಖಜಾನೆ-2 ತಂತ್ರಾಂಶ ಅಭಿವೃದ್ಧಿ ಪಡಿಸುವಲ್ಲಿ ಅವರ ಪಾತ್ರ ಮಹತ್ವದ್ದು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಜಿಲ್ಲಾ ಖಜಾನೆ ಉಪ ನಿರ್ದೇಶಕರಾದ ವಿ.ಹರಿನಾಥ ಬಾಬು ಅವರು ಮಾತನಾಡಿ ನಿವೃತ್ತ ಖಜಾನೆ ಅಪರ ನಿರ್ದೇಶಕರಾದ ಸುರೇಶ ಹಳ್ಯಾಳ ಅವರು ತಮ್ಮ ವೃತ್ತಿ ಜೀವನದ ಬೆನ್ನಲುಬಿನಂತಿದ್ದರು. ಅವರು ತಮ್ಮ ವೃತ್ತಿ ಜೀವನದ ಉದ್ದಕ್ಕೂ ಪ್ರತಿಯೊಬ್ಬರಿಗೂ ಮಾರ್ಗದರ್ಶಕರಾಗಿ, ಸ್ನೇಹಿತರಾಗಿ ಸಹಕರಿಸಿದರು. ಸುರೇಶ ಹಳ್ಯಾಳ ಅವರು ನಡೆದಾಡುವ ಖಜಾನೆಯಂತಿದ್ದರು ಎಂದು ಪ್ರಶಂಸೆ ವ್ಯಕ್ತಪಡಿಸಿದರು.ನಿಕಟಪೂರ್ವ ಜಿಲ್ಲಾ ಸರ್ಕಾರಿ ನೌಕರ ಸಂಘದ ಅಧ್ಯಕ್ಷರಾಗಿದ್ದ ಪ್ರೇಮನಾಥ ಗರಗ ಅವರು ಮಾತನಾಡಿ ನಿವೃತ್ತ ಅಪರ ನಿರ್ದೇಶಕರು ಸೇವೆಯಲ್ಲಿದ್ದಾಗ ಅವರ ದಕ್ಷ ಆಡಳಿತ ಪ್ರಾಮಾಣಿಕತೆ ಹಾಗೂ ಸಾರ್ವಜನಿಕರೊಂದಿಗಿನ ಅವರ ಆತ್ಮೀಯ ಸಂಬಂಧದ ಕುರಿತು ಮುಕ್ತ ಮನಸ್ಸಿನಿಂದ ಹೊಗಳಿದರು. ಸರ್ಕಾರಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಬಸವರಾಜ ಬಳ್ಳಾರಿ ಅವರು ಮಾತನಾಡಿ ನಿವೃತ್ತ ಅಪರ ನಿರ್ದೇಶಕರ ನಿಸ್ವಾರ್ಥ ಸೇವಾ ಮನೋಭಾವನೆ, ಶಿಸ್ತು, ಸಮಯ ಪುಜ್ಞೆ ಹಾಗೂ ಅವರ ಘನ ವ್ಯಕ್ತಿತ್ವನ್ನು ಕುರಿತು ತಮ್ಮ ಅನಿಸಿಕೆಯನ್ನು ಹಂಚಿಕೊಂಡರು.

## ಉಭಯ ಶ್ರೀಗಳು ಒಂದಾಗಿ ಜಾತಿಗಣತಿ ಬಗ್ಗೆ ಸ್ಪಷ್ಟತೆ ನೀಡಿ: ಖಡ್ಗ ಸಂಘಟನೆ ಮನವಿ

**ದಾವಣಗೆರೆ:** ಸಿರಿಗೆರೆಯ ತರಳಬಾಳು ಬೃಹನ್ಮಠದ ಮಠದ ಶ್ರೀಗಳು ಹಾಗೂ ಸಾಣೇಹಳ್ಳಿ ಶಾಖಾ ಮಠದ ಶ್ರೀಗಳು ಧರ್ಮ ಹಾಗೂ ಜಾತಿಯ ಬಗ್ಗೆ ಭಿನ್ನಾಭಿಪ್ರಾಯವನ್ನು ವ್ಯಕ್ತಪಡಿಸಿರುವುದರಿಂದ ಸರ್ಕಾರ ಜಾತಿಗಣತಿ ಕುರಿತು ಹೆಚ್ಚಿನ ಕಾಲಾವಕಾಶ ನೀಡಬೇಕೆಂದು ಖಡ್ಗ ಸ್ವಯಂ ಸೇವಾ ಸಂಘದ ರಾಜ್ಯಾಧ್ಯಕ್ಷ ರಘು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತರಳಬಾಳು ಸಿರಿಗೆರೆ ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಜಾತಿ ಗಣತಿಯ ವೇಳೆ ಧರ್ಮ ಹಿಂದು ಜಾತಿ ಲಿಂಗಾಯಿತ ಎಂದು ನಮೂದಿಸಿ ಎಂದು ತಿಳಿಸುತ್ತಾರೆ. ತರಳುಬಾಳು ಸಿರಿಗೆರೆ ಶಾಖಾ ಮಠ ಸಾಣೆಹಳ್ಳಿ ಡಾ.ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ಜಾತಿ ಗಣತಿಯ ವೇಳೆ ಧರ್ಮ ಲಿಂಗಾಯತ ಜಾತಿ ಲಿಂಗಾಯಿತ ಎಂದು ನಮೂದಿಸಿ ಎಂದು ಹೇಳುತ್ತಾರೆ. ಒಂದೇ ಮಠದ ಇಬ್ಬರು ಪೀಠಾಧಿಪತಿಗಳು ಈ ರೀತಿಯ ದ್ವಂದ್ವ ನಿಲುವನ್ನು ತಾಳಿದರೆ ಮಠಕ್ಕೆ ನಡೆದುಕೊಳ್ಳುವ ಭಕ್ತರಿಗೆ ಗೊಂದಲ ನಿರ್ಮಾಣವಾಗಿದೆ ಎಂದು ಹೇಳಿದರು.ಸದ್ಯದ ಪರಿಸ್ಥಿತಿಯಲ್ಲಿ ಉದಾಹರಣೆಗೆ ಸಿರಿಗೆರೆ ಮಠದ ಪರವಾಗಿ ಶೇಕಡಾ 50 ಭಾಗ ಮತ್ತು ಸಾಣೆಹಳ್ಳಿ ಮಠದ ಪರವಾಗಿ ಶೇಕಡಾ 50 ರಷ್ಟು ಭಾಗ ಇಬ್ಬರೂ ಗುರುಗಳ ಅಭಿಪ್ರಾಯದಂತೆ ಜಾತಿಗಣತಿಗೆ ದತ್ತಾಂಶವನ್ನು ಆಯೋಗದಲ್ಲಿ ನೊಂದಾಯಿಸಿದರೆ, ಭವಿಷ್ಯದಲ್ಲಿ ಎರಡೂ ಮಠದ ಶ್ರೀಗಳು ಅಥವಾ ಭವಿಷ್ಯದ ಉತ್ತರಾಧಿಕಾರಿಗಳು ಒಮ್ಮೊತದ ನಿಲುವಿಗೆ ಬಂದರೆ ಈ ದತ್ತಾಂಶವನ್ನು ಸರಿಪಡಿಸಲು ಮಠದ ಭಕ್ತರಿಗೆ ಅವಕಾಶವಿದೆಯೇ ಎಂದು ಉಭಯ ಮಠಗಳು ಸ್ಪಷ್ಟತೆ ನೀಡಬೇಕೆಂದು ಆಗ್ರಹಿಸಿದರು.ಇಲ್ಲವಾದಲ್ಲಿ ಭಕ್ತರು ಮತಾಂತರ ಪ್ರಕ್ರಿಯೆಯ ಮೂಲಕ ತಮ್ಮ ಧರ್ಮ ಬದಲಾವಣೆ ಮಾಡಿಕೊಳ್ಳುವ ಅನಿವಾರ್ಯತೆಯನ್ನು ಸೃಷ್ಟಿ ಮಾಡಬೇಡಿ. ಇದರ ಹೊಣೆಗಾರರು ನೀವೇ ಆಗಿರುತ್ತೀರಿ. ಎರಡು ಮಠಗಳು ಒಂದಾಗದೆ ಇದ್ದ ಪಕ್ಷದಲ್ಲಿ ಲಿಂಗಾಯತ ಸಮುದಾಯಕ್ಕೆ ಇಬ್ಬರು ಶ್ರೀಗಳು ಒಂದಾಗುವವರೆಗೆ ಉಪವಾಸ ಸತ್ಯಾಗ್ರಹ ಮಾಡಲು ಕರೆನೀಡಲಾಗುವುದು ಎಂದು ಎಚ್ಚರಿಕೆ ನೀಡಿದರು.ಎರಡೂ ಮಠದ ಶ್ರೀಗಳು ಸ್ಪಷ್ಟನೆ ನೀಡುವುದಕ್ಕೆ ಮುನ್ನ ಯಾವುದೇ ಕಾರಣಕ್ಕೂ ಜಾತಿಗಣತಿಯಲ್ಲಿ ಪಾಲ್ಗೊಳ್ಳಬೇಡಿ ಮತ್ತು ಸಮಯವನ್ನು ಕೇಳಿ, ಏಕೆಂದರೆ ಒಮ್ಮೆ ಜಾತಿಗಣತಿಯಲ್ಲಿ ದತ್ತಾಂಶ ದಾಖಲೆಯಾದರೆ ಭವಿಷ್ಯದಲ್ಲಿ ತಮ್ಮ ದತ್ತಾಂಶವನ್ನು ಬದಲಾಯಿಸಲು ಯಾವುದೇ ದಾರಿ ಇರುವುದಿಲ್ಲ, ನಿಮಗೆ ಮತಾಂತರ ಒಂದೇ ಆಯ್ಕೆ, ಲಿಂಗಾಯಿತ ಧರ್ಮವಾಗುತ್ತದೆಯೋ ಅಥವಾ ಜಾತಿಯಾಗಿಯೇ ಉಳಿಯುತ್ತದೆಯೋ ಅದನ್ನು ಸಮಯ ನಿರ್ಧರಿಸುತ್ತದೆ ಎಂದರು.ಸಿರಿಗೆರೆ ಶ್ರೀಗಳು ಮತ್ತು ಸಾಣೆಹಳ್ಳಿ ಶ್ರೀಗಳು ಒಗ್ಗಟ್ಟಾಗಿ ಎಲ್ಲಾ ಭಕ್ತರ ಆಶಯವನ್ನು ಪರಿಗಣಿಸಬೇಕಾಗಿ ಈ ಮೂಲಕ ವಿನಂತಿಸಿಕೊಳ್ಳುತ್ತೇವೆ. ನೂರಾರು ವರ್ಷಗಳ ಇತಿಹಾಸವಿರುವ ತರಳಬಾಳು ಮಠದ ಗೌರವವನ್ನು ಉಳಿಸುವತ್ತ ಶ್ರೀಗಳು ಗಮನ ಹರಿಸಬೇಕು ಮತ್ತು ಭಕ್ತರ ಭಾವನೆಗಳನ್ನು ಅರ್ಥಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.

ಇತ್ತೀಚಿನ ದಿನಗಳಲ್ಲಿ ಸಿರಿಗೆರೆ ಮಠ ಮತ್ತು ಸಾಣೆ ಹಳ್ಳಿಯ ಮಠ ಇಬ್ಭಾಗವಾಗುತ್ತಿದೆ ಎನ್ನುವ ಭಾವನೆ ಭಕ್ತರಲ್ಲಿ ಬಂದಿರುವುದರಿಂದ ಇದನ್ನು ಬಹಳ ಸೂಕ್ಷ್ಮವಾಗಿ ಪರಿಗಣಿಸಬೇಕಾಗಿ ಈ ಮೂಲಕ ಸಮಸ್ತ ಲಿಂಗಾಯಿತ ಸಮುದಾಯದ ಪರವಾಗಿ ಶ್ರೀಗಳಲ್ಲಿ ಕೋರಿದರು.ಸುದ್ದಿಗೋಷ್ಠಿಯಲ್ಲಿ ಕುಬೇಂದ್ರಸ್ವಾಮಿ, ಚಂದ್ರಹಾಸ, ಷಣ್ಮುಖಯ್ಯ, ಶಶಿಧರ, ಸೈಯದ್ ನಜೀರ್ ಇದ್ದರು.

## ಶ್ರೇಷ್ಠ ವಿಜ್ಞಾನಿಗಳ ಸಾಲಿನಲ್ಲಿ ಯುಬಿಡಿಟಿ ಕಾಲೇಜಿನ ಪ್ರೊ.ಡಾ. ಎಸ್ ಬಸವರಾಜಪ್ಪಗೆ ಸ್ಥಾನ

**ದಾವಣಗೆರೆ:** ಅಮೆರಿಕಾದ ಪ್ರತಿಷ್ಠಿತ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾನಿಲಯ ಮತ್ತು ಎಲ್ಸೆವಿಯರ್ ಸಂಸ್ಥೆ ಅಧ್ಯಯನ ಮಾಡಿ ತಯಾರಿಸಿದ ಜಗತ್ತಿನ ಶೇ.2ರಷ್ಟು ಶ್ರೇಷ್ಠ ವಿಜ್ಞಾನಿಗಳ ಪಟ್ಟಿಯಲ್ಲಿ ನಗರದ ಯುಬಿಡಿಟಿ ಕಾಲೇಜಿನ ಯಾಂತ್ರಿಕ ವಿಭಾಗದ ಮುಖ್ಯಸ್ಥರಾದ ಪ್ರೊ.ಡಾ. ಎಸ್ ಬಸವರಾಜಪ್ಪ ಮತ್ತೊಮ್ಮೆ ಸ್ಥಾನ ಪಡೆದಿದ್ದಾರೆ.ಪ್ರೊ.ಡಾ. ಎಸ್ ಬಸವರಾಜಪ್ಪ ಅವರು ಸತತ ಐದನೇ ಬಾರಿಗೆ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದು, 2024ರ ಪ್ರಭಾವ ಪಟ್ಟಿ ಹಾಗೂ ಜೀವಮಾನದ ಸಾಧನೆ ಪಟ್ಟಿಯಲ್ಲೂ ಸ್ಥಾನ ಪಡೆದಿದ್ದಾರೆ. ಈಚೆಗೆ ಬಿಡುಗಡೆಯಾದ ಪಟ್ಟಿಯಲ್ಲಿ 'ಅಪ್ಡೇಟೆಡ್ ಸೈನ್ಸ್–ವೈಡ್ ಆಥೋರ್ ಡೇಟಾ ಬೇಸ್ ಆಫ್ ಸ್ಟ್ಯಾಂಡರ್ಡ್ ಸಿಟಾಷನ್ ಇಂಡಿಕೇರ್ಸ್' ವಿಶ್ಲೇಷಣೆಯ ವಿಭಾಗ ಮತ್ತು 'ಸ್ಕೋಪ' ಡೇಟಾ ಬೇಸ್ ಆಧಾರದ ಮೇಲೆ ಸಿದ್ದವಾಗಿದೆ. ಸಂಶೋಧನಾ ಲೇಖನಗಳ ಪ್ರಮಾಣ, ಉಲ್ಲೇಖಗಳ ಸಂಖ್ಯೆ, ಹೆಚ್–ಸೂಚ್ಯಾಂಕ, ಸಹ–ಲೇಖಕರ ಆಧಾರ–ಸೂಚ್ಯಾಂಕ ಮುಂತಾದ ಮಾನದಂಡಗಳ ಆಧಾರದ ಮೇಲೆ ಮೌಲ್ಯಮಾಪನ ಮಾಡಲಾಗಿದೆ. ಬಸವರಾಜಪ್ಪ ಅವರಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಸ್. ವಿದ್ಯಾಶಂಕರ್, ಕುಲಸಚಿವ ಪ್ರೊ. ಬಿ. ಇ. ರಂಗಸ್ವಾಮಿ, ಕಾಲೇಜಿನ ಪ್ರಾಂಶುಪಾಲ ಡಾ. ಡಿ. ಪಿ. ನಾಗರಾಜಪ್ಪ, ಅಧ್ಯಾಪಕ ಹಾಗೂ ಅಧ್ಯಾಪಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

## ದೂರಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಾಲಿಯನ್ ಏರೋಸ್ಪೇಸ್–ಬಾಹ್ಯಾಕಾಶ ನಿಯೋಗ

**ಚಿಕ್ಕಮಗಳೂರು:** ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಲಿ – ಭಾರತ ಬಾಹ್ಯಾಕಾಶ, ಏರೋಸ್ಪೇಸ್ ಮತ್ತು ರಕ್ಷಣಾ ರೋಡ್ ಶೋ ಭಾಗವಾಗಿ ಇಟಾಲಿಯನ್ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ನಿಯೋಗವು ಸೆಪ್ಟೆಂಬರ್ 24 ರಂದು ಬೆಂಗಳೂರಿಗೆ ಭೇಟಿ ನೀಡಿತು.ಭೇಟಿಯ ಸಮಯದಲ್ಲಿ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ.ರಾಜೇಶ್ ಎನ್.ಎಲ್. ಅವರು ಕೇಂದ್ರದ ಧ್ಯೇಯ, ಮುಂದುವರೆದ ಸಾಮರ್ಥ್ಯಗಳು, ಬೆಳೆ ಮೇಲ್ವಿಚಾರಣೆ ಹಾಗೂ ವಿಪತ್ತು ನಿರ್ವಹಣೆಯಿಂದ ನಗರ ಯೋಜನೆ ಮತ್ತು ನೈಸರ್ಗಿಕ ಸಂಪನ್ಮೂಲ ನಿರ್ವಹಣೆವರೆಗೆ ಬಾಹ್ಯಾಕಾಶ ಆಧಾರಿತ ಆಡಳಿತ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ವೈವಿಧ್ಯಮಯ ಅನ್ವಯಿಕೆಗಳನ್ನು ಪ್ರಸ್ತುತಪಡಿಸಿದರು.ಕಿಟ್ಸ್ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕರಾದ ಪ್ರಮೋದ್ ಎಲ್.ಪಾಟೀಲ್ ಅವರು, ಕರಡು ಕರ್ನಾಟಕ ಬಾಹ್ಯಾಕಾಶ ನೀತಿಯ ಪ್ರಮುಖ ಅಂಶಗಳನ್ನು ಹಂಚಿಕೊಂಡು ಜಾಗತಿಕ ಸಾಮರ್ಥ್ಯ ಕೇಂದ್ರಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರುವುದನ್ನು ತಿಳಿಸಿದರು.ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್ (ಜಿಐಎ) ಅಡಿಯಲ್ಲಿ ಸುಗಮಗೊಳಿಸಲಾದ ಈ ಕಾರ್ಯಕ್ರಮವು ಬಾಹ್ಯಾಕಾಶ ಅನ್ವಯಿಕೆಗಳು, ಏರೋಸ್ಪೇಸ್ ತಂತ್ರಜ್ಞಾನಗಳು ಮತ್ತು ರಕ್ಷಣಾ ನಾವೀನ್ಯತೆಗಳಲ್ಲಿ ಸಹಯೋಗವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.ಜಂಟಿ ಸಂಶೋಧನೆ, ಶೈಕ್ಷಣಿಕ ಸಂಪರ್ಕಗಳು ಮತ್ತು ಪ್ರತಿಭಾ ವಿನಿಮಯದಲ್ಲಿ ಭಾರತ – ಇಟಲಿ ಸಹಕಾರವನ್ನು ವೃದ್ಧಿಸುವುದು, ಮಾರುಕಟ್ಟೆ ಪ್ರವೇಶ, ಸಹ ಅಭಿವೃದ್ಧಿ, ಕೈಗಾರಿಕೆ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಅವಕಾಶಗಳನ್ನು ತೆರೆಯುವುದು ಹಾಗೂ ಬಾಹ್ಯಾಕಾಶ, ನಾವೀನ್ಯತೆ ಮತ್ತು ತಂತ್ರಜ್ಞಾನ ನೇತೃತ್ವದ ಬೆಳವಣಿಗೆಯಲ್ಲಿ ಕರ್ನಾಟಕವನ್ನು ಇಟಲಿಗೆ ಕಾರ್ಯತಂತ್ರದ ಪಾಲುದಾರರನ್ನಾಗಿ ಸ್ಥಾನೀಕರಿಸುವುದಕ್ಕೆ ಸಂಬಂಧಿಸಿದ ಪ್ರಮುಖ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಯಿತು.
ಈ ಭೇಟಿಯು ಭಾರತ – ಇಟಲಿಯ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಒಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುವುದಲ್ಲದೇ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ನಾವೀನ್ಯತೆಯಲ್ಲಿ ಜಾಗತಿಕ ಕೇಂದ್ರವಾಗಿ ಕರ್ನಾಟಕದ ಪಾತ್ರವನ್ನು ಬಲಪಡಿಸಲಿದೆ.

## ಭಾರತೀಯರು ವಿನಾ ಕಾರಣ ಬೇರೆಯವರಿಗೆ ತೊಂದರೆ ಕೊಡುವುದಿಲ್ಲ



**ಹೊನ್ನಾಳಿ :** ಭಾರತೀಯರು ವಿನಾ ಕಾರಣ ಬೇರೆಯವರಿಗೆ ತೊಂದರೆ ಕೊಡುವುದಿಲ್ಲ, ಒಂದು ವೇಳೆ ನಮಗೆ ತೊಂದರೆ ಕೊಡಲು ಬಂದರೆ ಅಂತಹವರನ್ನು ಸದೆಬಡಿಯದೇ ಬಿಡುವುದಿಲ್ಲವೆಂದು ಮಾಜಿ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಎಚ್ಚರಿಸಿದರು.

ಪಟ್ಟಣದ ಹಿರೇಕಲ್ಮಠದ ಸಮುದಾಯ ಭವನದಲ್ಲಿ ನಡೆಯುತ್ತಿರುವ 4 ನೇ ದಿನದ ಶರನ್ನವರಾತ್ರಿ ಮತ್ತು ದಸರಾ ಮಹೋತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಹಲ್ಗಾಮ್ ದಾಳಿಯಲ್ಲಿ ಪ್ರವಾಸಕ್ಕೆ ಹೋದವರ ಮೇಲೆ ಹಿಂದೂಗಳೆಂದು ಖಚಿತಪಡಿಸಿಕೊಂಡು ಮನಸ್ಸಿಗೆ ಬಂದಂತೆ ಗುಂಡಿನ ದಾಳಿ ನಡೆಸಿ ಹತ್ಯೆಗೈದಿದ್ದ ಪಾಕಿಸ್ತಾನಿ ಪ್ರಚೋದಿತ ಉಗ್ರರನ್ನು ದಾಳಿ ನಡೆಸಿದ 3–4 ದಿನಗಳೊಳಗೆ ಪ್ರಧಾನಿ ನರೇಂದ್ರ ಮೋದಿ ಅವರ ಮಾರ್ಗದರ್ಶನದಲ್ಲಿ ಆಪರೇಷನ್ ಸಿಂಧೂರದ ಮೂಲಕ ಉಗ್ರರ ಹುಟ್ಟಡಗಿಸಿದ ಭಾರತವನ್ನು ಎಲ್ಲಾ ದೇಶಗಳೂ ಕೂಡ ಬೆಂಬಲಿಸಿದ್ದವು, ಆಗ ಪಾಕಿಸ್ತಾನವು ಏಕಾಂಗಿಯಾಗಿತ್ತು, ಇಷ್ಟಾದರೂ ಪಾಕಿಸ್ತಾನವು ಪಾಠ ಕಲಿಯದಿದ್ದರೆ ಮುಂದೆ ಅದಕ್ಕೆ ವಿನಾಶ ಕಟ್ಟಿಟ್ಟ ಬುತ್ತಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹೊನ್ನಾಳಿ ಹಿರೇಕಲ್ಮಠವು ಈ ಭಾಗದ ಭಕ್ತರ ಒಳಿತಿಗೋಸ್ಕರ ಹಲವಾರು ಪೂಜಾ–ಕೈಂಕರ್ಯಗಳು, ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಕುಟುಂಬ ಸಮೇತವಾಗಿ ಪಾಲ್ಗೊಂಡು ಅವುಗಳ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಅವರು ಕರೆ ನೀಡಿದರು.

ಸಾಧು–ಸಂತರ ಸಹವಾಸದಿಂದ ಪುಣ್ಯ ಕ್ಷೇತ್ರಗಳಿಗೆ ಹೋಗಿ ಬಂದಷ್ಟು ಪುಣ್ಯ ಲಭಿಸುತ್ತದೆ, ಇಂದಿನ ಯುವ ಪೀಳಿಗೆಯು ಮೊಬೈಲ್‌ಗಳಿಗೆ ದಾಸರಾಗಿ ಅನೇಕ ತೊಂದರೆಗಳಿಗೆ ಈಡಾಗುತ್ತಿದ್ದಾರೆ, ಪೋಷಕರು ತಮ್ಮ ಮಕ್ಕಳನ್ನು ಮಠ–ಮಾನ್ಯಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳಿಗೆ ಕರೆದುಕೊಂಡು ಬರುವ ಮೂಲಕ ಸನ್ಮಾರ್ಗದಲ್ಲಿ ನಡೆಯುವಂತೆ ನೋಡಿಕೊಳ್ಳಬೇಕಾಗಿರುವುದು ಅನಿವಾರ್ಯವಾಗಿದೆ ಎಂದು ಸಲಹೆ ನೀಡಿದರು.

ಗೋವಿನಕೋವಿ ಹಾಲಸ್ವಾಮಿ ಮಠದ ಶಿವಯೋಗಿ ಮಹಾಲಿಂಗ ಹಾಲಸ್ವಾಮೀಜಿಗಳು ಆಶೀರ್ವಚನ ನೀಡಿ ಭಾರತೀಯ ಸಂಸ್ಕೃತಿಯಲ್ಲಿ ಪ್ರತಿಯೊಂದು ಹಬ್ಬಗಳ ಆಚರಣೆಯಿಂದ ಮನು ಕುಲಕ್ಕೆ ಒಳಿತಾಗುತ್ತಿದ್ದು ಹಬ್ಬಗಳ ವಿಧಿ–ವಿಧಾನಗಳನ್ನು ಅರಿತು ಆಚರಣೆ ಮಾಡಬೇಕೆಂದು ಸಲಹೆ ನೀಡಿದರು.

ದೇವಿ ಪುರಾಣ ವಾಚನದಿಂದ ನಮಗೆಲ್ಲರಿಗೂ ನೆಮ್ಮದಿ–ಶಾಂತಿ ದೊರಕುತ್ತದೆ, ಹಿರೇಕಲ್ಮಠದ ನವರಾತ್ರಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವುದರಿಂದ ದೇವಿಯ ಆಶೀರ್ವಾದದ ಜೊತೆಗೆ ಗುರುವಿನ ದರ್ಶನಾಶೀರ್ವಾದವು ಲಭಿಸುತ್ತದೆ ಎಂದು ದೃಷ್ಟಾಂತಗಳ ಮೂಲಕ ಉದಾಹರಿಸಿದರು.

ಕುವೆಂಪು ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕ ಡಾ.ಜಿ.ಪ್ರಶಾಂತ್ ನಾಯಕ್ ಅವರು ನವರಾತ್ರಿ ಹಬ್ಬದ ಆಚರಣೆಯ ಬಗ್ಗೆ ಉಪನ್ಯಾಸ ನೀಡಿದರು.

ಧರ್ಮಸಭೆಯಲ್ಲಿ ಒಡೆಯರ್ ಡಾ.ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು, ಚನ್ನಪ್ಪಸ್ವಾಮಿ ವಿದ್ಯಾಪೀಠದ ಕಾರ್ಯದರ್ಶಿ ಚನ್ನಯ್ಯ ಬೆನ್ನೂರ್‌ಮಠ,ಮುಖಂಡರಾದ ಎಚ್.ಎಂ.ರುದ್ರೇಶ್, ನಾರಾಯಣ ಪವಾರ್, ಮಲ್ಲಣ್ಣ ಅಂಗಡಿ, ಮೃತ್ಯುಂಜಯ ಪಾಟೀಲ್, ಅಮೃತಗೌಡ, ಬಸವರಾಜಣ್ಣ ಪಟ್ಟಣಶೆಟ್ಟಿ, ಬಿದ್ದಾಡಪ್ಪ ಚಕ್ರಸಾಲಿ, ಟಿ.ಎಂ.ಬಸವರಾಜಯ್ಯ, ಎನ್.ಪಿ.ಸುರೇಶ್ ಕುಂಬಾರ್, ಗುರುಪ್ರಸಾದ್, ಸುದೀಪ್, ಅವಿನಾಶ್, ಹರ್ಷ ಮತ್ತಿತರರು ಉಪಸ್ಥಿತರಿದ್ದರು.ಮಠದ ಸೇವಾಕರ್ತರಿಗೆ ಗುರುರಕ್ಷೆ ನೀಡಿ ಸನ್ಮಾನಿಸಲಾಯ್ತು.ಸುರಹ 'ೂನ್ನೆಯ ಶ್ರೀ ಒಡೆಯರ್ ಚಂದ್ರಶೇಖರ ಶಿವಾಚಾರ್ಯ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಜಾಯಾಲುಕ್ಕಾಸ್ ನವೀಕೃತ ಮಳಿಗೆ ಉದ್ಘಾಟಿಸಿದ ಸಂಸದ ಶ್ರೇಯಸ್ ಪಟೇಲ್

**ಹಾಸನ:** ನಗರದ ಬಿ.ಎಂ ರಸ್ತೆಯಲ್ಲಿರುವ ಜಾಯಾಲುಕ್ಕಾಸ್ ನವೀಕೃತ ಮಳಿಗೆಯನ್ನು ಸಂಸದ ಶ್ರೇಯಸ್ ಪಟೇಲ್ ಇಂದು ಉದ್ಘಾಟಿಸಿದರು.

ನವೀಕೃತ ಮಳಿಗೆ ಉದ್ಘಾಟನೆ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಗಿರೀಶ್ ಚನ್ನವೀರಪ್ಪ, ಉಪಮೇಯರ್ ಹೇಮಲತಾ ಕಮಲ್ ಕುಮಾರ್, ಜಾಯಲುಕ್ಕಾಸ್ ನ

ಕರ್ನಾಟಕದ ಪ್ರಾದೇಶಿಕ ವ್ಯವಸ್ಥಾಪಕ ಜಿನೇಶ್ ವಿಎಸ್, ಚಿಲ್ಲರೆ ವ್ಯಾಪಾರದ ಮುಖ್ಯಸ್ಥ ರಾಜೇಶ್ ಕೃಷ್ಣನ್ ಇತರರು ಸಂಸದರಿಗೆ ಕೈ ಜೋಡಿಸಿದರು.



ಬಳಿಕ ಸಂಸದ ಶ್ರೇಯಸ್ ಪಟೇಲ್ ಮಾತನಾಡಿ,

ಜಾಯಾಲುಕ್ಕಾಸ್ ದೇಶದಲ್ಲಿ ನಂಬಿಕಸ್ತ ಹಾಗೂ ಗುಣಮಟ್ಟದ ಆಭರಣಗಳನ್ನು ಒದಗಿಸುವ ಮೂಲಕ ಹೆಸರುವಾಸಿಯಾಗಿದೆ. ಹಾಸನದ ಜನರು ತಮ್ಮ ನೆಚ್ಚಿನ ಆಭರಣಗಳನ್ನು ಇಲ್ಲಿ ಖರೀದಿಸುವಂತೆ ಕರೆ ನೀಡಿದರು.

ಜಾಯಾಲುಕ್ಕಾಸ್ ಹಾಸನದಲ್ಲಿಯೂ ಕಳೆದ ಹಲವು ವರ್ಷಗಳಿಂದ ರಿಯಾಯಿತಿ ದರದಲ್ಲಿ ಚಿನ್ನ, ಬೆಳ್ಳಿ, ವಜ್ರದ ಆಭರಣಗಳನ್ನು ಗ್ರಾಹಕರಿಗೆ ಒದಗಿಸುವ ಮೂಲಕ ಗ್ರಾಹಕರ ನಂಬಿಕೆಯನ್ನು ಗಳಿಸಿದೆ, ಅಲ್ಲದೆ ಕಂತುಗಳ ಮೂಲಕ ಹಣ ಪಾವತಿಸಿ ಆ ಮೂಲಕವೂ ಒಡವೆಗಳನ್ನು ಖರೀದಿಸಲು ಅವಕಾಶ ಕಲ್ಪಿಸಿರುವ ಜಾಯಾಲುಕ್ಕಾಸ್ ಮಳಿಗೆಗಳು ಇನ್ನಷ್ಟು ಹೆಚ್ಚಾಗಲಿ ಎಂದು ಶುಭ ಹಾರೈಸಿದರು.

ಜಾಯಲುಕ್ಕಾಸ್ ನ ಕರ್ನಾಟಕದ ಪ್ರಾದೇಶಿಕ ವ್ಯವಸ್ಥಾಪಕ ಜಿನೇಶ್ ವಿಎಸ್, ಮಾತನಾಡಿ,

ಕಳೆದ ಹತ್ತು ವರ್ಷಗಳಿಂದ ಹಾಸನದಲ್ಲಿ ಸೇವೆ ಸಲ್ಲಿಸುತ್ತಿರುವ ಜಾಯಾಲುಕ್ಕಾಸ್ ಇದೀಗ ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ ಆದುದರಿಂದ ಎರಡು ಹಂತದ ಕಟ್ಟಡದ ಜೊತೆಗೆ ನವೀಕರಣಗೊಳಿಸಲಾಗಿದೆ. ಇನ್ನು ಮುಂದಿನ ವರ್ಷಗಳಲ್ಲಿ 200 ಮಳಿಗೆಗಳನ್ನು ದೇಶಾದ್ಯಂತ ತೆರೆಯುವ ಗುರಿ ಹೊಂದಲಾಗಿದೆ ಎಂದರು.

ದೇಶದಲ್ಲಿ 170ಕ್ಕೂ ಅಧಿಕ ಮಳಿಗೆಗಳನ್ನು ಹೊಂದಿರುವ ನಮ್ಮ ಸಂಸ್ಥೆ ಹಾಸನದಲ್ಲಿ ದೊಡ್ಡ ಮಳಿಗೆಯನ್ನು

ಹೊಂದುವ ಜೊತೆಗೆ ಗ್ರಾಹಕರಿಗೆ ಗುಣಮಟ್ಟದ ಆಭರಣಗಳನ್ನು ರಿಯಾಯಿತಿ ದರದಲ್ಲಿ ವಿಶೇಷ ಆಫರ್ ಗಳೊಂದಿಗೆ ನೀಡುತ್ತಿದೆ ಅಲ್ಲದೆ ಉತ್ತಮ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು ಇದೀಗ ಮೇಕಿಂಗ್ ಚಾರ್ಜಸ್ ನಲ್ಲಿ ಶೇಕಡ 50ರಷ್ಟು ರಿಯಾಯಿತಿ ಒದಗಿಸಲಾಗಿದೆ ಎಂದರು.

## ಎಂಇಎಸ್ ಬಿಇಡಿ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಸಂಸ್ಥಾಪನ ದಿನ




**ದಾವಣಗೆರೆ:** ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ಸಾರ್ವಜನಿಕ ಸೇವೆಯ ಮೂಲಕ ಅಭಿವೃದ್ಧಿಗೊಳಿಸುವುದು ರಾಷ್ಟ್ರೀಯ ಸೇವಾ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಎಂಇಎಸ್ ಶಿಕ್ಷಣ ಮಹಾವಿದ್ಯಾಲಯದ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಪ್ರದೀಪ್ ಹೇಳಿದರು.

ನಗರದ ಆಂಜನೇಯ ಬಡಾವಣೆಯಲ್ಲಿರುವ ಎಇಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಸಂಸ್ಥಾಪನಾ ದಿನಾಚರಣೆಯನ್ನು ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಗೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕಿದ್ದು, ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಈ ದಿಕ್ಕಿನಲ್ಲೂ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ವಾಗೀಶ್ ಸ್ವಾಮಿ ಹಿರೇಮಠ್, ಹಾಗೂ ಹಿರಿಯ ಉಪನ್ಯಾಸಕ ಪ್ರೊ. ಬಿ.ಜಿ.ಬಸವರಾಜಪ್ಪ, ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಎಸ್.ನಾಗರಾಜ್, ಸಹ ಶಿಬಿರಾಧಿಕಾರಿ ಎನ್. ರಂಗನಾಥ್, ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಂಶುಪಾಲ ಪ್ರೊ.ಪರಶುರಾಮ್ ಕಟಾವ್‌ಕರ್ ಉಪಸ್ಥಿತರಿದ್ದರು.

ಇದೇ ವೇಳೆ 2 ವರ್ಷ ಎನ್‌ಎಸ್‌ಎಸ್ ಶಿಬಿರದಲ್ಲಿ ಭಾಗವಹಿಸಿದ ಪ್ರ ಶಿಕ್ಷಣಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಥಮ, ದ್ವಿತೀಯ ವರ್ಷದ ಬಿಇಡಿ ಪ್ರಶಿಕ್ಷಣಾರ್ಥಿಗಳು, ಉಪನ್ಯಾಸಕರು ಉಪಸ್ಥಿತರಿದ್ದರು.

## ಬಯಲುಸೀಮೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರ ಪದಗ್ರಹಣ

**ಚಿತ್ರದುರ್ಗ:** ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷರಾಗಿ ನೇಮಕಗೊಂಡಿರುವ ದಾವಣಗೆರೆ ಜಿಲ್ಲೆ ಹೊನ್ನಾಳಿ ತಾಲ್ಲೂಕಿನ ದೊಡ್ಡಕೆರೆ ಹೆಚ್.ಜಿ. ಮಂಜಪ್ಪ ಅವರು ಸೆ. 29 ರಂದು ಮಧ್ಯಾಹ್ನ 12 ಗಂಟೆಗೆ ಚಿತ್ರದುರ್ಗದ ತಮಟಕಲ್ ರಸ್ತೆಯಲ್ಲಿರುವ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಕಚೇರಿಯಲ್ಲಿ ಅಧಿಕಾರ ವಹಿಸಿಕೊಳ್ಳುವರು ಎಂದು ಮಂಡಳಿಯ ಕಾರ್ಯದರ್ಶಿ ಸತೀಶ್ ರೆಡ್ಡಿ ತಿಳಿಸಿದ್ದಾರೆ.

## ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಸಾಲದ ನೆರವು

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರವಾಗಿ ಸಾಲ ನೀಡಲು ಉದ್ದೇಶಿಸಿದೆ.
ಈ ಸಾಲ ಯೋಜನೆಯಲ್ಲಿ ಹಲವು ಉದ್ದಿಮೆಗಳಲ್ಲಿ (ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಉದ್ಯಮ, ವ್ಯಾಪಾರ, ಇತ್ಯಾದಿ) ಚಟುವಟಿಕೆಗಳನ್ನು ನಡೆಸಲು ರೂ.1 ಲಕ್ಷ ಹಾಗೂ ರೂ.2 ಲಕ್ಷಗಳ ಆರ್ಥಿಕ ಸಾಲವನ್ನು ಒದಗಿಸಲಾಗುವುದು. ಈ ಮೊತ್ತದಲ್ಲಿ ಶೇ.20ರಷ್ಟು ಸಹಾಯಧನ ಹಾಗೂ ಉಳಿಕೆ ಶೇ.80ರಷ್ಟು ಮೊತ್ತಕ್ಕೆ ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಮಂಡಳಿಯಿಂದ ನೇರವಾಗಿ ಸಾಲ ಮಂಜೂರು ಮಾಡಲಾಗುವುದು.
ವಿಪ್ರ ಸ್ವ–ಉದ್ಯಮ ನೇರ ಸಾಲ ಯೋಜನೆಗೆ ಅಕ್ಟೋಬರ್ 31ರ ಸಂಜೆ 5 ಗಂಟೆಯ ಒಳಗೆ ಅರ್ಜಿ ಸಲ್ಲಿಸಬಹುದು. ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು <ಷಣಣಠಿ://ಇಥಿಜಆಥ.ಛಿಠ.ಟಿ/ಐಂಚಿಟಿ/> ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ದೂರವಾಣಿ ಸಂಖ್ಯೆಗಳು (+91 8029605888, +91 8762249230) ಅಥವಾ ನಗರದ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕಚೇರಿ ಸಹಾಯವಾಣಿ(08262295535)ಯನ್ನು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5ರವರೆಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಬಲ ಬೆಲೆಯಡಿ ಭತ್ತ ಖರೀದಿ

**ಶಿವಮೊಗ್ಗ:** 2025–26 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಕೇಂದ್ರ ಸರ್ಕಾರವು ಭತ್ತವನ್ನು ಖರೀದಿಸಲು ಮುಂದಾಗಿದ್ದು, ಸಾಮಾನ್ಯ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ.2369 ಹಾಗೂ ಗ್ರೇಡ್ ಎ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ. 2389 ದರವನ್ನು ನಿಗದಿಪಡಿಸಲಾಗಿದೆ.ಜಿಲ್ಲಾ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಮತ್ತು ನಿಗಮದ ವತಿಯಿಂದ TAPCMS/PACS/FPOs/ಉಪ ಏಜೆನ್ಸಿಗಳನ್ನು ನೇಮಿಸಲಾಗಿದೆ. ರೈತರಿಂದ ಪ್ರತಿ ಎಕರೆಗೆ 25 ಕ್ವಿಂಟಾಲ್ ನಂತೆ ಗರಿಷ್ಠ 50 ಕ್ವಿಂಟಾಲ್ ಭತ್ತವನ್ನು ಖರೀದಿಸಲಿದ್ದು, ಜಿಲ್ಲೆಯ ಎಲ್ಲಾ 7 ತಾಲ್ಲೂಕುಗಳ ಎಪಿಎಂಸಿ ಯಾರ್ಡ್ ಗಳಲ್ಲಿರುವ ಕೆಎಫ್‌ಸಿಎಸ್‌ಸಿ (KFCSC) ಸಗಟು ಮಳಿಗೆಗಳಲ್ಲಿ ಭತ್ತ ಖರೀದಿ ಕೇಂದ್ರ ತೆರೆಯಲಾಗಿದೆ.ಭತ್ತವನ್ನು ನೊಂದಾಯಿಸಿಕೊಳ್ಳಲು ಅ.31 ಕೊನೆಯ ದಿನಾಂಕವಾಗಿದ್ದು, ರೈತರು ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಫ್ರೂಟ್ಸ್ ಐಡಿಯೊಂದಿಗೆ ಖರೀದಿ ಕೇಂದ್ರಗಳಲ್ಲಿ ನೊಂದಾಯಿಸಬೇಕು. ನ.1 ರಿಂದ ಫೆ 28 ರವರೆಗೆ ಭತ್ತವನ್ನು ಖರೀದಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಪ್ರಕಟಣೆಯಲ್ಲಿ ತಿಳಸಿದ್ದಾರೆ.

## ಅರ್ಜಿ ಆಹ್ವಾನ

**ಚಿತ್ರದುರ್ಗ:** ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ನೀಡಲು ಪರಿಶಿಷ್ಟ ವರ್ಗದ ಕಾನೂನು ಪದವೀಧರರನ್ನು ಆಯ್ಕೆ ಮಾಡಬೇಕಾಗಿರುವುದರಿಂದ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಮಾಸಿಕ ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕಾಲಮಿತಿಯ ಬದಲು ವರ್ಷದ ಎಲ್ಲ ದಿನಗಳಲ್ಲೂ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. 2025ರ ಸೆ.26 ರಿಂದ 2025ರ ಅಕ್ಟೋಬರ್ 10 ರವರೆಗೆ ಆನ್ ಲೈನ್ tw.kar.nic.in ನಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಜಿಲ್ಲಾ ಪರಿಶಿಷ್ಟ ವರ್ಗಗಳವರ ಕಚೇರಿ, ಚಿತ್ರದುರ್ಗ ಇಲ್ಲಿಗೆ ಸಲ್ಲಿಸಲು ಅಕ್ಟೋಬರ್ 10 ಕೊನೆಯ ದಿನವಾಗಿದೆ.
ಷರತ್ತುಗಳು: ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ದಿನಾಂಕಕ್ಕೆ ಕಾನೂನು ಪದವಿಯನ್ನು ಪಡೆದು 02 ವರ್ಷ ಮೀರಿರಬಾರದು. ಬಾರ್ ಕೌನ್ಸಿಲಿಂನ ಖಾಯಂ ಸದಸ್ಯತ್ವ ಪ್ರಮಾಣ ಪತ್ರ ಸಲ್ಲಿಸಬೇಕು ಹಾಗೂ ತರಬೇತಿಯನ್ನು ಜಿಲ್ಲೆಯಲ್ಲಿಯೇ ಪಡೆಯಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ಆಯ್ಕೆ ಮಾಡಲಾದ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಸರ್ಕಾರದ ಆದೇಶದಂತೆ ಶಿಷ್ಯ ವೇತನವನ್ನು ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ 20 ವರ್ಷಗಳ ಕಾಲ ಕಡಿಮೆ ಇಲ್ಲದ ವಕೀಲ ವೃತ್ತಿಯಲ್ಲಿ ಸೇವೆ ಸಲ್ಲಿಸಿರುವ ನ್ಯಾಯವಾದಿಗಳ ಬಳಿ ತರಬೇತಿ ಪಡೆಯುತ್ತೀರಿ ಎಂಬ ಬಗ್ಗೆ ಲಿಖಿತ ರೂಪದಲ್ಲಿ ತಿಳಿಸಿರಬೇಕು.

## ಆರೋಗ್ಯ ಸಂಜೀವಿನಿ' ಯೋಜನೆ ಜಾರಿ ಸರ್ಕಾರಿ ನೌಕರರ ಜಿಲ್ಲಾ ಶಾಖೆ ಅಭಿನಂದನೆ

**ದಾವಣಗೆರೆ:** ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರದಿಂದ ನಗದು ರಹಿತ ವೈದ್ಯಕೀಯ ಚಿಕಿತ್ಸೆ 'ಆರೋಗ್ಯ ಸಂಜೀವಿನಿ' ಯೋಜನೆಯನ್ನು ಜಾರಿಗೊಳಿಸುತ್ತಿರುವುದಕ್ಕೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದೆ.

ನಗದು ರಹಿತ ವೈದ್ಯಕೀಯ ಚಿಕಿತ್ಸೆಗಳನ್ನು ಒದಗಿಸಲು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ರಾಜ್ಯಸರ್ಕಾರ ಜಾರಿಗೊಳಿಸುತ್ತಿದ್ದು, ಬರುವ ಅ.1ರಿಂದಲೇ ಜಾರಿಗೆ ಬರಲಿದೆ. ಇದರಿಂದ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 15 ಸಾವಿರ ಸರ್ಕಾರಿ ನೌಕರರು

ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರು ಸೇರಿದಂತೆ ಅಂದಾಜು 75–80 ಸಾವಿರ ಫಲಾನುಭವಿಗಳು ಈ ಯೋಜನೆಯ ಲಾಭ ಪಡೆಯಲಿದ್ದಾರೆ ಎಂದು ಜಿಲ್ಲಾ ಶಾಖೆಯ ಅಧ್ಯಕ್ಷ ವೀರೇಶ್ ಎಸ್. ಒಡೇನಪುರ್ ಪತ್ರಿಕಾ ಹೇಳಿಕೆಯಲ್ಲಿ ಸಂತಸ ಹಂಚಿಕೊಂಡಿದ್ದಾರೆ.

ಸರ್ಕಾರ ಈ ಯೋಜನೆಗೆ ರಾಜ್ಯದ ಸರ್ಕಾರಿ ನೌಕರರಿಗೆ ವಾರ್ಷಿಕ 500 ರೂ., ಕೋಟಿ ಅನುದಾನ ಕಾಯ್ದಿರಿಸಿದೆ. ಈ ಯೋಜನೆಯ ಸೌಲಭ್ಯ ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ, ನೌಕರರು ಪ್ರತಿ ತಿಂಗಳು ಸರ್ಕಾರ ನಿರ್ಧಿಷ್ಟಪಡಿಸಿರುವ ವಂತಿಗೆಯನ್ನು ಅಕ್ಟೋಬರ್–2025ನೇ ಮಾಹೆಯಿಂದ ನೀಡಬೇಕಿದೆ. ಪತಿ–ಪತ್ನಿ ಇಬ್ಬರು ಸರ್ಕಾರಿ ನೌಕರರಾಗಿದ್ದಲ್ಲಿ ಒಬ್ಬರು ಮಾತ್ರ ವಂತಿಗೆಯನ್ನು ನೀಡಬೇಕಿದೆ. ಮಾಸಿಕ ವಂತಿಗೆಯನ್ನು ನೀಡಲು ಇಚ್ಚಿಸದೇ ಇರುವ ನೌಕರರು ಅ.18ರೊಳಗಾಗಿ ಲಿಖಿತವಾಗಿ ಸಂಬಂಧಿಸಿದ ಅಧಿಕಾರಿಗಳಿಗೆ ಪತ್ರ ಕಳಿಸಬೇಕಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರಿಗೆ ಈ ಯೋಜನೆಯನ್ನು ಅಕ್ಟೋಬರ್ ಮಾಹೆಯಿಂದ ಜಾರಿಗೊಳಿಸಿ ಆದೇಶ ಹೊರಡಿಸಿದ ಮುಖ್ಯಮಂತ್ರಿಗಳಿಗೆ, ಉಪ ಮುಖ್ಯಮಂತ್ರಿಗಳಿಗೆ ಹಾಗೂ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಸೇರಿದಂತೆ ಜಿಲ್ಲೆಯ ಶಾಸಕರು, ವಿಪ ಸದಸ್ಯರುಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

## ಚಾಲುಕ್ಯನಗರದ ಶ್ರೀ ಚೌಡೇಶ್ವರಿ ಅಮ್ಮನವರಿಗೆ ರೇಣುಕಾ ದೇವಿ ಅಲಂಕಾರ

**ಶಿವಮೊಗ್ಗ :** ನಗರದ ಚಾಲುಕ್ಯನಗರದಲ್ಲಿರುವ ಶ್ರೀ ಚೌಡೇಶ್ವರಿ ದೇವಿಗೆ

ಸೆ. 27ರಂದು ಶ್ರೀಮತಿ ಲಲಿತಾ ಶ್ರೀ ದ್ರೋಣಾಚಾರ್ಯ ಕುಟುಂಬದವರಿಂದ ಲಲಿತಾ ಹೋಮ, ಶ್ರೀಮತಿ ಲಲಿತಮ್ಮ ಶ್ರೀ ಯಲಪ್ಪ ಕುಟುಂಬದವರಿಂದ ರೇಣುಕಾದೇವಿ ಅಲಂಕಾರ ನೆರವೇರಿಸಲಾಯಿತು.



ಸೆ. 28ರಂದು ಶ್ರೀಮತಿ ವಿ ಹೆಚ್ ಮೇಘ ಶ್ರೀ ಶ್ರೀ ಎಸ್ ಹೆಚ್ ರೋಹಿತ್ ಕುಟುಂಬದಿಂದ ನವನೀತ ಅಲಂಕಾರ, ಶ್ರೀಮತಿ ಸೌಮ್ಯ ಮತ್ತು ಶ್ರೀ ಸಿದ್ದೇಶ್ ಕುಟುಂಬದಿಂದ ಶ್ರೀ ದುರ್ಗಾ ಮಹಾಲಕ್ಷ್ಮಿ ಹೋಮ ಏರ್ಪಡಿಸಲಾಗಿದೆ.

ಅದೇ ದಿನ ಸಂಜೆ 6.30 ರಿಂದ ಡಾ ಎಂ ಎಸ್ ಸನತ್ ಕುಮಾರ್ ಸೋಮಯಾಜಿ ಮತ್ತು ಶ್ರೀ ಅಚ್ಯುತ ಅವಧಾನಿ ಮತ್ತೂರು ಇವರಿಂದ ಗಮಕ ಕಾವ್ಯಗಾಯನ ಮತ್ತು ವ್ಯಾಖ್ಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾತ್ರಿ 8.00 ರಿಂದ ಶ್ರೀಮತಿ ಭಾರತಿ ಶ್ರೀ ಮಂಜುನಾಥ ಕುಟುಂಬದವರಿಂದ ಉಯ್ಯಾಲೇ ಸೇವೆ ಹಮ್ಮಿಕೊಳ್ಳಲಾಗಿದೆ. 8.30ಕ್ಕೆ ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ವಿರುತ್ತದೆ

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕಾಗಿ ಆಡಳಿತ ಮಂಡಳಿ ಕೋರಿದ್ದಾರೆ

# 27 ಭಾರತೀಯರ ಬಿಡುಗಡೆಗೆ ಆಗ್ರಹ

**ನವದೆಹಲಿ:** ರಷ್ಯಾದ ಸೇನೆಗೆ ನೇಮಕಗೊಂಡ ಇನ್ನೂ 27 ಭಾರತೀಯ ಪ್ರಜೆಗಳನ್ನು ಬಿಡುಗಡೆ ಮಾಡಲು ಮತ್ತು ವಾಪಸ್ ಕಳುಹಿಸಲು ರಷ್ಯಾದ ಅಧಿಕಾರಿಗಳನ್ನು ಬಲವಾಗಿ ಒತ್ತಾಯಿಸಲಾಗಿದೆ ಎಂದು ಭಾರತ ಹೇಳಿದೆ.

ರಷ್ಯಾದ ಸೇನೆಗೆ ಹೆಚ್ಚಿನ ಭಾರತೀಯ ಪ್ರಜೆಗಳು ಸೇರಿದ್ದಾ-ರೆ ಎಂದು ಭಾರತೀಯ ಅಧಿಕಾರಿಗಳು ಇತ್ತೀಚೆಗೆ ಪತ್ತೆ ಹಚ್ಚಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ.

2024 ರ ಏಪ್ರಿಲ್ ನಲ್ಲಿ ತನ್ನ ಸಶಸ್ತ್ರ ಪಡೆಗಳಲ್ಲಿ ಭಾರತೀಯರನ್ನು ನೇಮಕ ಮಾಡುವುದನ್ನು ನಿಲ್ಲಿಸಿದೆ ಎಂದು ಮಾಸ್ಕೋ ಪ್ರತಿಪಾದಿಸಿದ ಹೊರತಾಗಿಯೂ ರಷ್ಯಾದ ಮಿಲಿ

ಟರಿಯಲ್ಲಿ ಉದ್ಯೋಗಗಳ ಲಾಭದಾಯಕ ಕೊಡುಗೆಗಳೊಂದಿಗೆ ಭಾರತೀಯ ನಾಗರಿಕರಿಗೆ ಆಮಿಷವೊಡ್ಡುವ ಸಮಸ್ಯೆ ಮುಂದುವರೆದಿದೆ. ಉಕ್ರೇನ್ ನೊಂದಿಗಿನ ಯುದ್ಧದಲ್ಲಿ ಮುಂಚೂಣಿಯಲ್ಲಿ ನಿಯೋಜಿಸಲಾದ ರಷ್ಯಾದ ಸೇನಾ ಘಟಕಗಳಿಗೆ ಸೇರಲು ಒತ್ತಾಯಿಸಲ್ಪಟ್ಟ ಒಂದು ಡಜನ್ ಗೂ ಹೆಚ್ಚು ಭಾರತೀಯ ಪುರುಷರು, ಹೆಚ್ಚಾಗಿ ಕಾಶ್ಮೀರ, ಪಂಜಾಬ್ ಮತ್ತು ಹರಿಯಾಣದಿಂದ ಬಂದವರು ಎಂದು ಇತ್ತೀಚಿನ ವರದಿಗಳು ಸೂಚಿಸಿವೆ.

ಈ ಪುರುಷರಲ್ಲಿ ಹೆಚ್ಚಿನವರು ವಿದ್ಯಾರ್ಥಿ ಮತ್ತು ವ್ಯಾಪಾರ ವೀಸಾಗಳಲ್ಲಿ ರಷ್ಯಾಕ್ಕೆ ಪ್ರಯಾಣಿಸಿದ್ದವರು ಎಂದು ಹೇಳಲಾಗಿದೆ.

# ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಅರ್ಥಪೂರ್ಣ ಆಚರಣೆಗೆ ಸಿದ್ದತೆ ಕೈಗೊಳ್ಳಿ

## ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

**ಚಿತ್ರದುರ್ಗ :** ಅಕ್ಟೋಬರ್ 02 ರಂದು ಜಿಲ್ಲಾ ಕೇಂದ್ರದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಶುಕ್ರವಾರ ಗಾಂಧೀಜಿ ಜಯಂತಿ ಆಚರಣೆಯ ಸಂಬಂಧ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಕ್ಟೋಬರ್ 2ರಂದು ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಹಾಗೂ ಎಲ್ಲ ಶಾಲಾ ಕಾಲೇಜುಗಳಲ್ಲಿ ತಪ್ಪದೇ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಭಾವಚಿತ್ರಗಳಿಗೆ ಗೌರವ ಸಮರ್ಪಿಸುವ ಮೂಲಕ ಜಯಂತಿ ಆಚರಿಸಬೇಕು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೆಳಿಗ್ಗೆ 9.30 ಗಂಟೆಗೆ ಆಯೋಜಿಸುವ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ತಪ್ಪದೇ ಭಾಗವಹಿಸಬೇಕು. ಜಯಂತಿ ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 9 ಗಂಟೆಯಿಂದ ಜಿಲ್ಲಾಧಿಕಾರಿಗಳ ಕಚೇರಿ, ಒನಕೆ ಓಬವ್ವ ವೃತ್ತ ಸುತ್ತಮುತ್ತಲ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಆವರಣವನ್ನು ಶುಚಿಗೊಳಿಸಲು ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಇದಕ್ಕೆ ನಗರಸಭೆ ಅಧಿಕಾರಿಗಳು ವ್ಯವಸ್ಥೆ ಕೈಗೊಳ್ಳಬೇಕು. ಎಲ್ಲ ಅಧಿಕಾರಿಗಳು ತಪ್ಪದೆ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದರು.

ಶಿಷ್ಟಾಚಾರದ ಅನುಸಾರ ಜಯಂತಿ (ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ, ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ನಗರಸಭೆ ವತಿಯಿಂದ ಗಾಂಧೀಜಿ ಹಾಗೂ ಶಾಸ್ತ್ರೀಜಿಯವರ ಭಾವಚಿತ್ರಕ್ಕೆ ಅಲಂಕರಿಸುವ ಕಾರ್ಯ ಆಗಬೇಕು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗಾಂಧೀಜಿಯವರ ಪ್ರಿಯ ಭಜನೆಗಳು ಹಾಗೂ ಗೀತೆಗಳ ಗಾಯನ ಏರ್ಪಾಡು ಮಾಡಬೇಕು. ಶಿಕ್ಷಣ ಇಲಾಖೆಯು ವಿದ್ಯಾರ್ಥಿಗಳಿಂದ ಸರ್ವಧರ್ಮ ಪ್ರಾರ್ಥನೆ ಆಯೋಜಿಸಬೇಕು. ವಾರ್ತಾ ಇಲಾಖೆಯಿಂದ ಗಾಂಧೀಜಿ ಜೀವನ ಸಾಧನೆ ಕುರಿತು ಉಪನ್ಯಾಸಕ್ಕೆ ವ್ಯವಸ್ಥೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಗಾಂಧೀಜಿ ಜಯಂತಿ ಅಂಗವಾಗಿ ಅಧಿಕಾರಿಗಳು ಜಿಲ್ಲಾ ಹಾಗೂ ಅಧೀನ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಸ್ವಚ್ಚತಾ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ನಿರ್ದೇಶನ ನೀಡಿದರು.

ಗಾಂಧೀಜಿ ಜಯಂತಿ ಅಂಗವಾಗಿ ವಾರ್ತಾ ಇಲಾಖೆಯಿಂದ ಜಿಲ್ಲಾ ಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಪ್ರೌಢಶಾಲೆ, ಪದವಿಪೂರ್ವ ಹಾಗೂ ಪದವಿ/ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಪ್ರತ್ಯೇಕವಾಗಿ ಆಯೋಜಿಸಲಾಗಿತ್ತು. ಇದರಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದಲ್ಲಿ ಬಹುಮಾನ ವಿತರಣೆ ಮಾಡಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಪ್ರಥಮ ಸ್ಥಾನ ಪಡೆದ ಪ್ರಬಂಧಗಳನ್ನು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಗಾಗಿ ಕಳುಹಿಸಿಕೊಡಲಾಗಿದೆ ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ. ತುಕಾರಾಂರಾವ್ ಸಭೆಯಲ್ಲಿ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಿವಕುಮಾರ್, ಜಿ.ಪಂ. ಉಪಕಾರ್ಯದರ್ಶಿ ಡಾ. ರಂಗಸ್ವಾಮಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಪ.ಪೂ. ಇಲಾಖೆ ಉಪನಿರ್ದೇಶಕ ಕೆ. ತಿಮ್ಮಯ್ಯ, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಚಿದಾನಂದಸ್ವಾಮಿ, ಆಹಾರ ಇಲಾಖೆ ಉಪನಿರ್ದೇಶಕ ಸಿದ್ರಾಮ ಮಾರಿಹಾಳ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪೂರ್ವಿಕರು ಉಳಿಸಿದ ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ: ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು, ಸೆ.28:** ಪ್ರವಾಸೋದ್ಯಮದ ಹೆಸರಿನಲ್ಲಿ ನಮ್ಮ ಪೂರ್ವಿಕರು ಉಳಿಸಿ ಹೋಗಿರುವ ಈ ಸುಂದರವಾದ ಪ್ರಕೃತಿ-ಪರಿಸರವನ್ನು ಹಾಳು ಮಾಡಲು ಬಿಡದೆ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಶಾಸಕರಾದ ಹೆಚ್.ಡಿ.ತಮ್ಮಯ್ಯ ಹೇಳಿದರು.

ಜಿಲ್ಲಾ ಪ್ರವಾಸೋದ್ಯಮ ಇಲಾಖೆ, ರೌಂಡ್ ಟೇಬಲ್, ಜಿಲ್ಲಾ ಹೋಂ ಸ್ಟೇ ಮಾಲೀಕರ ಸಂಘ, ಜಿಲ್ಲಾ ರೆಸಾರ್ಟ್ ಮಾಲೀಕರ ಸಂಘ, ಜೀಪ್ ಅಸೋಸಿಯೇಶನ್, ಅಡ್ವೆಂಚರ್ ಕ್ಲಬ್ ಆಶ್ರಯದಲ್ಲಿ ವಿಶ್ವ ಪ್ರವಾಸೋದ್ಯಮ ದಿನದ ಅಂಗವಾಗಿ ನಗರದಿಂದ ಮುತ್ತೋಡಿವರೆಗೆ ಆಯೋಜಿಸಲಾಗಿದ್ದ ಬೈಕ್ ರ್‍ಯಾಲಿಗೆ ಇಂದು ಬೆಳಿಗ್ಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ ಅವರೊಂದಿಗೆ ಸಚಾಲನೆ ನೀಡಿ ಅವರು ಮಾತನಾಡಿದರು.

ವಿಶ್ವದಲ್ಲೇ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿದೆ. ಇಂದು ಎಲ್ಲೆಡೆಯ ಪ್ರದೇಶಗಳು ಕಾಂಕ್ರೀಟ್ ನಗರವಾಗಿ ಪರಿಣಮಿಸಿರುವ ಹಿನ್ನೆಲೆಯಲ್ಲಿ ಜನರು ಪರಿಸರ ಪ್ರೇಮಿಗಳಾಗಿದ್ದು, ಪಶ್ಚಿಮಘಟ್ಟದಲ್ಲಿರುವ ಈ ಜಿಲ್ಲೆಯ ರಮಣೀಯ ಸ್ಥಳಗಳನ್ನು ವೀಕ್ಷಣೆ ಮಾಡಲು ಆಗಮಿಸುತ್ತಿದ್ದಾರೆ. ಪ್ರವಾಸಿಗರಿಗೆ ಪರಿಸರ ಉಳಿಸುವ ಕಾಳಜಿಯ ಬಗ್ಗೆ ತಿಳಿ ಹೇಳಬೇಕು ತಿಳಿಹೇಳಬೇಕು ಎಂದರು.

ಈಗಾಗಲೇ ಚಂದ್ರದ್ರೋಣ ಪರ್ವತ ಶ್ರೇಣಿಯ ಕೆಲವು ಭಾಗಗಳನ್ನು ಪ್ಲಾಸ್ಟಿಕ್ ಮುಕ್ತ ಮಾಡಲಾಗಿದೆ. ಮುಂದೆ ನಗರವನ್ನು ಸಹ ಪ್ಲಾಸ್ಟಿಕ್ ಮುಕ್ತ ಮಾಡಲು ತೀರ್ಮಾನಿಸಲಾಗಿದೆ. ಈ ಜಿಲ್ಲೆ ಪಂಚ ನದಿಗಳ ಉಗಮಸ್ಥಾನವಾಗಿದ್ದು, ಪ್ಲಾಸ್ಟಿಕ್ ಹಾವಳಿಯಿಂದ ಈ ನದಿಗಳ ಅಸ್ತಿತ್ವಕ್ಕೆ ಮುಂದೆ ಸಂಚಕಾರ ಬರಬಹುದು. ಹೀಗಾಗಿ ಅವುಗಳನ್ನು ಕಾಪಾಡಿಕೊಳ್ಳುವುದು ಸಹ ನಮ್ಮೆಲ್ಲರ ಜವಾಬ್ದಾರಿ ಎಂದರು.

ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ ಮಾತನಾಡಿ, ಪ್ರಪಂಚದ ಭೂಪಠದಲ್ಲಿ ಚಿಕ್ಕಮಗಳೂರನ್ನು ಹುಡುಕುವ ಅಗತ್ಯವಿಲ್ಲ. ಈ ಜಿಲ್ಲೆ ಪ್ರವಾಸೋದ್ಯಮದಲ್ಲಿ ಅಷ್ಟೊಂದು ವಿಶೇಷವಾಗಿ ಗುರುತಿಸಿಕೊಂಡಿದೆ. ಚಿಕ್ಕಮಗಳೂರು ಪರಿಸರವನ್ನು ಉಳಿಸಬೇಕು,



ಬೆಳೆಸಬೇಕು. ಪರಿಸರದ ಜೊತೆಗೆ ಪೀಳಿಗೆಯಲ್ಲಿ ಧಾರ್ಮಿಕತೆ, ಸಾಂಸ್ಕೃತಿಕತೆ ಬಗ್ಗೆ ಆಸಕ್ತಿ ಬೆಳೆಸುವ ಕೆಲಸ ಮಾಡಬೇಕಾಗಿದೆ ಎಂದು ಆಶಿಸಿದರು.

ಪ್ರವಾಸಿಗರು ಬಂದಾಗ ನಿರ್ಬಂಧ ಇರಬೇಕು. ಆದರೆ ನಿರ್ಬಂಧದ ಹೆಸರಿನಲ್ಲಿ ಸಂಪೂರ್ಣವಾಗಿ ನಿಯಂತ್ರಿಸಿದರೆ ಪ್ರವಾಸಿಗರಿಗೆ ತೊಂದರೆಯಾಗುತ್ತದೆ. ಅವರಿಗೆ ಆನ್‌ಲೈನ್‌ನಲ್ಲಿ ಬುಕ್ಕಿಂಗ್‌ಗೆ ಅವಕಾಶ ಸಿಗದಿದ್ದರೆ ಸಮಸ್ಯೆಯಾಗಿ ಪ್ರವಾಸೋದ್ಯಮ ಹಾಳಾಗುತ್ತದೆ. ಊರಿನ ಹೆಸರೂ ಹಾಳಾಗುತ್ತದೆ ಎಂದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಆರ್.ಲೋಹಿತ್ ಸ್ವಾಗತಿಸಿ, ಮಾತನಾಡಿ, ಪ್ರತೀ ಜಿಲ್ಲೆಯಲ್ಲಿ ರಾಜ್ಯ ಸರ್ಕಾರ ಹೆಚ್ಚು ಪ್ರಚಲಿತವಿಲ್ಲದ ಪ್ರವಾಸಿ ತಾಣಗಳನ್ನು ಪ್ರಚುರಪಡಿಸುವ ಸಲುವಾಗಿ ಪ್ರತೀ ವರ್ಷವೂ ಬೈಕ್ ರ್‍ಯಾಲಿ, ಜೀಪ್ ರ್‍ಯಾಲಿ, ಸೈಕಲ್ ರ್‍ಯಾಲಿಯನ್ನು ಆಯೋಜಿಸುತ್ತಾ ಬರಲಾಗಿದೆ ಎಂದು ತಿಳಿಸಿದರು.

ವಿಶ್ವ ಪ್ರವಾಸೋದ್ಯಮದ ಪ್ರಯುಕ್ತ ದತ್ತಪೀಠ, ಕವಿಕಲ್‌ಗಂಡಿ, ಕೊಳಗಾಮೆ ಮಾರ್ಗವಾಗಿ ಮುತ್ತೋಡಿ ಅರಣ್ಯ, ಮಲ್ಲಂದೂರು ಶೂಟಿಂಗ್ ಪಾಯಿಂಟ್, ಉಕ್ಕುಡ ಫಾಲ್ಸ್, ರಂಗನಬೆಟ್ಟ, ಬಂಡಕಲ್ಲು ಬೆಟ್ಟ, ತೋಟ್ಲಪ್ಪನ ಗುಡ್ಡ ಹೀಗೆ ಪರ್ಯಾಯ ತಾಣಗಳತ್ತ ಪ್ರವಾಸಿಗರ ಗಮನ ಸೆಳೆಯುವ ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ಬಗ್ಗೆ ಕೆ.ಡಿ.ಪಿ. ಸಭೆಯಲ್ಲಿ ಟೂರಿಸಂ ವೆಬ್‌ಸೈಟ್ ಕೂಡ ಲಾಂಚ್ ಆಗಿದೆ. ಅಲ್ಲದೆ, ರೀಲ್ಸ್, ಫೇಸ್‌ಬುಕ್, ಇನ್‌ಸ್ಟಾಗ್ರಾಂ ಮೂಲಕ ದೇಶಕ್ಕೆ ಮಾತ್ರವಲ್ಲ, ಪ್ರಪಂಚಕ್ಕೆ ಪ್ರಚುರಪಡಿಸುವ ಸಲುವಾಗಿ ಬೈಕ್ ರ್‍ಯಾಲಿಯನ್ನು ಆಯೋಜಿಸಲಾಗಿದೆ ಎಂದರು.

'ಪ್ರವಾಸೋದ್ಯಮ ಮತ್ತು ಸುಸ್ಥಿರ ಪರಿವರ್ತನೆ' ಎಂಬುದು ಈ ವರ್ಷದ ಧ್ಯೇಯ ವಾಕ್ಯ. ಈ ಶೀರ್ಷಿಕೆಯಡಿ ಇಂದು ಬೈಕ್ ರ್‍ಯಾಲಿ ಮತ್ತು ಸೆಪ್ಟಂಬರ್ 29ಕ್ಕೆ ಕ್ಲೀನಿಂಗ್ ಡ್ರೈವ್ ಅನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಸಿ.ಶಿವಾನಂದಸ್ವಾಮಿ, ವಕೀಲರಾದ ತೇಜಸ್, ರೌಂಡ್ ಟೇಬಲ್ ಅಧ್ಯಕ್ಷರಾದ ಅನಿಲ್, ಜೀಪ್ ಅಸೋಸಿಯೇಶನ್‌ನ ಅಧ್ಯಕ್ಷರಾದ ಇನಾಯತ್, ರೆಸಾರ್ಟ್ ಅಸೋಸಿಯೇಶನ್‌ನ ಪದಾಧಿಕಾರಿಗಳು ಮತ್ತಿತರರಿದ್ದರು. ಸುಮಾರು 35 ಮಂದಿ ಬೈಕ್ ಸವಾರರುಗಳು ಈ ರ್‍ಯಾಲಿಯಲ್ಲಿ ಭಾಗವಹಿಸಿದ್ದರು.

# ಟಿ.ಎಸ್. ನಾಗಾಭರಣ ಅವರಿಂದ 415 ನೇ ಶ್ರೀರಂಗಪಟ್ಟಣ ದಸರಾ ಅದ್ದೂರಿ ಚಾಲನೆ

415ನೇ ಶ್ರೀರಂಗಪಟ್ಟಣ ದಸರಾ ಉದ್ಘಾಟನೆಯನ್ನು ಖ್ಯಾತ ಚಲನಚಿತ್ರ ನಟ,ನಿರ್ದೇಶಕ, ನಿರ್ಮಾಪಕ ಟಿ.ಎಸ್ ನಾಗಾಭರಣ ಅವರಿಂದ ಅದ್ದೂರಿಯಾಗಿ ಚಾಲನೆ ನೀಡಲಾಯಿತು.

ಇಂದು (ಸೆ.25) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಲಾಗಿದ್ದ 415 ನೇ ಶ್ರೀರಂಗಪಟ್ಟಣದಲ್ಲಿ ದಸಾರ ಕಾರ್ಯಕ್ರಮ ಅಧಿಕೃತ ಚಾಲನೆಯನ್ನು ನೀಡಲಾಯಿತು.

**ಕಣ್ಮನ ಸೆಳೆದ ಮೆರವಣಿಗೆ:** 415 ನೇ ಶ್ರೀರಂಗಪಟ್ಟಣ ದಸರಾ ಅಂಗವಾಗಿ ಆಯೋಜಿಸಲಾಗಿದ್ದ ಪೂಜಾಕುಣಿತ, ತಮಟೆ, ನಗಾರಿ, ಪಟ್ಟಕುಣಿತ, ಹುಲಿವೇಷ,ವೀರಗಾಸೆ, ವೀರ ಭದ್ರಕುಣಿತ, ಕಾಳಿ ಕುಣಿತ, ಕಂಸಾಳೆ,ವೀರ ಮಕ್ಕಳ ಕುಣಿತ, ಓನಕೆ ಕುಣಿತ, ಕೋಲಾಟ, ಕರಗಿದ ಕೋಲಾಟ, ಗೊಂಬೆ ಕುಣಿತ, ಡೊಳ್ಳು ಕುಣಿತ, ಬೆಂಕಿ ಭರಾಟೆ, ದೊಣ್ಣೆ ವರಸೆ, ಸೋಮನ ಕುಣಿತ, ಬೇಡರ ವೇಷ, ಹಾಲಕ್ಕಿ ಸುಗ್ಗಿ ಕುಣಿತ, ಗಾರುಡಿಗೊಂಬೆ, ಚಿಲಿಪಿಲಿಗೋಬೆ, ನಾಸಿಕ್ ಡೊಲಾಟಗಳು ನೋಡುಗರ ಗಮನ ಸೆಳೆದವು.

**ಸ್ತಬ್ಧ ಚಿತ್ರಗಳು :** ತೋಟಗಾರಿಕೆ ಇಲಾಖೆಯ ಸ್ತಬ್ಧ ಚಿತ್ರಗಳು, ಕೃಷಿ ಇಲಾಖೆಯ ಸ್ತಬ್ಧಚಿತ್ರ, ಭಾರತೀಯ ಬೌದ್ಧ ಮಹಾಸಭಾ, ಕೃಷಿ ಇಲಾಖೆಯ ಸ್ತಬ್ಧಚಿತ್ರ, ಶಿಕ್ಷಣ ಇಲಾಖೆಯ ಸ್ತಬ್ಧ ಚಿತ್ರ, ರೇಷ್ಮೆ ಇಲಾಖೆಯ ಸ್ತಬ್ಧ ಚಿತ್ರ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪಂಚ ಗ್ಯಾರಂಟಿ ಯೋಜನೆಗಳ ಸ್ತಬ್ಧ ಚಿತ್ರ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಕ್ಕಳ ಮಾರಾಟ ನಿಷೇಧ ಮತ್ತು ಅಪರಾಧ, ಅರಣ್ಯ ಇಲಾಖೆಯ ಸ್ತಬ್ಧ ಚಿತ್ರಗಳು ನೆರೆದಿದ್ದ ಸಾರ್ವಜನಿಕರ ಚಿತ್ತವನ್ನು ತನ್ನತ್ತ ಸೆಳೆದವು.

# ಪರಿಶಿಷ್ಟ ವರ್ಗಕ್ಕೆ ಪ್ರಬಲ ಜಾತಿ ಸೇರ್ಪಡೆ ವಿರೋಧಿಸಿ ವಾಲ್ಮೀಕಿ ಸಮುದಾಯದಿಂದ ಬೃಹತ್ ಪ್ರತಿಭಟನೆ ಸರ್ಕಾರಕ್ಕೆ ಮನವಿ

**ಹರಿಹರ :** ಪರಿಶಿಷ್ಟ ವರ್ಗದ ಪಟ್ಟಿಗೆ ಪ್ರಬಲ ಜಾತಿಗಳನ್ನು ಸೇರ್ಪಡೆಗೆ ವಿರೋಧಿಸಿ, ಸುಳ್ಳು ಎಸ್ ಟಿ ಪ್ರಮಾಣ ಪತ್ರಗಳನ್ನು ಪಡೆದವರ ಮತ್ತು ನೀಡಿದವರು ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ವಾಲ್ಮೀಕಿ ಸಮುದಾಯದಿಂದ ಬೃಹತ್ ಪ್ರಕಟಣೆ ನಡೆಸಿ ಸರ್ಕಾರಕ್ಕೆ ಮನವಿ ಅರ್ಪಿಸಿದರು.

ಗುರುವಾರ ನಗರದಲ್ಲಿ ಪರಿಶಿಷ್ಟ ವರ್ಗಕ್ಕೆ ಪ್ರಬಲ ಜಾತಿಯವರನ್ನು ಸೇರ್ಪಡೆಗೆ ವಿರೋಧಿಸಿ, ಪರಿಶಿಷ್ಟ ಪಂಗಡ ಪ್ರವರ್ಗ-1 ಬೇರೆ ಸಮುದಾಯ ದವರು ಜಾತಿ ಪ್ರಮಾಣ ಪತ್ರ ಪಡೆದು ವಂಚಿಸುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿ, ತಾಲೂಕು ವಾಲ್ಮೀಕಿ ನಾಯಕ ಎಸ್.ಟಿ ಟ್ರಸ್ಟ್,ಹರಿಹರ ನಗರದ ಘಟಕ, ಎಸ್.ಟಿ ಮಹಿಳಾ ಘಟಕ ಸಂಯುಕ್ತಾಶ್ರಯದಲ್ಲಿ ಬೃಹತ್ ಪ್ರತಿಬಟನಾ ಮೆರವಣಿಗೆ ನಡೆಸಿ, ತಹಸೀಲ್ದಾರ್ ಮೂಲಕ ರಾಜ್ಯಪಾಲರಿಗೆ, ಮುಖ್ಯ ಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿದರು. ನಗರದ ಶಿವಮೊಗ್ಗ ರಸ್ತೆಯ ನೀರಾವರಿ ಇಲಾಖೆ ಗಣೇಶ ದೇವಸ್ಥಾನದಿಂದ ತಹಶೀಲ್ದಾರ ಕಛೇರಿವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿದ್ದ, ತಾಲೂಕು ವಾಲ್ಮೀಕಿ ನಾಯಕ ಸಮುದಾಯದ ಮುಖಂಡರು, ಮಹಿಳೆಯರು, ಯುವಕರು, ವಿದ್ಯಾರ್ಥಿ ಮುಖಂಡರು ಮಹಾತ್ಮ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಕೆಲವೊಂದು ರಸ್ತೆ ತಡೆ ನಡೆಸಿ ಪ್ರತಿಭಟಿಸಿದರು.

ತಹಸೀಲ್ದಾರ್ ರವರಿಗೆ ಮನವಿ ಅರ್ಪಿಸಿ ನಂತರ ತಾಲೂಕು ಎಸ್.ಟಿ ಟ್ರಸ್ಟ್ ಅಧ್ಯಕ್ಷ ಪಾಲಾಕ್ಷಪ್ಪ ಮಕರಿ ಮಾತನಾಡಿ, ನಮ್ಮ ಸಮಾಜವು ಅತ್ಯಂತ




ಹಿಂದುಳಿದ ಸಮಾಜವಾಗಿದ್ದು ನಿರೀಕ್ಷತ ಪ್ರಮಾನದಲ್ಲಿ ಶೈಕ್ಷಣಿಕ, ಸಾಮಾಜಿ, ಆರ್ಥಿಕವಾಗಿ ಬಲಗೊಂಡಿಲ್ಲ, ನಮ್ಮ ಮೀಸಲಾತಿ ನಮಗಿರಲಿ, ಅದರಲ್ಲಿಯೂ ಅನ್ಯ ಪ್ರಭಲ ಜಾತಿಯವರನ್ನು ಪರಿಶಿಷ್ಟ ಪತಿ ಜಾತಿಗೆ ಸೇರಿಸುವುದಕ್ಕೆ ನಮ್ಮ ವಿರೋಧವಿದೆ.

ಜೊತೆಗೆ ನಮ್ಮ ಎಸ್.ಟಿ ಜಾತಿಯ ಹೆಸರಿನಲ್ಲಿ ಬೇರೆ ಜಾತಿಯ ಕೆಲವು ವ್ಯಕ್ತಿಗಳು ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ನಮಗೆ ವಂಚಿಸುತ್ತಿದ್ದಾರೆ, ಪಡೆದವರ ಹಾಗೂ ನೀಡಿದ ಅಧಿಕಾರಿಗಳ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಬೇಕು ಮುಂದಿನ ದಿನಗಳಲ್ಲಿ ಯಾರಿಗೂ ಈ ರೀತಿಯ ಸುಳ್ಳು ಪ್ರಮಾಣ ಪತ್ರ ನೀಡವುದಕ್ಕೆ ಸರ್ಕಾರ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು.

ಎಸ್.ಟಿ ಮಹಿಳಾ ಮುಖಂಡರು ಹಾಗು ನಗರಸಭೆ ಅಧ್ಯಕ್ಷೆ ಕವಿತಾ ಮಾರುತಿ ಬೇಡರ ಮಾತನಾಡಿ,ಯಾವುದೇ ಸಮುದಾಯವನ್ನು ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡದ ಜಾತಿಗೆ ಸೇರಿಸಬೇಕಾದರೆ, ಸಂವಿದಾನದ ಪರಚ್ಛೆದದ 342 ರನ್ವಯ ಕುಲ ಶಾಸ್ತ್ರ ಅದ್ಯಯನ ಗಳನ್ನು ನಡೆಸಿ, ಬುಡಕಟ್ಟು ಸಂಪ್ರದಾಯಗಳ ಪಾತ್ರವಿದ್ದರೆ ಅಂತಹ ಜಾತಿಗಳನ್ನು ಸೇರಿಸಿಕೊಳ್ಳಲು ಅವಕಾಶ ವಿರುತ್ತದೆ. ಆದರೆ, ಪ್ರಭಲ ಕೋಮಿನವರನ್ನು ಯ್ಯಾವುದೇ ಅಧ್ಯಯನವಿಲ್ಲದೆ ಎಸ್.ಟಿ ಸೇರರ್ಪಡೆಗೆ ಸರ್ಕಾರ ಮುಂದಾಗಿರುವ ಕ್ರಮ ಸರಿಯಾದುದ್ದಲ್ಲ.

ಈಗಾಗಲೇ ಪರಿಶಿಷ್ಟ ಪಂಗಡದಲ್ಲಿ ಗುರುತಿಸಿಕೊಂಡಿರುವ ಜಾತಿ ಯಲ್ಲಿರುವವರೆಲ್ಲಾ ನಿರೀಕ್ಷಿತ ಮಟ್ಟದಲ್ಲಿ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ,ಔದ್ಯೋಗಿಕ ಹಾಗೂ ರಾಜಕೀಯವಾಗಿ ಅಭಿವೃದ್ಧಿ ಹೊಂದಿಲ್ಲ.ಇವೆಲ್ಲದರ ಮಧ್ಯದಲ್ಲಿಯೇ ರಾಜ್ಯ ಸರ್ಕಾರ ಪ್ರಭಲ ಕೊಮಿನವರನ್ನು ಎಸ್.ಟಿ ಪಟ್ಟಿಗೆ ಸೇರಿಸಲು ಮುಂದಾಗಿರುವ ಕ್ರಮ ನ್ಯಾಯಯುತವಾದುದ್ದಲ್ಲ.ಆದಾಗ್ಯೂ ಎಸ್.ಟಿ ಸಮುದಾಯಕ್ಕೆ ಯಾವುದೇ ರೀತಿಯಲ್ಲಿ ಅನ್ಯಾಯವಾಗದಂತೆ ಸರ್ಕಾರ ಕ್ರಮ ತೆಗೆದುಕೊಳ್ಳಲು ಮುಂದಾಗಬೇಕೆಂದು ಬೇಡರ ಆಗ್ರಹಿಸಿದರು.

ವಾಲ್ಮೀಕಿ ಗುರುಪೀಠದ ಧರ್ಮದರ್ಶಿ ಕೆ.ಬಿ.ಮಂಜುನಾಥ ಮಾತನಾಡಿ ಇಂದು ನಡೆಯುತ್ತಿರುವ ಈ ಪ್ರತಿಭಟನೆಯು ಬಲಾಢ್ಯ ರನ್ನು ಪರಿಶಿಷ್ಟ ಪಂಗಡ ಪಟ್ಟಿಯಲ್ಲಿ ಸೇರ್ಪಡೆಗೆ ಸರ್ಕಾರ ಹುನ್ನಾರ ನಡೆಸುತ್ತಿದೆ. ಮುಖ್ಯಮಂತ್ರಿಗಳು ಪರಿಶಿಷ್ಟ ವರ್ಗದ ಇಲಾಖೆಯನ್ನು ತಮ್ಮ ಬಳಿಯೇ ಇಟ್ಟುಕೊಂಡು ತಮ್ಮದೇ ಪ್ರಬಲ ಪಂಗಡವನ್ನು ಈ ಪೆಟ್ಟಿಗೆ ಸೇರಿಸಲು ಪ್ರಯತ್ನಿಸುತ್ತಿದ್ದಾರೆ. ಈ ರೀತಿಯ ಆಲೋಚನೆ ಗಳನ್ನು ಬಿಟ್ಟು ಎಲ್ಲಾ ಸಮುದಾಯಗಳಿಗೆ ಅನುಕೂಲವಾಗುವ ನಿಟ್ಟನಲ್ಲಿ ಕಾರ್ಯಪ್ರವೃತ್ತವಾಗಬೇಕು. ತಪ್ಪಿದರೆ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ಅನಿವಾರ್ಯವಾಗುತ್ತದೆ ಎಂದು ಹೇಳಿದರು.

ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಆರ್ ಧನರಾಜ, ನಿವೃತ್ತ ಶಿಕ್ಷಕ ಭಾನುವಳ್ಳಿ ಪುಟ್ಟಪ್ಪ, ನಾಗರಾಜ ಜಿಗಳಿ, ನಗರಸಭೆಯ ಮಾಜಿ ಸದಸ್ಯ ಹಂಚಿನ ನಾಗಣ್ಣ, ಮಹಿಳಾ ಮುಖಂಡರಾದ ಪಾರ್ವತಿ ಸೇರಿದಂತೆ ಅನೇಕರು ಪರಿಶಿಷ್ಟ ವರ್ಗದ ಇತ್ತೀಚಿನ ಬೆಳವಣಿಗೆ ಕುರಿತು ಹಾಗೂ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ವಿವರವಾಗಿ ಮಾತನಾಡಿದರು.

ಪ್ರತಿಭಟನೆಯ ಸಮಯದಲ್ಲಿ ನಗರಸಭೆ ಸದಸ್ಯ ಆರ್.ದಿನೇಶ ಬಾಬು, ಶ್ರೀಕಾಂತಶ್ರೀ, ವಾಸನ ಮಂಹಾಂತೇಶ್, ರಾಜು ಭಾವಿಕಟ್ಟಿ, ಕುಬೇರಪ್ಪ ಬೇವಿನಹಳ್ಳಿ, ಕೊಂಡಜ್ಜಿ ಗಿರೀಶ್, ಬಿ ಬಸವರಾಜ, ಕುರುಬರಹಳ್ಳಿ ಮಂಜು, ಸಾರಥಿ ಮಂಜು, ಎಂ.ಎನ್ ಬಸವರಾಜ, ಸಾಲಕಟ್ಟೆ ಸಿದ್ದಪ್ಪ, ರವಿರಾಜ ತಾವರಗಿ ಸೇರಿದಂತೆ ಸಮುದಾಯದ ನೂರಾರು ಜನರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ದೂರಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಾಲಿಯನ್ ಏರೋಸ್ಪೇಸ್-ಬಾಹ್ಯಾಕಾಶ ನಿಯೋಗ

**ಚಿಕ್ಕಮಗಳೂರು, ಸೆ.28:** ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಲಿ - ಭಾರತ ಬಾಹ್ಯಾಕಾಶ, ಏರೋಸ್ಪೇಸ್ ಮತ್ತು ರಕ್ಷಣಾ ರೋಡ್ ಶೋ ಭಾಗವಾಗಿ ಇಟಾಲಿಯನ್ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ನಿಯೋಗವು ಸೆಪ್ಟೆಂಬರ್ 24 ರಂದು ಬೆಂಗಳೂರಿಗೆ ಭೇಟಿ ನೀಡಿತು.

ಭೇಟಿಯ ಸಮಯದಲ್ಲಿ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ. ರಾಜೇಶ್ ಎನ್.ಎಲ್. ಅವರು ಕೇಂದ್ರದ ಧ್ಯೇಯ, ಮುಂದುವರೆದ ಸಾಮರ್ಥ್ಯಗಳು, ಬೆಳೆ ಮೇಲ್ವಿಚಾರಣೆ ಹಾಗೂ ವಿಪತ್ತು ನಿರ್ವಹಣೆಯಿಂದ ನಗರ ಯೋಜನೆ ಮತ್ತು ನೈಸರ್ಗಿಕ ಸಂಪನ್ಮೂಲ ನಿರ್ವಹಣೆವರೆಗೆ ಬಾಹ್ಯಾಕಾಶ ಆಧಾರಿತ ಆಡಳಿತ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ವೈವಿಧ್ಯಮಯ ಅನ್ವಯಿಕೆಗಳನ್ನು ಪ್ರಸ್ತುತಪಡಿಸಿದರು.

ಕಿಟ್ಸ್ ಸಂಸ್ಥೆಯ ಪ್ರಧಾನ




ವ್ಯವಸ್ಥಾಪಕರಾದ ಪ್ರಮೋದ್ ಎಲ್.ಪಾಟೀಲ್ ಅವರು, ಕರಡು ಕರ್ನಾಟಕ ಬಾಹ್ಯಾಕಾಶ ನೀತಿಯ ಪ್ರಮುಖ ಅಂಶಗಳನ್ನು ಹಂಚಿಕೊಂಡು ಜಾಗತಿಕ ಸಾಮರ್ಥ್ಯ ಕೇಂದ್ರಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರುವುದನ್ನು ತಿಳಿಸಿದರು.

ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್ (ಜಿಐಎ) ಅಡಿಯಲ್ಲಿ ಸುಗಮಗೊಳಿಸಲಾದ ಈ ಕಾರ್ಯಕ್ರಮವು ಬಾಹ್ಯಾಕಾಶ ಅನ್ವಯಿಕೆಗಳು, ಏರೋಸ್ಪೇಸ್ ತಂತ್ರಜ್ಞಾನಗಳು ಮತ್ತು ರಕ್ಷಣಾ ನಾವೀನ್ಯತೆಗಳಲ್ಲಿ ಸಹಯೋಗವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.

ಜಂಟಿ ಸಂಶೋಧನೆ, ಶೈಕ್ಷಣಿಕ ಸಂಪರ್ಕಗಳು ಮತ್ತು ಪ್ರತಿಭಾ ವಿನಿಮಯದಲ್ಲಿ ಭಾರತ - ಇಟಲಿ ಸಹಕಾರವನ್ನು ವೃದ್ಧಿಸುವುದು, ಮಾರುಕಟ್ಟೆ ಪ್ರವೇಶ, ಸಹ ಅಭಿವೃದ್ಧಿ, ಕೈಗಾರಿಕೆ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಅವಕಾಶಗಳನ್ನು ತೆರೆಯುವುದು ಹಾಗೂ ಬಾಹ್ಯಾಕಾಶ, ನಾವೀನ್ಯತೆ ಮತ್ತು ತಂತ್ರಜ್ಞಾನ ನೇತೃತ್ವದ ಬೆಳವಣಿಗೆಯಲ್ಲಿ ಕರ್ನಾಟಕವನ್ನು ಇಟಲಿಗೆ ಕಾರ್ಯತಂತ್ರದ ಪಾಲುದಾರರನ್ನಾಗಿ ಸ್ಥಾನೀಕರಿಸುವುದಕ್ಕೆ ಸಂಬಂಧಿಸಿದ ಪ್ರಮುಖ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಯಿತು.

ಈ ಭೇಟಿಯು ಭಾರತ - ಇಟಲಿಯ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಒಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುವುದಲ್ಲದೇ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ನಾವೀನ್ಯತೆಯಲ್ಲಿ ಜಾಗತಿಕ ಕೇಂದ್ರವಾಗಿ ಕರ್ನಾಟಕದ ಪಾತ್ರವನ್ನು ಬಲಪಡಿಸಲಿದೆ.

ನಿಯೋಗದಲ್ಲಿ ಇಟಾಲಿಯನ್ ಬಾಹ್ಯಾಕಾಶ ಸಂಸ್ಥೆಯ ಉಪ ನಿರ್ದೇಶಕರಾದ ಮಾರಿಯಾ ಚಿಯಾರಾ ನೊಟೊ, ನವದೆಹಲಿಯ ಇಟಲಿಯ ವ್ಯಾಪಾರ ಆಯುಕ್ತರಾದ ಆಂಟೋನಿಯೆಟ್ಟಾ ಬಕ್ಕನಾರಿ, ಬೆಂಗಳೂರಿನಲ್ಲಿನ ಇಟಲಿಯ ಕಾನ್ಸುಲ್ ಜನರಲ್ ಜಿಯಾಂಡೊಮೆನಿಕೊ ಮಿಲಾನೊ ಹಾಗೂ ಇಟಲಿಯ ಬಾಹ್ಯಾಕಾಶ ಕ್ಷೇತ್ರದ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದವು ಎಂದು ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ.ರಾಜೇಶ್ ಎನ್.ಎಲ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಕ್ ಪ್ರಧಾನಿ ಶಹಬಾದ್ ಷರೀಪ್ ಹೇಳಿಕೆ ಅಸಂಬದ್ಧ

**ನವದೆಹಲಿ:** ಭಾರತ-ಪಾಕಿಸ್ತಾನ ಯುದ್ಧ ನಿಲ್ಲಿಸಿದ್ದೇ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎನ್ನುವ ಪಾಕಿಸ್ತಾನ ಪ್ರಧಾನಿ ಶಹಬಾದ್ ಷರೀಪ್ ಅವರ ಹೇಳಿಕೆಯನ್ನು ಭಾರತ ತಳ್ಳಿಹಾಕಿದ್ದು ಯಾವುದೇ ನಾಟಕದಿಂದ ಸತ್ಯ ಮರೆಮಾಡಲು ಸಾಧ್ಯವಿಲ್ಲ. ಪಾಕಿಸ್ತಾನ ಪ್ರಧಾನಿ ಹೇಳಿಕೆ ಅಸಂಬದ್ಧತೆಯಿಂದ ಕೂಡಿ-ದೆ ಎಂದು ತಿರುಗೇಟು ನೀಡಿದೆ.




ಆಪರೇಷನ್ ಸಿಂಧೂರ ಕಾರ್ಯಾಚರಣೆ ಸಂದರ್ಭದಲ್ಲಿ ಕದನ ವಿರಾಮಕ್ಕೆ ಪಾಕಿಸ್ತಾನ ಸೇನಾ ಪಡೆ ಭಾರತಕ್ಕೆ ಮನವಿ ಸಲ್ಲಿಸಿತು. ಈ ಯುದ್ಧದಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವೆ ಯಾವುದೇ 3ನೇ ವ್ಯಕ್ತಿ ಪ್ರವೇಶವಾಗಿಲ್ಲ ಎಂದು ಭಾರತ ಮತ್ತೊಮ್ಮೆ ಸ್ಪಷ್ಟಪಡಿಸಿದೆ.

ಭಾರತ, ಪಾಕ್ ನಡುವಿನ ಸಮಸ್ಯೆಗಳನ್ನು ದ್ವಿಪಕ್ಷೀಯವಾಗಿ ಬಗೆಹರಿಸಿಕೊಳ್ಳಲು ದೀರ್ಘಕಾಲದಿಂದ ಎರಡು ರಾಷ್ಟ್ರಗಳು ಒಪ್ಪಿಕೊಂಡಿವೆ. ಯಾವುದೇ ಕಾರಣ-ಕ್ಕೂ ಈ ವಿಷಯದಲ್ಲಿ 3ನೇ ವ್ಯಕ್ತಿಗೆ ಅವಕಾಶವಿಲ್ಲ ಎಂದು ಭಾರತ ಸ್ಪಷ್ಟವಾಗಿ ಹೇಳಿದೆ. ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕತೆ ಪ್ರೋತ್ಸಾಹಿಸುತ್ತಿದೆ ಎನ್ನುವುದು ಜಗತ್ತಿಗೆ ಗೊತ್ತಿದೆ. ಹೀಗಿರುವಾಗ ಯಾವುದೇ ಪಾಕ್‌ನ ಕಪಟ ನಾಟಕ ಜಗತ್ತಿನ ಮುಂದೆ ನಡೆಯುವುದಿಲ್ಲ ಎಂದು ಭಾರತ ತಿರುಗೇಟು ನೀಡಿದೆ

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಮಾಡಿದ ಭಾಷಣಕ್ಕೆ ಭಾರತ ಖಾರವಾಗಿ ಪ್ರತಿಕ್ರಿಯೆ ನೀಡಿರುವ ಭಾರತೀಯ ರಾಜತಾಂತ್ರಿಕ ಪೆಟಲ್ ಗೆಹ್ಲೋಟ್, ಪಾಕಿಸ್ತಾನ ಪ್ರಧಾನಿ ಹೇಳಿಕೆಯನ್ನು ಕಟುವಾಗಿ ಟೀಕಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**